22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ


www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 83 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 23 2024 ಸೋಮವಾರ


## 10ನೇ ಕಾಮನ್ವೆಲ್ತ್ ನೂತನ ಸಂಸದೀಯ ಸಂಘದ ಭಾರತ ವಲಯದ ಕುರಿತು ಎರಡು ದಿನದ ಸಮ್ಮೇಳನ



ದೆಹಲಿಯ ನೂತನ ಸಂಸತ್ ಭವನದಲ್ಲಿ ಲೋಕಸಭಾಧ್ಯಕ್ಷ **ಓಂ ಬಿರ್ಲಾ** ಅವರು ಸೆಪ್ಟೆಂಬರ್ 23 ರಂದು, ಸೋಮವಾರ ಬೆಳಗ್ಗೆ 10ಗಂಟೆಗೆ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಈ ಸಮ್ಮೇಳನದಲ್ಲಿ ಕರ್ನಾಟಕದ ಪ್ರತಿನಿಧಿಗಳಾಗಿ **ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾಧ್ಯಕ್ಷ ಯು.ಟಿ.ಖಾದರ್** ಭಾಗವಹಿಸಲಿದ್ದಾರೆ. ಹೊರಟ್ಟಿಯವರು **"ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಸಾಧಿಸುವಲ್ಲಿ ಶಾಸನಸಭೆಗಳ ಪಾತ್ರ"** ಹಾಗೂ ಖಾದರ್ ಅವರು **"ಸಂಸದೀಯ ವ್ಯವಸ್ಥೆಯಲ್ಲಿ ಕೌಶಲ್ಯ ಅಭಿವೃದ್ಧಿ ಪಡಿಸಲು ಶಾಸಕಾಂಗ ಪಾತ್ರ"** ಕುರಿತು ವಿಚಾರ ಮಂಡಿಸಲಿದ್ದಾರೆ.



**ಬಸವರಾಜ ಹೊರಟ್ಟಿ**
ಸಭಾಪತಿಗಳು
ಕರ್ನಾಟಕ ವಿಧಾನ ಪರಿಷತ್ತು





**ಯು.ಟಿ. ಖಾದರ್**
ಸಭಾಧ್ಯಕ್ಷರು
ಕರ್ನಾಟಕ ವಿಧಾನಸಭೆ



**ಪ್ರಾಣೇಶ್**
ಉಪಸಭಾಪತಿಗಳು
ಕರ್ನಾಟಕ ವಿಧಾನ ಪರಿಷತ್ತು



**ರುದ್ರಪ್ಪ ಲಮಾಣಿ**
ಉಪಸಭಾಧ್ಯಕ್ಷರು
ಕರ್ನಾಟಕ ವಿಧಾನಸಭೆ

ಕರ್ನಾಟಕ ರಾಜ್ಯದ ಪ್ರತಿನಿಧಿಗಳಾಗಿ ಸಮ್ಮೇಳನದಲ್ಲಿ ಭಾಗವಹಿಸುತ್ತಿರುವ ಗಣ್ಯರಿಗೆ

**ಹಾರ್ದಿಕ ಸುಸ್ವಾಗತ ಕೋರುವ, "ದೆಹಲಿ ವಾರ್ತೆ" ಪತ್ರಿಕೆ ಬಳಗ, ನವದೆಹಲಿ.**

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಸೆಪ್ಟೆಂಬರ್ 23 , 2024, ಸೋಮವಾರ

## ಒಳಪುಟಗಳಲ್ಲಿ


ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ಮೋದಿ ಸರ್ಕಾರದ ಕೊಡುಗೆ ಅಪಾರ: ಎಚ್.ಡಿ.ಕೆ- ಪು.4

ಬೆಸ್ಕಾಂ ಬಿಲ್‌ನಲ್ಲಿ ಆಸ್ತಿಗಳ ಗುರುತಿನ ಸಂಖ್ಯೆ ನಮೂದು: ತುಷಾರ್ ಗಿರಿನಾಥ - ಪು.5

ವಿಜಯಪುರ ಸೈನಿಕ ಶಾಲೆಯಲ್ಲಿ ನೌಕಾಪಡೆಯ ಹೆಲಿಕಾಪ್ಟರ್ ಸ್ಥಾಪನೆ - ಪು.6

ಕಾಶ್ಮೀರದಿಂದ ಕರ್ನಾಟಕಕ್ಕೆ ಬರುತ್ತಿದ್ದ ವಿಶೇಷ ಸೇನಾ ರೈಲು ಸ್ಫೋಟಕ್ಕೆ ಯತ್ನ - ಪು.7


# ಮೋದಿ ದ್ವಿಪಕ್ಷೀಯ ಮಾತುಕತೆ: ಎಂ.ಕ್ಯು-9ಬಿ ಡ್ರೋನ್ ಖರೀದಿ, ರಕ್ಷಣಾ ವಿಚಾರಗಳ ಚರ್ಚೆ

**ವಾಷಿಂಗ್ಟನ್, ಸೆ.22:** ಸದ್ಯ ಅಮೆರಿಕ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಕ್ವಾಡ್ ಶೃಂಗಸಭೆಯಲ್ಲಿ ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಮತ್ತು ಜಪಾನ್‌ನ ಪ್ರಧಾನಿ ಫುಮಿಯೊ ಕಿಶಿಡಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದ್ದಾರೆ. ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿಯನ್ನೂ ಹಂಚಿಕೊಂಡಿದ್ದಾರೆ.



ದ್ವಿಪಕ್ಷೀಯ ಮಾತುಕತೆಯಲ್ಲಿ ಉಭಯ ರಾಷ್ಟ್ರಗಳೊಂದಿಗೆ ಪರಸ್ಪರ ಹಿತಾಸಕ್ತಿಯ ಕ್ಷೇತ್ರಗಳಲ್ಲಿ ಅಮೆರಿಕ-ಭಾರತದ ದ್ವಿಪಕ್ಷೀಯ ಪಾಲುದಾರಿಕೆಯನ್ನು ಸುಧಾರಿಸುವ ಬಗ್ಗೆ ಚರ್ಚಿಸಿದ್ದಾರೆ. ಜೊತೆಗೆ ಇಂಡೋ-ಪೆಸಿಫಿಕ್ ಗಡಿ ಭಾಗದ ಬಗ್ಗೆಯೂ ಉಭಯ ನಾಯಕರು ತಮ್ಮ ಅಭಿಪ್ರಾಯಗಳನ್ನ ಹಂಚಿಕೊಂಡಿದ್ದಾರೆ.

ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ ಮೋದಿ ವಿಸ್ತೃತ ಚರ್ಚೆ ನಡೆಸಿದ್ದಾರೆ. ವ್ಯಾಪಾರ, ಭದ್ರತೆ, ಬಾಹ್ಯಾಕಾಶ ಮತ್ತು ಸಂಸ್ಕೃತಿಯಂತಹ ಕ್ಷೇತ್ರಗಳಲ್ಲಿ ಇನ್ನಷ್ಟು ಗತಿ ಪಡೆಯಲು ಪರಿಶ್ರಮಿಸುತ್ತೇವೆ. ಆಸ್ಟ್ರೇಲಿಯಾದೊಂದಿಗಿನ ಬಾಂಧವ್ಯವನ್ನು ಭಾರತ ಸದಾ ಗೌರವಿಸುತ್ತದೆ ಎಂದು ಇದೇ ವೇಳೆ ಮೋದಿ ಹೇಳಿದ್ದಾರೆ.

ಮಗದೊಂದು ಪೋಸ್ಟ್‌ನಲ್ಲಿ ಜಪಾನ್ ಪ್ರಧಾನಿ ಫುಮಿಯೊ ಕಿಶಿಡಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿರುವುದು ಕಂಡುಬಂದಿದೆ. ಮೂಲಸೌಕರ್ಯ, ಸೆಮಿಕಂಡಕ್ಟರ್, ರಕ್ಷಣಾ ವಲಯ, ಗ್ರೀನ್ ಎನರ್ಜಿ ಮತ್ತು ಇತರೆ ವಿಷಯಗಳಲ್ಲಿ ಉಭಯ ದೇಶಗಳ ಸಹಕಾರದ ಕುರಿತು ಚರ್ಚಿಸಲಾಯಿತು. ಭಾರತ-ಜಪಾನ್ ನಡುವಣ ಗಟ್ಟಿ ಬಾಂಧವ್ಯವು ಜಾಗತಿಕ ಏಳಿಗೆಗೆ ಪೂರಕವಾಗಿದೆ ಎಂದು ಅವರು ಉಲ್ಲೇಖಿಸಿದ್ದಾರೆ.

ಕ್ವಾಡ್ ಶೃಂಗದಲ್ಲಿ ಭಾಗಿಯಾಗಲು ಶನಿವಾರವಷ್ಟೇ ಪ್ರಧಾನಿ ಮೋದಿ ಅಮೆರಿಕಕ್ಕೆ ಭೇಟಿ ನೀಡಿದ್ದರು. ಅಮೆರಿಕದ ಅಧ್ಯಕ್ಷ ಜೋ ಬೈಡನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಡೆಲವೇರ್‌ನ ವಿಲ್ಮಿಂಗ್‌ಟನ್‌ನಲ್ಲಿರುವ ಬೈಡನ್ ಅವರ ನಿವಾಸದಲ್ಲಿ ಉಭಯ ನಾಯಕರು ಭಾರತ-ಅಮೆರಿಕ ಬಾಂಧವ್ಯವನ್ನು ಇನ್ನಷ್ಟು ಗಟ್ಟಿಗೊಳಿಸುವ ಸಂಬಂಧ ಚರ್ಚಿಸಿದ್ದರು.

ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕದ ಡೆಲವೇರ್ ರಾಜ್ಯದಲ್ಲಿರುವ ಅಮೆರಿಕದ ಅಧ್ಯಕ್ಷ ಜೋ ಬಿಡನ್ ಅವರ ನಿವಾಸದಲ್ಲಿ ಕ್ವಾಡ್ ಶೃಂಗಸಭೆಯ ಸಂದರ್ಭದಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ **MQ-9B** ಸ್ಕೈ ಗಾರ್ಡಿಯನ್ ಮತ್ತು ಸೀ ಗಾರ್ಡಿಯನ್ ಡ್ರೋನ್ ಒಪ್ಪಂದ ಮತ್ತು ಕೋಲ್ಕತ್ತಾದಲ್ಲಿ ಸೆಮಿಕಂಡಕ್ಟರ್ ಪ್ಲಾಂಟ್ ಸ್ಥಾಪನೆ ಸೇರಿದಂತೆ ಹಲವು ವಿಷಯಗಳನ್ನು ನಾಯಕರು ಚರ್ಚಿಸಿದ್ದಾರೆ. ಭಾರತದ ಸಶಸ್ತ್ರ ಪಡೆಗಳ ಗುಪ್ತಚರ, ಕಣ್ಗಾವಲು ಮತ್ತು ವಿಚಕ್ಷಣ **(ISR)**ಸಾಮರ್ಥ್ಯಗಳನ್ನು ಹೆಚ್ಚಿಸುವ 31 ಜನರಲ್ ಅಟಾಮಿಕ್ಸ್ **MQ-9B** (16ಸ್ಕೈ ಗಾರ್ಡಿಯನ್ ಮತ್ತು 15 ಸೀ ಗಾರ್ಡಿಯನ್) ಡ್ರೋನ್‌ಗಳ ಖರೀದಿ ಬಗ್ಗೆ ಮಾತುಕತೆ ನಡೆಸಿದ್ದಾರೆ. ಇದಕ್ಕೆ ಬೈಡನ್ ಅವರಿಂದ ಗ್ರೀನ್ ಸಿಗ್ನಲ್ ಸಹ ಸಿಕ್ಕಿದೆ ಎನ್ನಲಾಗಿದೆ, ಅಧಿಕೃತ ಮಾಹಿತಿ ಇನ್ನಷ್ಟೇ ಹೊರಬೀಳಬೇಕಿದೆ.

### ತುಂಗಭದ್ರಾ ಜಲಾಶಯದಿಂದ ರಾಜ್ಯದ 9,26,438 ಎಕರೆಗೆ, ಆಂಧ್ರಪ್ರದೇಶದ 625097 ಎಕರೆ, ತೆಲಂಗಾಣದ 87,000 ಎಕರೆಗೆ ನೀರಾವರಿ ಸೌಲಭ್ಯ

# ಎರಡನೇ ಬಾರಿ ಜಲಾಶಯ ತುಂಬಿದ್ದಕ್ಕೆ ಸಿಎಂ ಸಿದ್ದರಾಮಯ್ಯ ಸಂತಸ

### ಒಂದೇ ವಾರದಲ್ಲಿ ಗೇಟ್ ಅಳವಡಿಸಿ 20 ಟಿಎಂಸಿ ನೀರು ಉಳಿಸಿದ ತಜ್ಞರಿಗೆ ರೈತರ ಪರವಾಗಿ ಧನ್ಯವಾದ - 2ನೇ ಬೆಳೆಗೂ ನೀರು ಸಿಗತ್ತೆ: ರೈತ ಕುಲಕ್ಕೆ ಸಿಎಂ ಭರವಸೆ

**ಹೊಸಪೇಟೆ, ಸೆ.22:** ಒಂದೇ ವಾರದಲ್ಲಿ ತುಂಗಭದ್ರಾ ಜಲಾಶಯಕ್ಕೆ ಗೇಟ್ ಅಳವಡಿಸಿ 20 ಟಿಎಂಸಿ ನೀರು ಉಳಿಸಿದ ತಜ್ಞರಿಗೆ ರೈತರ ಪರವಾಗಿ ಧನ್ಯವಾದ ಅರ್ಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಎರಡನೇ ಬೆಳೆಗೂ ನೀರು ಸಿಗತ್ತದೆ ಎಂದು ರೈತ ಕುಲಕ್ಕೆ ಭರವಸೆ ನೀಡಿದರು.

ಮೈತುಂಬಿಕೊಂಡಿರುವ ತುಂಗಭದ್ರಾ ಅಣೆಕಟ್ಟೆಗೆ ಬಾಗಿನ ಅರ್ಪಿಸಿ, ಕೊಚ್ಚಿ ಹೋಗಿದ್ದ ಕ್ರೆಸ್ಟ್‌ಗೇಟನ್ನು ಅತ್ಯಂತ ತುರ್ತಾಗಿ ಅಳವಡಿಸಿದ ಎಂಜಿನಿಯರ್ ಮತ್ತು ಸಿಬ್ಬಂದಿಗೆ ಪ್ರಶಂಸಾ ಪತ್ರ ನೀಡಿ ಸನ್ಮಾನಿಸಿ ಮಾತನಾಡಿದರು. ಗೇಟ್ ಮುರಿದಾಗ ನನ್ನ ರೈತರು ಆತಂಕದಲ್ಲಿದ್ದರು. ಜಲ ಸಂಪನ್ಮೂಲ ಸಚಿವರು ಮತ್ತು ನಾನು ಚರ್ಚಿಸಿ ತುರ್ತಿನ ಕ್ರಮಕ್ಕೆ ಮುಂದಾದೆವು. ನಮ್ಮ ಸೂಚನೆಯಂತೆ ಒಂದೇ ವಾರದಲ್ಲಿ ಗೇಟ್ ಅಳವಡಿಸಿ 20 ಟಿಎಂಸಿ ನೀರನ್ನು ಉಳಿಸಿದ ತಜ್ಞ ಕನ್ನಯ್ಯ ನಾಯ್ಡು ಮತ್ತು ಎಂಜಿನಿಯರ್ ಸಿಬ್ಬಂದಿಗೆ ಸರ್ಕಾರ ಮತ್ತು ರೈತರ ಪರವಾಗಿ ಮುಖ್ಯಮಂತ್ರಿಗಳು ಧನ್ಯವಾದ ಅರ್ಪಿಸಿದರು.

ಕರ್ನಾಟಕಕ್ಕೆ ಎಡ ಮತ್ತು ಬಲ ದಂಡೆ ಸೇರಿ 9,26,438 ಎಕರೆಗೆ, ಆಂದ್ರಪ್ರದೇಶದ 625097 ಎಕರೆ, ತೆಲಂಗಾಣದ 87,000 ಎಕರೆಗೆ ನೀರಾವರಿ ಸೌಲಭ್ಯ ಕಲ್ಪಿಸುವ ತುಂಗಭದ್ರಾ ಅಣೆಕಟ್ಟು ಎರಡನೇ ಬಾರಿ ತುಂಬಿರುವುದಕ್ಕೆ ಸಂತಸ ವ್ಯಕ್ತಪಡಿಸಿದ ಸಿಎಂ ಎರಡನೇ ಬೆಳೆಗೂ ರೈತರಿಗೆ ನೀರು ಸಿಗಲಿದೆ ಎಂದು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ವಿರೋಧ ಪಕ್ಷದ ಮಾತುಗಳಿಗೆ ಕಿವಿಕೊಡಬೇಡಿ. ಮೊದಲು ದಿನಕ್ಕೊಂದು ಸುಳ್ಳು ಹೇಳುತ್ತಿದ್ದ **BJP** ಈಗ ಗಳಿಗೆಗೊಂದು ಸುಳ್ಳು ಹೇಳಿ ಜನರ ದಿಕ್ಕು ತಪ್ಪಿಸುತ್ತಿದೆ. ಃಏಕ ನಿಮ್ಮನ್ನು ಯಾಮಾರಿಸಿ ದಿಕ್ಕು ತಪ್ಪಿಸಲು ಸಾಧ್ಯವಿಲ್ಲ ಎನ್ನುವ ನಂಬಿಕೆ. ಏಕೆಂದರೆ ಕೊಪ್ಪಳ, ಬಳ್ಳಾರಿ, ವಿಜಯನಗರದ ಜನತೆ ಏನು ಅಂತ ನನ್ನ ಹೃದಯಕ್ಕೆ ಚನ್ನಾಗಿ ಗೊತ್ತು. ಬಿಜೆಪಿ ಮಾತನ್ನು ನಂಬಬೇಡಿ. ಎರಡೂ ಬೆಳೆಗೂ ನೀರು ಕೊಡುತ್ತೇವೆ ಎಂದು ಪುನರುಚ್ಚರಿಸಿದರು. ಕಲ್ಯಾಣ ಕರ್ನಾಟಕದ ಎಲ್ಲಾ ಲೋಕಸಭಾ ಸ್ಥಾನಗಳನ್ನು ಕಾಂಗ್ರೆಸ್‌ಗೆ ಕೊಟ್ಟಿದ್ದೀರಿ. ನಾವು ಕಲ್ಯಾಣ ಕರ್ನಾಟಕದಲ್ಲಿ ವಿಶೇಷ ಕ್ಯಾಬಿನೆಟ್ ನಡೆಸಿ 46 ವಿಷಯಗಳನ್ನು, ಕಾರ್ಯಕ್ರಮಗಳನ್ನು ಕಲ್ಯಾಣ ಕರ್ನಾಟಕದ ಅಭಿವದ್ಧಿಗಾಗಿ ಘೋಷಿಸಿದ್ದೇವೆ ಎಂದರು.

ಕಲ್ಯಾಣ ಕರ್ನಾಟಕಕ್ಕೆ 371ಎ ಜಾರಿ ಮಾಡಲು ಕೇಂದ್ರದಲ್ಲಿದ್ದ ಬಿಜೆಪಿ ಸರ್ಕಾರ ವಿರೋಧಿಸಿತ್ತು. ಆದರೆ ಮನಮೋಹನ್ ಸಿಂಗ್ ಅವರು ಪ್ರಧಾನಿ ಆಗಿದ್ದಾಗ ಸೋನಿಯಾಗಾಂಧಿ, ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರ ಪರಿಣಾಮದಿಂದ 371 ಜೆ ಜಾರಿಯಾಯಿತು ಎಂದರು.



ಜಲ ಸಂಪನ್ಮೂಲ ಸಚಿವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ, ಸಚಿವರಾದ ಬೋಸ್ ರಾಜ್, ಶರಣಪ್ರಕಾಶ್ ಪಾಟೀಲ್, ಕೊಪ್ಪಳ ಸಂಸದ ರಾಜಶೇಖರ್ ಹಿಟ್ನಾಳ್, ಬಳ್ಳಾರಿ ಸಂಸದ ಈ. ತುಕಾರಾಮ್ ಹಾಗೂ ಎರಡೂ ಜಿಲ್ಲೆಗಳ ಶಾಸಕರು, ಜಲ ಸಂಪನ್ಮೂಲ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು.

ಪ್ರಾದೇಶಿಕ ಅಸಮಾಮತೆ ಅಧ್ಯಯನಕ್ಕೆ ಗೋವಿಂದರಾವ್ ಅವರ ಸಮಿತಿ ರಚಿಸಿದ್ದೇವೆ. ಸಮಿತಿ ವರದಿ ನೀಡುತ್ತಿದ್ದಂತೆ ಉತ್ತರ ಕರ್ನಾಟಕ ಮತ್ತು ಹೈದರಾಬಾದ್ ಕರ್ನಾಟಕದ ಅಭಿವೃದ್ಧಿಗೆ ಹೊಸ ನೀಲನಕ್ಷೆ ರಚಿಸುತ್ತೇವೆ. ಈಗಾಗಲೇ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ನಮ್ಮ ಸರ್ಕಾರ 5000 ಕೋಟಿ ಘೋಷಿಸಿ ಆಗಿದೆ. ಕೇಂದ್ರ ಸರ್ಕಾರ ಕೂಡ 5000 ಕೋಟಿ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ್ದೇವೆ. ಕೇಂದ್ರ ಕೊಡುತ್ತೋ ಇಲ್ವೋ ನೀವೇ ನೋಡಿ ಎಂದರು.

### ಕೊಟ್ಟ ಭರವಸೆ ಈಡೇರಿದ ಸಂಭ್ರಮ

ಅಣೆಕಟ್ಟೆಯ 19ನೇ ಕ್ರೆಸ್ಟ್ ಗೇಟ್ ಕೊಚ್ಚಿಕೊಂಡು ಹೋಗಿ ಅಪಾರ ಪ್ರಮಾಣದ ನೀರು ಹರಿದು ಹೋಗಿದ್ದನ್ನು ಪರಿಶೀಲಿಸಲು ಆಗಸ್ಟ್ 13 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಣೆಕಟ್ಟೆಗೆ ಆಗಮಿಸಿದ್ದರು. ತುಂಗಭದ್ರಾ ಅಣೆಕಟ್ಟು ಮತ್ತೆ ಮೈ ತುಂಬಿಕೊಳ್ಳುತ್ತದೆ. ಆಗ ನಾನೇ ಬಂದು ಬಾಗಿನ ಅರ್ಪಿಸುತ್ತೇನೆ ಎಂದು ಆಗಸ್ಟ್ 13 ರಂದು ಹೇಳಿದ್ದರು. ಮುಖ್ಯಮಂತ್ರಿಗಳ ಮಾತು ಮತ್ತು ಆಶಯ ಈಡೇರಿದ ಸಂಭ್ರಮದ ಕ್ಷಣಕ್ಕೆ ಇಡೀ ರಾಜ್ಯ ಇಂದು ಸಾಕ್ಷಿಯಾಯಿತು.

ತುಂಗಭದ್ರಾ ಜಲಾಶಯ ಭರ್ತಿಯಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಜಲಾಶಯಕ್ಕೆ ಬಾಗಿನ ಅರ್ಪಿಸಿದರು.19ನೇ ಗೇಟ್ ಕಳಚಿದ ಹಿನ್ನೆಲೆಯಲ್ಲಿ ತಡವಾಗಿದ್ದ ಬಾಗಿನ ಅರ್ಪಣೆ ಕಾರ್ಯಕ್ರಮ, ಎರಡನೇ ಭಾರಿ ಸಂಪೂರ್ಣ ಭರ್ತಿಗಿದ ಬೆನ್ನಲ್ಲೇ ಜಲಾಶಯ ಆಗಮಿಸಿ ಸಿಎಂ ತುಂಗಭದ್ರೆಗೆ ಕಳಶದ ನೀರು ಸಮರ್ಪಣೆ ಮಾಡಿ.ಬಳಿಕ ಬಾಗಿನ ಅರ್ಪಣೆ ಮಾಡಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಜತೆಗೆ ಜಲಾಶಯಕ್ಕೆ ಬಾಗಿನ ಅರ್ಪಿಸಿದರು. ಮತ್ತೆ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಿಂದ ಜಲಾಶಯ ಈ ವರ್ಷ ಎರಡನೇ ಬಾರಿ ತುಂಬಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಅವರು ಇದೀಗ ಬಾಗಿನ ಅರ್ಪಿಸಿದ್ದಾರೆ. ಡಿಸಿಎಂ ಡಿ. ಕೆ.ಶಿವಕುಮಾರ್, ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ, ಸಚಿವರಾದ ಬೋಸರಾಜು, ಶರಣಪ್ರಕಾಶ್ ಪಾಟೀಲ್, ಸಂಸದರಾದ ಈ.ತುಕಾರಾಮ್ ರಾಜಶೇಖರ್ ಹಿಟ್ನಾಳ್, ಹಾಗೂ ಗೇಟ್ ದುರಸ್ತಿ ಕಾರ್ಯ ನಡೆಸಿದ.

## ಯುವ ಕಾಂಗ್ರೆಸ್‌ಗೆ ಉದಯಭಾನು ಚಿಬ್ ನೂತನ ಸಾರಥಿ



**ನವದೆಹಲಿ, ಸೆ.22:** ಯುವ ಕಾಂಗ್ರೆಸ್‌ನ ನೂತನ ರಾಷ್ಟ್ರೀಯ ಅಧ್ಯಕ್ಷರಾಗಿ ಉದಯಭಾನು ಚಿಬ್ ಅವರನ್ನು ನೇಮಕ ಮಾಡಲಾಗಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಐದು ವರ್ಷಗಳ ಕಾಲ ಅಧ್ಯಕ್ಷರಾಗಿದ್ದ ಬಿ.ವಿ ಶ್ರೀನಿವಾಸ್ ಕೊಡುಗೆಗೆ ಖರ್ಗೆ ಧನ್ಯವಾದ ಹೇಳಿದ್ದಾರೆ. ಉದಯಭಾನು ಚಿಬ್ ಜಮ್ಮು ಮತ್ತು ಕಾಶ್ಮೀರ ಯುವ ಕಾಂಗ್ರೆಸ್‌ನ ಮಾಜಿ ರಾಜ್ಯಾಧ್ಯಕ್ಷರೂ ಆಗಿದ್ದರು. ಸದ್ಯ ಅವರು ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡುತ್ತಿದ್ದಾರೆ. ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆ ನಡೆಯುತ್ತಿರುವ ಸಂದರ್ಭದಲ್ಲಿ ಉದಯ್ ಭಾನು ಅವರ ನೇಮಕವಾಗಿದೆ. ಅವರು ಜಮ್ಮು ಮತ್ತು ಕಾಶ್ಮೀರದಲ್ಲಿ ಕಾಂಗ್ರೆಸ್ನ ಚುನಾವಣಾ ಪ್ರಣಾಳಿಕೆ ಸಮಿತಿಯ ಸದಸ್ಯರೂ ಆಗಿದ್ದಾರೆ. ಕರ್ನಾಟಕ ಮೂಲದ ಬಿ.ವಿ ಶ್ರೀನಿವಾಸ್ 2018 ರಲ್ಲಿ ರಾಷ್ಟ್ರೀಯ ಯುವ ಕಾಂಗ್ರೆಸ್ ಉಪಾಧ್ಯಕ್ಷರಾಗಿದ್ದರು. ಜುಲೈ 2019 ರಲ್ಲಿ ಕೇಶವ್‌ಚಂದ್ ಯಾದವ್ ಅವರು ಲೋಕಸಭಾ ಚುನಾವಣೆ ಸ್ಪರ್ಧೆಯ ನಂತರ ಶ್ರೀನಿವಾಸ್ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಯಿತು.

ಶ್ರೀನಿವಾಸ್ ಅಧಿಕಾರವಧಿಯಲ್ಲಿ ಸಾಕಷ್ಟು ಮಹತ್ವಪೂರ್ಣ ಕಾರ್ಯಗಳನ್ನು ಮಾಡಿ ಯುವ ಕಾಂಗ್ರೆಸ್ ಸಂಘಟನೆಯಲ್ಲಿ ಹೊಸ ಚೈತನ್ಯ ಮೂಡಿಸಿದ್ದರು. ಅವರ ನೇತೃತ್ವದಲ್ಲಿ ಸೆಪ್ಟೆಂಬರ್ 17 ರಂದು ನರೇಂದ್ರ ಮೋದಿಯವರ ಜನ್ಮದಿನವನ್ನು IYC 'ರಾಷ್ಟ್ರೀಯ ನಿರುದ್ಯೋಗ ದಿನ'ವನ್ನು ಆಚರಿಸಿತ್ತು. ಕೊರೊನಾ ಮೊದಲ ಅಲೆಯಲ್ಲಿ ಬಿ.ವಿ ಶ್ರೀನಿವಾಸ್ ಅವರು ಉತ್ತರ ಪ್ರದೇಶ ಮತ್ತು ಬಿಹಾರದಿಂದ ವಲಸೆ ಕಾರ್ಮಿಕರಿಗೆ ಶ್ರಮಿಕ್ ವಿಶೇಷ ರೈಲುಗಳನ್ನು ಬಳಸಿಕೊಂಡು ಮನೆಗೆ ಮರಳಲು ಸಹಾಯ ಮಾಡಲು ಸೌಲಭ್ಯಗಳ ವ್ಯವಸ್ಥೆ ಮಾಡಿದರು. ಎರಡನೇ ತರಂಗದ ಸಮಯದಲ್ಲಿ ಅವರು ಅಗತ್ಯ ಔಷಧಗಳು ಮತ್ತು ಆಮ್ಲಜನಕದ ತುರ್ತು ಪೂರೈಕೆಯನ್ನು ಒದಗಿಸಿದರು ಈ ಸಮಯದಲ್ಲಿ ಅವರು 'ಆಕ್ಸಿಜನ್ ಮ್ಯಾನ್' ಎಂದು ಖ್ಯಾತರಾಗಿದ್ದರು

ಅಔಗಿಖಆ-19 ಪರಿಹಾರಕ್ಕಾಗಿ ದೆಹಲಿಯಲ್ಲಿ 1000 ಭಾರತೀಯ ಯುವ ಕಾಂಗ್ರೆಸ್ ಸ್ವಯಂಸೇವಕರ ಗುಂಪನ್ನು ಸಂಯೋಜಿಸಿದರು. ನ್ಯೂಜಿಲೆಂಡ್ ಮತ್ತು ಫಿಲಿಪೈನ್ಸ್ನ ರಾಜತಾಂತ್ರಿಕ ಮಿಷನ್ (ರಾಯಭಾರ ಕಚೇರಿಗಳು) ಅಔಗಿಖಆ -19 ಸಹಾಯಕ್ಕರ ಶ್ರೀನಿವಾಸ್ ಅವರಿಗೆ ಮನವಿ ಮಾಡಿದ್ದು ಗಮನಾರ್ಹ ಬೆಳವಣಿಯಾಗಿತ್ತು.

# ನವರಾತ್ರಿಯೊಳಗೆ ಸಾಂಕೇತಿಕವಾಗಿ ಕಾವೇರಿ ಆರತಿ; ಚಲುವರಾಯಸ್ವಾಮಿ ಇಂಗಿತ

**ಬೆಂಗಳೂರು, ಸೆ.22:** ಗಂಗಾರತಿ ಮಾದರಿಯಲ್ಲಿಯೇ ಕರ್ನಾಟಕದಲ್ಲಿ ಕಾವೇರಿ ಆರತಿ ಮಾಡಲು ಮುಂದಾಗಿರುವ ರಾಜ್ಯ ಸರಕಾರ ಈ ಸಂಬಂಧ ಪರಿಶೀಲನೆ ನಡೆಸಲು ಮತ್ತೊಂದು ನಿಯೋಗದ ಭೇಟಿ ಅಗತ್ಯವಿದ್ದು, ಶೀಘ್ರದಲ್ಲಿಯೇ ಮತ್ತೊಮ್ಮೆ ಅಧಿಕಾರಿಗಳು ಭೇಟಿ ನೀಡಲು ತೀರ್ಮಾನಿಸಿದ್ದಾರೆ. ಮಂಡ್ಯ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ನೇತೃತ್ವದಲ್ಲಿ ಮಂಡ್ಯ, ಮೈಸೂರು ಭಾಗದ ಶಾಸಕರು, ವಿಧಾನಪರಿಷತ್ ಸದಸ್ಯರು, ಕಾವೇರಿ ಅಭಿವೃದ್ಧಿ ನಿಗಮದ ಹಿರಿಯ ಅಧಿಕಾರಿಗಳು ಮೂರು ದಿನಗಳ ಕಾಲ ಹರಿದ್ವಾರ ಹಾಗೂ ಕಾಶಿಗೆ ಭೇಟಿ ನೀಡಿ ಅಧ್ಯಯನ ನಡೆಸಿತು. ರಾಜ್ಯದಲ್ಲಿ ಕಾವೇರಿ ಆರತಿ ನಡೆಸುವ ಬಗ್ಗೆ ಇನ್ನೆರಡು ದಿನಗಳಲ್ಲಿ ಸರ್ಕಾರಕ್ಕೆ ಕಾವೇರಿ ನೀರಾವರಿ ನಿಗಮದ ಮೂಲಕ ಅಧ್ಯಯನ ವರದಿ ನೀಡಲಾಗುವುದು, ವಾರಾಣಾಸಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾವೇರಿ ಆರತಿ ಮಾಡುವ ಬಗ್ಗೆ ಹರಿದ್ವಾರ ಮತ್ತು ವಾರಾಣಸಿಯಲ್ಲಿ ಅಧ್ಯಯನ ಮಾಡಲಾಯಿತು, ಎರಡು ಕಡೆಗೂ ಭಿನ್ನ ಅನುಭವವಾಗಿದೆ. ಹರಿದ್ವಾರದಲ್ಲಿ ಗಂಗಾ ಮಾ ಸಭಾ ಟ್ರಸ್ಟ್ ಮೂಲಕ ಆರತಿ ಮಾಡಿಕೊಂಡು ಬರಲಾಗುತ್ತಿದ್ದು ಇದಕ್ಕೆ ನೂರು ವರ್ಷಗಳ ಇತಿಹಾಸವಿದೆ, ವಾರಾಣಾಸಿಯಲ್ಲಿ 35 ವರ್ಷಕ್ಕೂ ಹೆಚ್ಚಿನ ಇತಿಹಾಸವಿದೆ. ಗಂಗಾನದಿ ಉತ್ತರ ಭಾರತದ ಪ್ರಮುಖ ನದಿ ಪ್ರವಾಹ ಬಂದು ಜನರು ಸಾವನ್ನಪ್ಪುತ್ತಿದ್ದ ಸಂದರ್ಭದಲ್ಲಿ ಅದು ನಿಯಂತ್ರಣಕ್ಕೆ ಬರಲಿ ಎಂದು ಗಂಗಾಮಾತೆಗೆ ಆರತಿ ಶುರು ಮಾಡಿದೆ ಪ್ರತೀತಿ ಇದೆ. ಅದೇ ರೀತಿ ರಾಜ್ಯದಲ್ಲಿ ಒಳ್ಳೆ ಮಳೆಯಾಗಲಿ, ನದಿ ಸಮಸ್ಯೆ ಇತ್ಯರ್ಥ ವಾಗಲಿ, ಜನರ ಬದುಕು ಸಮೃದ್ಧವಾಗಿರಲಿ ಎಂದು ನಾವು ಕಾವೇರಿ ಆರತಿ ಮಾಡಲಿದ್ದೇವೆ ಎಂದರು. ಆರತಿ ಎಲ್ಲಿ ಮಾಡಬೇಕು, ಹೇಗೆ ಮಾಡಬೇಕು ಎನ್ನುವ ಬಗ್ಗೆ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ ಶಿವಕುಮಾರ್ ಜೊತೆಗೆ ಚರ್ಚಿಸಿ ನಿರ್ಧಾರ ಮಾಡುತ್ತೇವೆ, ಸದ್ಯ ಕಾವೇರಿ ಉಗಮ ಸ್ಥಾನ ಭಾಗಮಂಡಲ ಅಥಾವ ಶ್ರೀರಂಗಪಟ್ಟಣದಲ್ಲಿ ಮಾಡಬೇಕು ಎನ್ನುವ ಚಿಂತನೆ ಇದೆ ಈ ಬಗ್ಗೆ ಅಂತಿಮ ನಿರ್ಧಾರ ಮಾಡಿಲ್ಲ ಎಂದರು. ನಮ್ಮ ಅಧ್ಯಯನ ಬಳಿಕ ಇನ್ನಷ್ಟು ಹೆಚ್ಚುವರಿ ಮಾಹಿತಿ ಬೇಕು ಅನಿಸಿದರೆ ಇನ್ನೊಂದು ಹಂತದಲ್ಲಿ ಅಧಿಕಾರಿಗಳನ್ನು ಕಳುಹುಸಿ ಇನ್ನು ಹೆಚ್ಚಿನ ಮಾಹಿತಿ ಪಡೆಯಲಿದ್ದೇವೆ. ಕಾವೇರಿ ಆರತಿಯನ್ನು ಆರಂಭಿಸಿದ ಮೇಲೆ ನಿಲ್ಲಿಸಬಾರದು, ಯಾವುದೇ ಸರ್ಕಾರ ಬಂದರೂ ಇದನ್ನ ಮುಂದುವರಿಸಿಕೊಂಡು ಹೋಗಬೇಕು,



ಅದಕ್ಕಾಗಿ ಇನ್ನಷ್ಟು ಪರಿಶೀಲನೆ ಮಾಡಲಾಗುವುದು ಬಳಿಕ ಸೂಕ್ತ ತೀರ್ಮಾನ ಬೆಂಗಳೂರಿನಲ್ಲಿ ತಿರ್ಮಾನ ಮಾಡುತ್ತೇವೆ ಎಂದರು.

ದಸರಾ, ನವರಾತ್ರಿಯೊಳಗೆ ಮಾಡಬೇಕು ಎನ್ನುವುದು ನಮ್ಮ ಆಸೆ ವ್ಯವಸ್ಥಿತವಾಗಿ ಮಾಡುವುದು ಕಷ್ಟವಾಗಬಹುದು ಹೀಗಾಗಿ ಈ ವರ್ಷ ಸಾಂಕೇತಿಕವಾಗಿ ಮಾಡುವ ಬಗ್ಗೆ ಚಿಂತಿಸಲಾಗುವುದು, ಹರಿದ್ವಾರ, ಕಾಶಿಯಿಂದ ಪಂಡಿತರಿಗೆ ಆಹ್ವಾನ ನೀಡಲಾಗುವುದು ಇದೇ ಮೊದಲ ಬಾರಿಗೆ ಕಾವೇರಿ ಆರತಿ ಮಾಡುತ್ತಿರುವುದರಿಂದ ಇದಕ್ಕೆ ಬೇಕಾದ ತಯಾರಿ, ಕರ್ನಾಟಕದ ಅರ್ಚಕರಿಗೆ ತರಬೇತಿ ಸೇರಿದಂತೆ ಧಾರ್ಮಿಕ ವಿಧಿವಿಧಾನದ ಬಗ್ಗೆ ತರಬೇತಿಯನ್ನು ನೀಡಲು ಹರಿದ್ವಾರ ಹಾಗೂ ಕಾಶಿಯ ಪಂಡಿತರಿಗೆ ನಿಯೋಗ ಮನವಿ ಮಾಡಿದೆ. ಈ ಬಗ್ಗೆ ಸಿಎಂ, ಡಿಸಿಎಂ ಜತೆ ಚರ್ಚಿಸಿದ ಬಳಿಕ ಅಂತಿಮ ತೀರ್ಮನ ಕೈಗೊಳ್ಳಲಾಗುವುದು ಎನ್ನಲಾಗಿದೆ.ಹರಿದ್ವಾರ ಹಾಗೂ ಕಾಶಿಯಲ್ಲಿ ನಿತ್ಯ ಸೂರ್ಯೋದಯ ಹಾಗೂ ಸೂರ್ಯಸ್ತದ ಸಮಯದಲ್ಲಿ ನಡೆಯುವ ಗಂಗಾರತಿಗೆ ಐತಿಹಾಸಿಕ ಹಿನ್ನಲೆಯಿದೆ. ಕಾಶಿಯಲ್ಲಿ ಈ ಆರತಿ ಆರಂಭಗೊಂಡು 35 ವರ್ಷ ಕಳೆದಿದೆ. ಆದರೆ ಹರಿದ್ವಾರದ ಹರ್ ಕೀ ಪೌಡಿಯಲ್ಲಿ ನಡೆಯುವ ಗಂಗಾರತಿಗೆ ಅಧಿಕೃತ ದಾಖಲೆಗಳಲ್ಲಿ ಶತಮಾನದ ಇತಿಹಾಸವಿದೆ. ಈಗಲೂ ಪ್ರತಿನಿತ್ಯ ಹರಿದ್ವಾರದಲ್ಲಿರುವ ಮೂಲ ನಿವಾಸಿಗಳು ಗಂಗಾರತಿಯಲ್ಲಿ ಕಡ್ಡಾಯವಾಗಿ ಭಾಗವಹಿಸುತ್ತಾರೆ. ಗಂಗಾರತಿಯ ವೇಳೆ ಕನಿಷ್ಠ 40ರಿಂದ 50 ಸಾವಿರ ಜನ ಭಾಗವಹಿಸುತ್ತಾರೆ. ವಿಶೇಷ ದಿನಗಳಲ್ಲಿ ಈ ಸಂಖ್ಯೆ 10ರಿಂದ 20 ಲಕ್ಷ ಜನ ಸೇರುತ್ತಾರೆ. ಆರತಿಯನ್ನು 21 ಪಂಡಿತರು, 21 ಅಭಿಷೇಕವನ್ನು ನೆರವೇರಿಸುತ್ತಾರೆ.

ಗಂಗಾ ಆರತಿ ಮಾದರಿಯಲ್ಲಿ ಕಾವೇರಿ ನದಿಗೆ ರಚಿಸಿರುವ ಹಾಡುಗಳನ್ನು ಪ್ರಸ್ತುತಪಡಿಸಲಾಗುತ್ತದೆ. ಈ ಎರಡು ಭಾಗದಲ್ಲಿಯೂ ಒಂದು ಗಂಟೆಗಳ ಕಾಲ ಆರತಿ ನಡೆಯುತ್ತದೆ. ಅದಕ್ಕೂ ಒಂದು ತಾಸಿಗೂ ಮೊದಲೇ ಜನರು ನದಿದಂಡೆಯಲ್ಲಿ ಆಸೀನರಾಗಿರುತ್ತಾರೆ. ಕರ್ನಾಟಕದಲ್ಲಿ ನಡೆಸುವ ಕಾವೇರಿ ಆರತಿಯೂ ಬಹುತೇಕ ಇದೇ ಮಾದರಿಯಲ್ಲಿ ನಡೆಯುವುದರಿಂದ ಎರಡು ಗಂಟೆಗಳ ಕಾಲ ಜನರನ್ನು 'ಎಂಗೇಜ್' ಮಾಡಬೇಕಾಗುತ್ತದೆ. ಆದ್ದರಿಂದ ಕಾವೇರಿ ಮಾತೆಯ ಇತಿಹಾಸ, ವೈಶಿಷ್ಟ್ಯ ಸೇರಿದಂತೆ ವಿವಿಧ ಅಂಶಗಳನ್ನು ಒಳಗೊಂಡಿರುವ ಸಾಹಿತ್ಯವನ್ನು ರಚಿಸಿ, ಅದಕ್ಕೆ ಸಂಗೀತ




ಕಾವೇರಿ ಆರತಿ ಮಾಡಬೇಕು ಎಂದು ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ ಅವರು ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದರು. ಇದರ ಆಧಾರದ ಮೇಲೆ ಕಾವೇರಿ ಆರತಿ ಕಾರ್ಯಕ್ರಮದ ಕುರಿತು ಸಮಿತಿ ರಚಿಸಲಾಗಿತ್ತು. ಇದೀಗ ಅಧ್ಯಯನ ಸಮಿತಿ ತಂಡ ಹರಿದ್ವಾರ ಮತ್ತು ವಾರಾಣಸಿಗೆ ಭೇಟಿ ನೀಡಿದೆ.

ಇಂತಹದೊಂದು ಮಹತ್ವದ ಕಾರ್ಯಕ್ರಮವನ್ನು ಪ್ರಸ್ತಾಪಿಸಿದ್ದ ದಿನೇಶ್ ಗೂಳಿಗೌಡ ಅವರಿಗೂ ಈ ಸಂದರ್ಭದಲ್ಲಿ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ಕಾವೇರಿ ಆರತಿಗೆಂದೇ ಸಾಧು ಸಂಗೀತ-ಹರಿದ್ವಾರ ಹಾಗೂ ಕಾಶಿಯಲ್ಲಿ ನಡೆಯುವ ಗಂಗಾರತಿ ವೇಳೆ ಮಂತ್ರಘೋಷದೊಂದಿಗೆ ಗಂಗಾದೇವಿಯ ಮೇಲೆ ನಿರ್ದೇಶನವನ್ನು ಕರ್ನಾಟಕ ಸಿನಿಮಾ ಅಕಾಡೆಮಿ ಅಧ್ಯಕ್ಷ ಸಾಧು ಕೋಕಿಲ ಅವರು ನೀಡಲಿದ್ದಾರೆ. ಈ ಕಾರಣಕ್ಕಾಗಿಯೇ ಸಾಧುಕೋಕಿಲ ಅವರೂ ನಿಯೋಗದಲ್ಲಿದ್ದರು. ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿ, ಗಂಗಾನದಿಗೆ ತನ್ನದೇಯಾದ ಇತಿಹಾಸವಿದೆ ಅದೇ ರೀತಿ ಕಾವೇರಿಗೂ ತನ್ನದೇ ಇತಿಹಾಸ ಇದೆ. ಕಾವೇರಿ ಲಕ್ಷಾಂತರ ರೈತರಿಗೆ ಕೃಷಿಗೆ ಅನುಕೂಲವಾಗಿದೆ, ಕೋಟ್ಯಂತರ ಜನರಿಗೆ ಜೀವ ಜಲವಾಗಿದೆ, ಇದಕ್ಕೆ ಕೃತ್ಯಜ್ಞತೆ ಸಲ್ಲಿವುದು ಎನ್ನುವುದು ನನ್ನ ಉದ್ದೇಶ ಹೀಗಾಗೀ ನಾನು ಡಿಸಿಎಂ ಡಿ.ಕೆ ಶಿವಕುಮಾರ್ ಜೊತೆಗೆ ಚರ್ಚಿಸಿದೆ ಅವರು ಸಕಾರಾತ್ಮವಾಗಿ ಸ್ಪಂಧಿಸಿದರು. ತಂಡ ಬಂದು ಅಧ್ಯಯನ ಮಾಡಿದ್ದು ಶೀಘ್ರದಲ್ಲಿ ವರದಿ ಸಲ್ಲಿಸಲಾಗುವುದು ಎಂದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363


ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು
ಸಂಶೋಧನಾ ಸಂಸ್ಥೆಯ ಮಾಜಿ ನಿರ್ದೇಶಕರು, ನಾಡಿನ
ಹಿರಿಯ ಹೃದ್ರೋಗ ತಜ್ಞರು, ಪದ್ಮಶ್ರೀ ಪುರಸ್ಕೃತರು ಹಾಗೂ
ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯರಾದ
ಡಾ. ಸಿ.ಎನ್. ಮಂಜುನಾಥ್
ಅವರಿಗೆ
ಹುಟ್ಟುಹಬ್ಬದ
ಶುಭಾಶಯಗಳು
23
ಸೆಪ್ಟೆಂಬರ್
2024
ಶುಭಕೋರುವವರು,
ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಅಭಿಮಾನಿಗಳು ಹಾಗೂ ಹಿತೈಷಿಗಳು

## ನಿತ್ಯ ಪಂಚಾಂಗ 23.09.2024 ಸೋಮವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ–ವಸಂತ ಋತು,
ಚಾಂದ್ರಮಾನ, ಭಾದ್ರಪದ ಬಹುಳ

ಷಷ್ಠಿ, ರೋಹಿಣಿ ನಕ್ಷತ್ರ,
ಚಂದನ ಷಷ್ಠಿ,
ಶರದ್ ವಿಷುವತ್

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ನಿಧನ ವಾರ್ತೆ

### ಶಾಂತಾ ಬಿ.ರಾವ್ ನಿಧನ



**ಮುಂಬಯಿ, ಸೆ.22–** ಸಮಾಜ ಸೇವಕ, ಹೊಟೇಲು ಉದ್ಯಮಿ ದಿ| ಕಾರ್ನಾಡು ಬಾಬು ರಾವ್ ಅವರ ಪತ್ನಿ ಶ್ರೀಮತಿ ಶಾಂತಾ ಬಿ.ರಾವ್ (99.) ಅವರು ವಯೋಸಹಜ ಅಸೌಖ್ಯದಿಂದ ಕಳೆದ ಶುಕ್ರವಾರ (ಸೆ.20) ಗೋರೆಗಾಂವ್ ಪೂರ್ವ ಇಲ್ಲಿನ ಗೋಕುಲಧಾಮ್‌ನಲ್ಲಿರುವ ಸ್ವಗೃಹದಲ್ಲಿ ನಿಧನರಾದರು.

ಮೃತರು ಮೂರು ಸುಪುತ್ರರು, ಏಳು ಸುಪುತ್ರಿಯರು ಸೇರಿದಂತೆ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ನಿಧನಕ್ಕೆ ರಾಮ ಕ್ಷತ್ರೀಯ ಸಂಘ ಮುಂಬಯಿ ಮತ್ತು ಮಂಗಳೂರು, ಗೋಕುಲಧಾಮ ತುಳು ಕನ್ನಡ ಬಳಗ, ಗೋಕುಲಧಾಮ ಅಯ್ಯಪ್ಪ ಸೇವಾ ಸಂಘ ಅವರು ತೀವ್ರ ಸಂತಾಪ ಸೂಚಿಸಿದರು.

# ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ಮೋದಿ ಸರ್ಕಾರದ ಕೊಡುಗೆ ಅಪಾರ: ಎಚ್.ಡಿ.ಕುಮಾರಸ್ವಾಮಿ



## ಬುಡಕಟ್ಟು ಮುಖ್ಯಸ್ಥರ ನಿವಾಸಕ್ಕೆ ಭೇಟಿ

ಈ ಭೇಟಿಯ ಸಂದರ್ಭದಲ್ಲಿಯೇ ಕೇಂದ್ರ ಸಚಿವರು ಲೆಪರಾಡ ಜಿಲ್ಲೆಯ ಗೋರಿ ಗ್ರಾಮದಲ್ಲಿ ಸ್ಥಳೀಯ ಬುಡಕಟ್ಟು ಸಮುದಾಯ ಮುಖ್ಯಸ್ಥರಾದ ಟೊಬಾಂ ಬಸಾರ್ ಅವರ ನಿವಾಸಕ್ಕೆ ಭೇಟಿ ನೀಡಿದರು. ಬುಡಕಟ್ಟು ಜನರ ಸಂಪ್ರದಾಯ, ಆಚರಣೆಗಳ ಪ್ರತೀಕವಾಗಿರುವ ಬಸಾರ್ ಅವರ ನಿವಾಸವನ್ನು ಸಚಿವರು ಬಹಳ ಕುತೂಹಲ, ಅಚ್ಚರಿಯಿಂದ ವೀಕ್ಷಿಸಿದರು. ಕುಟುಂಬ ಸದಸ್ಯರ ಜತೆ ಕೆಲ ಹೊತ್ತು ಕಳೆದ ಸಚಿವರು, ಅವರ ಮನೆತನ ಮತ್ತು ಅವರ ಆಚರಣೆ, ಆಚಾರ ವಿಚಾರಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಅಲ್ಲದೆ, ಮನೆಯಲ್ಲಿದ್ದ ಕೆಲ ವಸ್ತುಗಳನ್ನು ಸಚಿವರು ಕುತೂಹಲದಿಂದ ವೀಕ್ಷಿಸಿದರು. ಸಚಿವರನ್ನು ಅಲ್ಲಿನವರು ಅತ್ಯಂತ ಆತ್ಮೀಯವಾಗಿ ಗೌರವಿಸಿದರು. ಅರುಣಾಚಲ ಪ್ರದೇಶದ ಉನ್ನತ ಅಧಿಕಾರಿಗಳು ಹಾಗೂ ಭಾರಿ ಕೈಗಾರಿಕೆ ಸಚಿವಾಲಯದ ಅಧಿಕಾರಿಗಳು ಸಚಿವರ ಜತೆಯಲ್ಲಿ ಇದ್ದರು.

**ಇಟಾನಗರ, ಸೆ. 22 :** ಈಶಾನ್ಯ ರಾಜ್ಯಗಳ ಸಮಗ್ರ ಅಭಿವೃದ್ಧಿ ಕೇಂದ್ರದ ನರೇಂದ್ರ ಮೋದಿ ಅವರ ಸರ್ಕಾರ ಬದ್ಧತೆಯಿಂದ ಕೆಲಸ ಮಾಡುತ್ತಿದೆ ಎಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರ ಸ್ವಾಮಿ ಅವರು ಹೇಳಿದರು. ಈಶಾನ್ಯ ರಾಜ್ಯಗಳ ಪ್ರವಾಸ ಕೈಗೊಂಡಿರುವ ಅವರು; ಭಾನುವಾರ ಇಲ್ಲಿನ ಲೆಪರಾಡ ಜಿಲ್ಲೆಯಲ್ಲಿ ಕೇಂದ್ರ ಸರ್ಕಾರದ ವತಿಯಿಂದ ಕಾರ್ಯಗತವಾಗುತ್ತಿರುವ ಯೋಜನ ಗಳ ಪ್ರಗತಿ ಪರಿಶೀಲನೆ ನಡೆಸಿದರು.

ಅಭಿವೃದ್ಧಿ ಮತ್ತು ಜನ ಕಲ್ಯಾಣ ಯೋಜನೆಗಳಿಗೆ ಮೋದಿ ಸರ್ಕಾರ ಅತಿ ಮಹತ್ವ ನೀಡುತ್ತಿದೆ ಎಂದ ಸಚಿವರು; ಮೋದಿ ಅವರ 3.ಔ ಸರ್ಕಾರದಲ್ಲಿ ಈಶಾನ್ಯ ರಾಜ್ಯಗಳಿಗೆ ಮತ್ತಷ್ಟು ಉತ್ತೇಜನ ಕೊಡಲಾಗುವುದು. ಮೋದಿ ಸರ್ಕಾರದ ನೂರು ದಿನಗಳ ಕಾರ್ಯಕ್ರಮದಲ್ಲಿಯೂ ಅರುಣಾಚಲ ಪ್ರದೇಶ ಸೇರಿದಂತೆ ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ಅತಿಹೆಚ್ಚು ಆದ್ಯತೆ ಕೊಡಲಾಗಿದೆ. ಈ ಭಾಗದ 4.7 ಕೋಟಿಗೂ ಹೆಚ್ಚು ಪ್ರಜೆಗಳಿಗೆ ಕೇಂದ್ರ ಸರ್ಕಾರದ ಜನೋಪಯೋಗಿ ಯೋಜನೆಗಳು ನೇರವಾಗಿ ಮುಟ್ಟುತ್ತಿವೆ ಎಂದು ಕುಮಾರಸ್ವಾಮಿ ಅವರು ಹೇಳಿದರು. ಬಸಾರ್ ಪಟ್ಟಣದಲ್ಲಿರುವ ಲೆಪರಾಡ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಈ ಸಭೆಯಲ್ಲಿ ಸಚಿವರು; ಕೇಂದ್ರದ ಅನುದಾನದಿಂದ ಅನುಷ್ಠಾನಗೊಂಡಿರುವ ಹಾಗೂ ಅನುಷ್ಠಾನ ಆಗುತ್ತಿರುವ ಎಲ್ಲಾ ಯೋಜನೆ, ಕಾರ್ಯಕ್ರಮಗಳ ಸಮಗ್ರ ಮಾಹಿತಿ ಪಡೆದುಕೊಂಡರು.

ಶಿಕ್ಷಣ, ಜಲಜೀವನ್ ಮಿಶನ್, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್, ಲೋಕೋಪಯೋಗಿ ಇಲಾಖೆ, ಇಂಧನ, ಕೈಗಾರಿಕೆ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಕೃಷಿ, ತೋಟಗಾರಿಕೆ, ಮೀನುಗಾರಿಕೆ ಹಾಗೂ ಆಹಾರ – ನಾಗರಿಕ ಪೂರೈಕೆ ಇಲಾಖೆಗಳಿಗೆ ಸಂಬಂಧಿ ಸಿದ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು; ಜಿಲ್ಲಾಧಿಕಾರಿ ಈಜುಂ ಅಂಗು ಅವರು ಸಮಗ್ರ ಮಾಹಿತಿ ನೀಡಿದರು. ಅರುಣಾಚಲ ಪ್ರದೇಶದಲ್ಲಿ ಅದರಲ್ಲೂ ಲೆಪರಾಡ ಜಿಲ್ಲೆಯಲ್ಲಿ ಜಲಜೀವನ್ ಮಿಶನ್ ಯೋಜನೆ ಸಂಪೂರ್ಣ ಯಶಸ್ವಿಯಾಗಿದೆ. ಪ್ರತಿ ಮನೆಗೂ ಶುದ್ಧ ಕುಡಿಯುವ ನೀರು ಪೂರೈಕೆ ಆಗುತ್ತಿದೆ ಎಂಬ ಅಂಶವನ್ನು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ಈಶಾನ್ಯ ಭಾಗದ ರಾಜ್ಯಗಳಿಗೆ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಅತಿ ಹೆಚ್ಚು ಪ್ರಾಮುಖ್ಯತೆ ಕೊಟ್ಟು ಅಭಿವೃದ್ಧಿಗೆ ಸಹಕರಿಸುತ್ತಿದೆ ಎಂದು ಹೇಳಿದರು.

**ದೇವಾಲಯಕ್ಕೆ ತೆರಳಿ ಪೂಜೆ :** ಬೆಳಗ್ಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರ ಸ್ವಾಮಿ ಅವರು ತಮ್ಮ ಪತ್ನಿ ಅನಿತಾ ಕುಮಾರಸ್ವಾಮಿ ಅವರೊಂದಿಗೆ ಅರುಣಾಚಲ ಪ್ರದೇಶದ ಜೀರೊದಲ್ಲಿನ ಕರಡೋ ಎಂಬಲ್ಲಿರುವ ಶ್ರೀ ಸಿದ್ದೇಶ್ವರನಾಥ ದೇವಾಲಯಕ್ಕೆ ತೆರಳಿ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕನ್ನಡಿಗರು ಸೇರಿದಂತೆ ತೆಲುಗು, ತಮಿಳು, ಮಲೆಯಾಳಿ ಭಾಷಿಕರು ಸಚಿವರನ್ನು ಭೇಟಿಯಾಗಿ ಶುಭ ಕೋರಿದರು. ಕಳೆದ ಎರಡು ದಿನಗಳಿಂದ ಸಚಿವರು ಈಶಾನ್ಯ ರಾಜ್ಯಗಳಿಗೆ ಭೇಟಿ ನೀಡಿದ್ದು, ಅಲ್ಲಿನ ತಮ್ಮ ಸಚಿವಾಲಯದ ಅಧೀನದಲ್ಲಿರುವ ಕೇಂದ್ರ ಸರಕಾರಿ ಸ್ವಾಮ್ಯದ ಕೈಗಾರಿಕೆಗಳ ಪ್ರಗತಿ ಪರಿಶೀಲನೆ ನಡೆಸುತ್ತಿದ್ದಾರೆ. ಮಧ್ಯಾಹ್ನ ಸಚಿವರು ICAP-RC (International Certified Addiction Professional in Recovery Coaching) ಕೇಂದ್ರಕ್ಕೆ ಭೇಟಿ ನೀಡಿದರು.

# ಅರ್ಕಾವತಿ ಬಡಾವಣೆ ವಿಚಾರ ನನ್ನ ಗಮನಕ್ಕೆ ಬಂದಿಲ್ಲ: ಮುಖ್ಯಮಂತ್ರಿ

**ಕೊಪ್ಪಳ, ಸೆ.22–** ರಾಜ್ಯಪಾಲರು ಅರ್ಕಾವತಿ ವರದಿ ಕೇಳಿದ ವಿಚಾರಕ್ಕೆ ಸಂಬಂಧಿಸಿ ಬರೆದಿರುವ ಪತ್ರವನ್ನು ನಾನಿನ್ನು ಗಮನಿಸಿಲ್ಲ. ಅರ್ಕಾವತಿ ಬಡಾವಣೆ ಬಗ್ಗೆ ವರದಿ ಕೇಳಿರುವ ವಿಚಾರ ಪತ್ರಿಕೆಯಲ್ಲಿ ಓದಿರುವೆ. ಆರ್ಕಾವತಿ ಬಡಾವಣೆ ವಿಚಾರದಲ್ಲಿ ರಿಡೂ ಅಂತ ಹೇಳಿದ್ದು ನಾನಲ್ಲ, ಸುಪ್ರೀಂ ಕೋರ್ಟ್ ಎಂದು ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಕೊಪ್ಪಳ ತಾಲೂಕಿನ ಗಿಣಗೇರಾ ವಿಮಾನ ನಿಲ್ದಾಣ ಬಳಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಾಜ್ಯಪಾಲರ ಕಚೇರಿಯಿಂದಲೇ ಪತ್ರಗಳ ಸೋರಿಕೆಯಾಗಿರಬಹುದು. ಪತ್ರಗಳು ಸೋರಿಕೆಯಾಗಿದ್ದರೇ ತನಿಖೆಯಾಗಲಿ ಎಂದರು.

ಶಾಸಕ ಮುನಿರತ್ನ ವಿರುದ್ಧ ಎಸ್‌ಐಟಿ ತನಿಖೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಾವು ಯಾರ ವಿರುದ್ಧವೂ ದ್ವೇಷದ ರಾಜಕಾರಣ ಮಾಡುತ್ತಿಲ್ಲ. ಮುನಿರತ್ನನಿಗೆ ಅಪರಾಧ ಮಾಡು ಅಂತ ನಾವು ಹೇಳಿದ್ವಾ ಮುನಿರತ್ನ ಮೇಲೆ ಮೂರು ಪ್ರಕರಣ ದಾಖಲಾಗಿವೆ. ನಾವು ಕ್ರಮ ಕೈಗೊಳ್ಳೋದು ಬಿಡಬೇಕಾ ಎಂದು ಪ್ರಶ್ನಿಸಿದರು.

ನಾವು ಯಾರ ವಿರುದ್ಧವೂ ದ್ವೇಷದ ರಾಜಕಾರಣ ಮಾಡುತ್ತಿಲ್ಲ. ಮುನಿರತ್ನ ವಿಚಾರದಲ್ಲಿ ಅವರ ಆಪ್ತರಿಗೆ ಬೆದರಿಕೆ ಹಾಕಿದೆ ಎನ್ನುವುದು ಸುಳ್ಳು, ನಾವು ಅಂಥ ಕೆಲಸ ಮಾಡಲ್ಲ ಎಂದರು.ತುಂಗಭದ್ರಾ ಡ್ಯಾಂ ಗೇಟ್ ಮುರಿದಾಗ ಗೇಟ್ ರಿಪೇರಿಯಾಗಿ ಮತ್ತೆ ಡ್ಯಾಂ ತುಂಬುತ್ತದೆ ಎಂದಿದ್ದೆ, ಮಳೆಯ ಕೃಪೆಯಿಂದ ಮತ್ತೆ ಜಲಾಶಯ ತುಂಬಿದೆ. ಮುಂಗಾರಿನ ಬೆಳೆಗೆ ನೀರು ದೊರೆಯುತ್ತದೆ. ಹಿಂಗಾರು ಬೆಳೆಗೂ ನೀರು ಲಭಿಸುವ



ಭರವಸೆಯಿದೆ. ಕನ್ನಯ್ಯ ನಾಯ್ಡು ಹಾಗೂ ಅಧಿಕಾರಿಗಳ ತಂಡ ತುಂಬಾ ಕಾಳಜಿ ವಹಿಸಿ ಗೇಟ್ ದುರಸ್ಥಿ ಮಾಡಿದೆ. ಹಿಂದುಸ್ಥಾನ್ ಇಂಜಿನಿಯರಿಂಗ್ ಸೇರಿ ಮೂರು ಸಂಸ್ಥೆಗಳ ಸಹಾಯದಿಂದ ಗೇಟ್ ದುರಸ್ಥಿ ಕಾರ್ಯ ಯಶಸ್ವಿಯಾಯಿತು. ಇದರಿಂದಾಗಿ ರೈತರಿಗೆ ಯಾವುದೇ ತೊಂದರೆಯಾಗುವುದಿಲ್ಲ.. ಗೇಟ್ ಮುರಿದಾಗ ರೈತರಿಗೆ ತುಂಬಾ ಆತಂಕವಿತ್ತು. ಡ್ಯಾಂನಿಂದ 20 ಟಿಎಂಸಿಗೂ ಹೆಚ್ಚಿನ ನೀರು ಹರಿದು ಹೋಗಿತ್ತು. ಇದು ರೈತರಲ್ಲಿ ಆತಂಕ ಮೂಡಿಸಿತ್ತು.

ಮತ್ತೆ ಮಳೆ ಬಂದು ತುಂಗಭದ್ರೆ ತುಂಬಿದ್ದರಿಂದ ರೈತರಲ್ಲಿ ಸಂತಸ ತಂದಿದೆ. ಮಳೆರಾಯನಿಗೆ ಸರಕಾರದ ಪರವಾಗಿ ಧನ್ಯವಾದ ಹೇಳುವೆ ಎಂದರು.ಎಲ್ಲ ಕ್ರಸ್ಟ್ ಗೇಟ್ ಗಳನ್ನು ಬದಲಿಸುವ ವಿಚಾರ, ತುಂಗಭದ್ರಾ ಜಲಾಶಯ ನಿರ್ಮಾಣವಾಗಿ 70 ವರ್ಷ ಕಳೆದಿದೆ. 50 ವರ್ಷ ಯಾವುದೇ ಗೇಟ್ ಗಳಿಗೆ ಹಾನಿಯಾಗಿರಲಿಲ್ಲ. ಆದರೆ, ನಿರ್ವಹಣೆ ಕೊರತೆಯಿಂದ ಸಮಸ್ಯೆಯಾಗಿ ಈಚೆಗೆ ಗೇಟ್ ಮುರಿದಿತ್ತು. ಗೇಟ್ ಬದಲಾಗಣೆ ವಿಚಾರದಲ್ಲಿ ಎಕ್ಸ್ ಫರ್ಟ್ ಕಮಿಟಿ ನೀಡಿದ ವರದಿ ಅನುಸಾರ ಕ್ರಮ ವಹಿಸಲಾಗುವುದು

ಕೊಪ್ಪಳ ಜಿಲ್ಲೆಯ ರಸ್ತೆಗಳು ಹಾನಿಯಾದ ವಿಚಾರ, ಈ ಹಿಂದೆ ಬಿಜೆಪಿ, ಸಮ್ಮಿಶ್ರ ಸರಕಾರದಲ್ಲಿ ರಸ್ತೆಗಳಾಗಿದ್ದವು. ಈಗ ಮಳೆಯಾಗಿ ಅವು ದುರಸ್ತಿಗೊಂಡಿವೆ. ಅವುಗಳನ್ನು ಸರಿಪಡಿಸುವ ಕೆಲಸ ಮಾಡುತ್ತಿದ್ದೇವೆ ಎಂದರು.ಕಲ್ಯಾಣ ಕರ್ನಾಟಕ ಸಚಿವ ಸಂಪುಟದಲ್ಲಿ 56 ವಿಷಯಗಳ ಕುರಿತು ಚರ್ಚೆ ಮಾಡಿದ್ದೇವೆ. ಇದರಲ್ಲಿ 46 ಕಲ್ಯಾಣ ಕರ್ನಾಟಕದ್ದಾಗಿವೆ.ಹಾಲಿನ ದರ ಹೆಚ್ಚಳದ ವಿಚಾರ, ಮಾಗಡಿಗೆ ತೆರಳಿದ ವೇಳೆ, ಬೇರೆ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲಿ ಹಾಲಿನ ಪ್ರೋತ್ಸಾಹ ಧನ ಕಡಿಮೆಯಿದೆ ಎಂದು ಮನವಿ ಮಾಡಿದ್ದರು. ಅವರ ಬೇಡಿಕೆಯಂತೆ ಹಾಲಿನ ದರ ಹೆಚ್ಚಳ ಮಾಡಿ, ಬರುವ ಆದಾಯವನ್ನು ರೈತರಿಗೆ ಕೊಡೋಣ ಎಂದಿರುವೆ. ಈ ಕುರಿತು ಸಚಿವ ಸಂಪುಟದಲ್ಲಿ ನಿರ್ಧಾರ ಮಾಡಿದರೆ ಆ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದೆ ಎಂದರು.

## ಎಲ್ಲ ತುಪ್ಪದ ಮಾದರಿ ಪರೀಕ್ಷೆಗೆ ದಿನೇಶ್ ಗುಂಡೂರಾವ್ ಸೂಚನೆ



**ಬೆಂಗಳೂರು, ಸೆ.22–** ನಂದಿನಿ ತುಪ್ಪ ಹೊರತು ಪಡಿಸಿ, ರಾಜ್ಯದಲ್ಲಿ ಮಾರಾಟವಾಗುತ್ತಿರುವ ಎಲ್ಲಾ ತುಪ್ಪದ ಮಾದರಿಗಳನ್ನು ಸಂಗ್ರಹಿಸಿ ಅದರ ಗುಣಮಟ್ಟ ಕಾಪಾಡಲು ಪರಿಶೀಲನೆ ನಡೆಸಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂ ರಾವ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸಾದಗಳ ಮಾದರಿ ಬದಲು ತುಪ್ಪದ ಪರಿಶೀಲನೆ ನಡೆಸಬೇಕು ಎಂದು ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು. ತಮಿಳುನಾಡು ಸೇರಿದಂತೆ ಬೇರೆ ಬೇರೆ ರಾಜ್ಯಗಳಿಂದ ಇಲ್ಲಿಗೆ ತುಪ್ಪ ಬರುತ್ತಿದ್ದು ಎಲ್ಲಾ ಸ್ಯಾಂಪಲ್‌ಗಳನ್ನು ಸಂಗ್ರಹಿಸಿ ಪರಿಶೀಲಿಸಲು ಸೂಚಿಸಲಾಗಿದೆ. ಇದೇ ವೇಳೆ ತಿರುಪತಿ ಲಡ್ಡು ವಿಚಾರದಲ್ಲಿ ಜನರಿಗೆ ಬಹಳ ಗೊಂದಲ ಶುರುವಾಗಿದ್ದು, ಇದು ಅಘಾತಕಾರಿ

ಬಳ್ಳಾರಿಯಲ್ಲಿ, ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ ಕಳೆದ 15 ದಿನಗಳಲ್ಲಿ 350 ಟನ್ ನಂದಿನಿ ತುಪ್ಪವನ್ನು ತಿರುಪತಿಗೆ ಕಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಎರಡು ಸಾವಿರ ಟನ್ ತುಪ್ಪಕ್ಕೆ ಬೇಡಿಕೆ ಬಂದಿದ್ದು. ಪೂರೈಕೆಗೆ ನಾವು ಸನ್ನದ್ಧರಿದ್ದೇವೆ. ತಿರುಪತಿ ಲಡ್ಡು ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬು ಬಳಕೆ ವಿಚಾರದಿಂದಾಗಿ ಮತ್ತೆ ಕರ್ನಾಟಕದ ನಂದಿನಿ ತುಪ್ಪಕ್ಕೆ ಟಿಡಿಯಿಂದ ಬೇಡಿಕೆ ಬಂದಿದೆ ಎಂದು ಹೇಳಿದರು. ತುಪ್ಪ ತುಂಬಿದ ಟ್ಯಾಂಕರ್‌ಗೆ ಜಿಪಿಎಸ್ ಅಳವಡಿಕೆ ಮಾಡಿ ಕಳುಹಿಸಿಲು ನಿರ್ಧರಿಸಿದ್ದು, ತುಪ್ಪ ತುಂಬಿ ಹೊರಟಾಗ ಯಾವುದೇ ರೀತಿಯ ಕಲಬರಕೆಯಾಗದಂತೆ ಜಾಗ್ರತೆ ವಹಿಸಲಾಗಿದೆ. ತಿ

ತಿರುಪತಿ ಮುಟ್ಟಿದ ಕೂಡಲೇ ಒಟಿಪಿ ನೀಡಿದ ಬಳಿಕ ಟ್ಯಾಂಕರ್ ಓಪನ್ ಮಾಡಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ವಿಜಯಪುರದಲ್ಲಿಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಕೈಗಾರಿಕಾ ಸಚಿವ ಎಂ. ಬಿ ಪಾಟೀಲ್, ತಿರುಪತಿ ಲಡ್ಡು ವಿಚಾರ ಜನರ ಧಾರ್ಮಿಕ ಭಾವನೆಗೆ ಸಂಬಂಧಿಸಿದ್ದಾಗಿದ್ದು ದನದ ಕೊಬ್ಬು ಬೆರಸುವುದು ಘೋರ ಅಪರಾಧ ಎಂದು ತಿಳಿಸಿದ್ದಾರೆ.

ಅವರು ದನದ ಕೊಬ್ಬನ್ನು ಬೆರಸಿದ್ದರೇ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಭಕ್ತರ ಭಾವನೆಗಳ ಜೊತೆ ಆಟವಾಡುವುದು ಸರಿಯಲ್ಲ. ಆಗಾಗ ಆಡಳಿತ ಮಂಡಳಿ ಪ್ರಸಾದದ ತಪಾಸಣೆ ಮಾಡಬೇಕಿತ್ತು ಎಂದು ಹೇಳಿದ್ದಾರೆ. ಇದೇ ವೇಳೆ ಶಾಸಕ ಮುನಿರತ್ನ ಪ್ರಕರಣದ ಬಗ್ಗೆ ಪ್ರತಿಕ್ರಿಯಿಸಿ ಸ್ವಾಭಾವಿಕವಾಗಿ ಯಾರೂ ಊಹಿಸದ ಆಪಾದನೆಗಳು ಅವರ ಮೇಲೆ ಬರುತ್ತಿವೆ. ಎಲ್ಲದರ ಕುರಿತು ತನಿಖೆ ಆಗಲಿ ಎಂದು ತಿಳಿಸಿದ್ದಾರೆ.

# ತಜ್ಞರ ವರದಿಯ ಆಧಾರದ ಮೇಲೆ ಗೇಟ್ ನಿರ್ವಹಣೆ: ಸಿದ್ದರಾಮಯ್ಯ

**ಕೊಪ್ಪಳ, ಸೆ.22–** ಸೆಪ್ಟೆಂಬರ್ –22: ತಜ್ಞರ ವರದಿಯ ಆಧಾರದ ಮೇಲೆ ಗೇಟ್ ಗಳ ನಿರ್ವಹಣೆ ಮಾಡಲಾಗುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಕೊಪ್ಪಳದ ಗಿಣಿಗೇರಾ ಏರ್ ಸ್ಟ್ರಿಪ್ ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಕ್ರಸ್ಟ್ ಗೇಟ್‌ಗಳ ಕಾಲಕಾಲಕ್ಕೆ ದುರಸ್ತಿ ಮಾಡುವ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು 50 ವರ್ಷಕ್ಕೆ ಗೇಟ್ ಗಳನ್ನು ಬದಲಿಸಬೇಕು. 70 ವರ್ಷಗಳಿಂದ ಗೇಟ್ ಗಳು ಉತ್ತಮವಾಗಿ ಕಾರ್ಯ ನಿರ್ವಹಿಸಿದೆ. ಉತ್ತಮ ನಿರ್ವಹಣೆ ಮಾಡಿರುವುದರಿಂದ 70 ವರ್ಷ ಕೆಲಸ ಮಾಡಿದೆ. ಪ್ರಸ್ತುತ ತಜ್ಞರ ಸಮಿತಿ ರಚನೆಯಾಗಿದ್ದು ವರದಿ ನೀಡಬೇಕಿದೆ ಎಂದರು.

**ಹಿಂಗಾರಿನ ಎರಡನೇ ಬೆಳೆಗೆ ನೀರು ಲಭ್ಯವಾಗಬಹುದು :** ತುಂಗಭದ್ರ ಜಲಾಶಯ ಮತ್ತೆ ತುಂಬಿದೆ. 101.77 ಟಿ.ಎಂ.ಸಿ ನೀರು ಲಭ್ಯವಿದೆ. ಮುಂಗಾರು ಮತ್ತು ಹಿಂಗಾರು ಬಿತ್ತನೆಗೆ ನೀರು ಸಿಗಲಿದೆ.ಕೊಚ್ಚಿಹೋಗಿದ್ದ 19 ನೇ ಕ್ರಸ್ಟ್ ಗೇಟ್ ನ್ನು ಜಲಸಂಪನ್ಮೂಲ ಸಚಿವ ಡಿ. ಕೆ.ಶಿವಕುಮಾರ್, ಶಿವರಾಜ ತಂಗಡಗಿ, ಜಮೀರ್ ಅಹಮದ್ ಖಾನ್ ಅವರು ಸ್ಥಳದಲ್ಲಿಯೇ ಇದ್ದು ಗೇಟ್ ದುರಸ್ತಿ ಗೆ ಕ್ರಮ ವಹಿಸಿದರು. ತಜ್ಞ ಕನ್ನಯ್ಯ ನಾಯ್ಡು ಅವರ ನೇತೃತ್ವದಲ್ಲಿ, ಜಿಂದಾಲ್, ನಾರಾಯಣ್ ಇಂಜಿನಿಯರಿಂಗ್ ಹಾಗೂ ಇಂಜಿನಿಯರ್ ಗಳು, ಅಧಿಕಾರಿಗಳು ಹಗಲು ರಾತ್ರಿ ಕೆಲಸ ಮಾಡಿದ್ದರಿಂದ ಆದಷ್ಟು ತ್ವರಿತವಾಗಿ ಗೇಟ್ ಅಳವಡಿಸಲು ಸಾಧ್ಯವಾಯಿತು. ರೈತರಿಗೆ ಯಾವುದೇ ತೊಂದರೆ ಯಾಗದಂತೆ ನೋಡಿಕೊಳ್ಳಲಾಯಿತು. 20ಕ್ಕೂ ಹೆಚ್ಚು ಟಿ.ಎಂ.ಸಿ ನೀರು ಉಳಿಯಿತು. ಬೆಳೆಗೆ ನೀರು ಸಿಗುತ್ತದೋ ಇಲ್ಲವೋ ಎಂಬ ರೈತರ ಆತಂಕ ನಿವಾರಣೆಯಾಗಿದೆ. ಹಿಂಗಾರಿನ ಬೆಳೆಗೆ ಯಾವುದೇ ತೊಂದರೆ ಇಲ್ಲ. ಎರಡನೇ ಬೆಳೆಗೆ ನೀರು ಒದಗಿಸಲು ಪ್ರಯತ್ನಿಸಲಾಗುವುದು.101 ಟಿಎಂಸಿ ಲಭ್ಯವಿರುವುದರಿಂದ ನೀರು ಲಭ್ಯವಾಗಬಹುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.


**ರಸ್ತೆಗಳ ದುರಸ್ತಿ :** ನಮ್ಮ ಸರ್ಕಾರವಿದ್ದಾಗ ರಸ್ತೆಗಳ ನಿರ್ಮಾಣ ಮಾಡಿದ್ದೇವೆ. ಬಿಜೆಪಿ ಕಾಲದಲ್ಲಿ ರಸ್ತೆಗಳಾಗಿಲ್ಲ. ಈ ವರ್ಷ ಉತ್ತಮ ಮಳೆಯಾಗಿರುವುದರಿಂದ ರಸ್ತೆಗಳು ಹಾಳಾಗಿವೆ. ಅದರ ದುರಸ್ತಿ ಮಾಡಿಸಲಾಗುವುದು ಎಂದರು. ರಾಜ್ಯಪಾಲರ ಕಛೇರಿಯಿಂದಲೇ ಮಾಹಿತಿ ಸೋರಿಕೆಯಾಗಿರಬಹುದು ಅರ್ಕಾವತಿ ಬಡಾವಣೆ ಬಗ್ಗೆ ರಾಜ್ಯಪಾಲರು ಸರ್ಕಾರಕ್ಕೆ ಪತ್ರ ಬರೆದಿದ್ದರೆ ಸರ್ಕಾರ ಈ ಬಗ್ಗೆ ಗಮನಹರಿಸಲಿದೆ ಎಂದರು. ರಾಜ್ಯಪಾಲರ ಸೋರಿಕೆಯಾಗಿದೆ ಎಂಬ ಬಗ್ಗೆ ರಾಜ್ಯಪಾಲರು ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿರುವ ಬಗ್ಗೆ ಮಾತನಾಡಿ ರಾಜ್ಯಪಾಲರ ಕಛೇರಿ ಯಿಂದಲೇ ಸೋರಿಕೆಯಾಗಿರ 'ಬಹುದು ಎಂದರು.

ಈ ಬಗ್ಗೆ ತನಿಖೆಯಾಗಲಿ ಎಂದರು. ಈ ಬಗ್ಗೆ ಪತ್ರಿಕೆಯಲ್ಲಿ ಓದಿ ತಿಳಿದಿದ್ದೇನೆ ಎಂದರು. ರೀ ಡೂ ಮಾಡಿ ಎಂದು ಬಿಡಿಎಗೆ ಸುಪ್ರೀಂಕೋರ್ಟ್ ಹೇಳಿದೆ ಎಂದರು. ಹೈದರಾಬಾದ್ ಕರ್ನಾಟಕಕ್ಕೆ ಸಂಬಂಧಿಸಿದ 46 ವಿಷಯಗಳ ಬಗ್ಗೆ ತೀರ್ಮಾನ ಕೊಪ್ಪಳ ಜಿಲ್ಲೆಯ ನಗರಸಭೆಯಲ್ಲಿ 8.5 ಕೋಟಿ ಬಾಕಿ ಕಾಮಗಾರಿಗಳ ಬಗ್ಗೆ ಮಾತನಾಡಿ ಕಲಬುರ್ಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ 56 ವಿಷಯಗಳಲ್ಲಿ 46 ವಿಷಯಗಳು ಹೈದರಾಬಾದ್ ಕರ್ನಾಟಕಕ್ಕೆ ಸಂಬಂಧಿಸಿತ್ತು. ಇದರಲ್ಲಿ ಕೆಲವು ನಿರ್ಧಾರಗಳನ್ನು ಕೈಗೊಳ್ಳಲಾಗಿದೆ ಎಂದರು.

ಹಾಲಿನ ದರ ಹೆಚ್ಚು ಮಾಡಿದರೆ ಅದು ಸಂಪೂರ್ಣವಾಗಿ ರೈತರಿಗೆ ವರ್ಗಾಯಿಸಲಾಗುವುದು ಮಾಗಡಿಯಲ್ಲಿ ಬಹಳ ಶಾಸಕರು, ರೈತರು ಹಸು ಸಾಕಣೆಯ ವೆಚ್ಚ ಹೆಚ್ಚಾಗಿದ್ದು ಹಾಲಿನ ದರ ಹೆಚ್ಚಳ ಮಾಡಲು ಒತ್ತಾಯ ಮಾಡಿದರು. ಒಂದು ವೇಳೆ ಹಾಲಿನ ದರ ಹೆಚ್ಚಿಸುವ ಬಗ್ಗೆ ತೀರ್ಮಾನವಾದರೆ ಅದನ್ನು ಸಂಪೂರ್ಣವಾಗಿ ರೈತರಿಗೆ ಕೊಡ ಬೇಕೆಂದು ಹೇಳಿದ್ದೇನೆ ಎಂದರು. ಹಾಲಿನ ದರ ಹೆಚ್ಚು ಮಾಡಿದರೆ ಅದನ್ನು ಸಂಪೂರ್ಣವಾಗಿ ರೈತರಿಗೆ ವರ್ಗಾಯಿಸ ಬೇಕೆಂದು ಸೂಚಿಸಲಾಗಿದೆ ಎಂದರು.

**ಮುನಿರತ್ನ ಅವರಿಂದ ಸುಳ್ಳು ಆರೋಪ:** ಶಾಸಕ ಮುನಿರತ್ನ ಅವರು ಸರ್ಕಾರ ಬಂಧಿಸಿರುವುದು ಕಿರುಕುಳ ನೀಡಲು ಹಾಗು ನನ್ನ ಆಪ್ತ ಬಳಗಕ್ಕೆ ಕಿರುಕುಳ ನೀಡಿ ಪ್ರಕರಣ ದಾಖಲಿಸುತ್ತಿದ್ದಾರೆ ಎಂದು ಹೇಳಿಕೆ ನೀಡಿರುವ ಬಗ್ಗೆ ಮಾತನಾಡಿ ನಾವು ಯಾರ ಮೇಲೂ ದ್ವೇಷದ ರಾಜಕಾರಣ ಮಾಡುವುದಿಲ್ಲ ಎಂದರು. ಅಪರಾಧ ಮಾಡಿ ಎಂದು ನಾವು ಯಾರಿಗೂ ಹೇಳಿಲ್ಲ. ಶಾಸಕರು ನನ್ನನ್ನು ಭೇಟಿ ಮಾಡಿ ಎಸ್.ಐ.ಟಿ ರಚಿಸಲು ಕೋರಿದರು. ಅವರ ಮೇಲೆ ಮೂರು ಪ್ರಕರಣಗಳು ದಾಖಲಾಗಿದೆ. ತಪ್ಪು ಮಾಡಿದರೆ ತಾನೇ ಎಫ್‌ಐಆರ್ ಆಗುವುದು ಎಂದರು. ನಾವು ಯಾರಿಗೂ ಕಿರುಕುಳ ನೀಡಿ ಕೇಸು ದಾಖಲಿಸಿಲ್ಲ ಈ ಆರೋಪ ಸುಳ್ಳು ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದರು.

## ತಂತ್ರಜ್ಞಾನ ಬಳಕೆಗೆ ಯೋಜನೆ ಅನುಷ್ಠಾನ ಕೆ.ಜೆ.ಜಾರ್ಜ್



**ಬೆಂಗಳೂರು, ಸೆ.22–** ಕೃಷಿ ಬೆಳೆಗಳಿಗೆ ಅಗತ್ಯತೆ, ಪ್ರದೇಶವಾರು ವಿದ್ಯುತ್ ಪೂರೈಕೆ ನಿರ್ವಹಣೆಗೂ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ಬಳಕೆಗೆ ಇಂಧನ ಇಲಾಖೆ ಉತ್ಸುಕವಾಗಿದೆ. ಈಗಾಗಲೇ ಪ್ರಾಯೋಗಿಕವಾಗಿ ಯೋಜನೆ ಅನುಷ್ಠಾನಕ್ಕೆ ತರಲಾಗಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು.

ಭತ್ತ ಮತ್ತಿತರ ಬೆಳೆಗಳ ಹಂಗಾಮು, ಬೇಡಿಕೆ, ಗರಿಷ್ಠ ಬಳಕೆ ಅವಧಿ ವಿಭಿನ್ನವಾಗಿರುತ್ತದೆ. ಉಪಗ್ರಹದ ಚಿತ್ರ ಬಳಸಿಕೊಂಡು ಪ್ರದೇಶವಾರು ಬೆಳೆ, ವಿದ್ಯುತ್ ಬೇಡಿಕೆ ಅಂದಾಜಿಸಿ, ಆಯಾ ವಿದ್ಯುತ್ ಉಪಕೇಂದ್ರಕ್ಕೆ ವಿದ್ಯುತ್ ಒದಗಿಸುವುದು ಎಐ ತಂತ್ರಜ್ಞಾನ ಬಳಕೆ ಉದ್ದೇಶ.ಇದರಿಂದಾಗಿ ಬೆಳೆಗಳಿಗೆ ಅಗತ್ಯವಿರುವ ಕಾಲದಲ್ಲಿ ವಿದ್ಯುತ್ ಲಭ್ಯತೆ, ದಕ್ಷತೆ, ವಿದ್ಯುತ್ ಉಪಕೇಂದ್ರ ಮತ್ತು ಪರಿವರ್ತಕಗಳ ಕಾರ್ಯಕ್ಷಮತೆ ಹೀಗೆ ಬಹೂಪಯೋಗಗಳಿವೆ. ರೈತರ ಸಹಕಾರದಿಂದ ಈವರೆಗೆ 32 ಲಕ್ಷ ನೀರಾವರಿ ಪಂಪ್ ಸೆಟ್‌ಗಳಿಗೆ ಆಧಾರ್ ಸಂಖ್ಯೆ ಜೋಡಣೆ ಮಾಡಿದ್ದು, ಇನ್ನೂ ಎರಡು ಲಕ್ಷ ಪಂಪ್‌ಸೆಟ್‌ಗಳು ಉಳಿದಿವೆ.

ಸಿಎಂ ನಿರ್ದೇಶನದಂತೆ ಮುಂದಿನ ಹೆಜ್ಜೆಯಿಡುತ್ತೇವೆ. ನೀರಾ ವರಿ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆಯಾಗುತ್ತದೆ. ನಿಜವಾಗಲೂ ಬಳಕೆ ಪ್ರಮಾಣವೆಷ್ಟು, ಅನಗತ್ಯ ಸೋರಿಕೆಯಾಗುತ್ತಿದೆಯೆ ಎಂದು ತಿಳಿಯಲು, ತಾಂತ್ರಿಕ ಅಡಚಣೆ ನಿವಾರಿಸುವುದು ಆಧಾರ್ ಜೋಡಣೆಯ ಗುರಿಯಾಗಿದೆ ಎಂದು ಸ್ಪಷ್ಟಪಡಿಸಿದರು.

'ಛತ್ತಿಸಗಡದ ಗೋದ್ನಾ ಬಳಿ ತಲಾ 800 ಮೆಗಾ ವಾಟ್ ವಿದ್ಯುತ್ ಸಾಮರ್ಥ್ಯದ ಎರಡು ಘಟಕಗಳ ನಿರ್ಮಾಣಕ್ಕೆ ಕೇಂದ್ರ ಸರ್ಕಾರದ ಅಂಗ ಸಂಸ್ಥೆ ತೆಪ್ರಿ ಜತೆಗೆ ಒಪ್ಪಂದವೇರ್ಪಟ್ಟಿತ್ತು. ಆದರೆ ಕೇಂದ್ರದ ಮತ್ತೊಂದು ಅಂಗಸಂಸ್ಥೆ ಎನ್ಟಿಪಿಸಿ ಆಕ್ಷೇಪವೆತ್ತಿದೆ. ಜಲ ಮೂಲದ ವಿದ್ಯುತ್ ಯೋಜನೆ ಜವಾಬ್ದಾರಿ ತೆಪ್ರಿ, ಅದ್ದೇಗೆ ಥರ್ಮಲ್ ಯೋಜನೆಗೆ ಕೈಹಾಕಿದೆ'. ರಾಜ್ಯ ಸರ್ಕಾರದ ಜತೆ ಒಪ್ಪಂದದಂತೆ ತೆಪ್ರಿಗೆ ಮುಂದುವರಿಯಲು ಕೇಂದ್ರ ಸರ್ಕಾರ ಅವಕಾಶ ನೀಡದಿದ್ದರೆ, ಕೆಪಿಸಿಎಲ್ನಿಂದಲೇ ಎರಡೂ ಘಟಕ ಗಳನ್ನು ನಿರ್ಮಿಸಲಿದ್ದೇವೆ.ಯೋಜನೆಗೆ ಬೇಕಾದ ಜಮೀನು ಸ್ವಾಧೀನವಾಗಿದೆ. ಎರಡು ಕಲ್ಲಿದ್ದಲು ಬ್ಲಾಕ್ಗಳು ಹಂಚಿಕೆಯಾದ ಕಾರಣ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲವೆಂದು ಕೆ.ಜೆ.ಜಾರ್ಜ್ ತಿಳಿಸಿದರು.

### ಮಾಸ್ಟರ್ ಅಥ್ಲೆಟಿಕ್ಸ್ ಅಸೋಸಿಯೇಷನ್ ಆಫ್ ಫೆಡರೇಷನ್ ಇಂಡಿಯಾ

## 5ಕೆ, 10ಕೆ ಮೀ. ಓಟದಲ್ಲಿ ಸಹಸ್ರಾರು ಉತ್ಸಾಹಿಗಳು ಭಾಗಿ




**ಬೆಂಗಳೂರು, ಸೆ.22–** ಮಾಸ್ಟರ್ ಅಥ್ಲಿಟಿಕ್ಸ್ ಫೆಡರೇಷನ್ ಆಫ್ ಇಂಡಿಯಾ ಎಂಎಎಫ್‌ಐ ಮತ್ತು ವರ್ಲ್ಡ್ ಮಾಸ್ಟರ್ಸ್ ಅಥ್ಲಿಟಿಕ್ಸ್‌ನಿಂದ ಹಿರಿಯರು, ಕಿರಿಯರು ಒಳಗೊಂಡಂತೆ 35 ರಿಂದ 100 ವರ್ಷದವರಿಗಾಗಿ 5ಕೆ ಮತ್ತು 10ಕೆ ಮಾಸ್ಟರ್ಸ್ ಓಟ ಆಯೋಜಿಸಲಾಗಿತ್ತು. ನಗರದ ಎಚ್.ಎಸ್. ಆರ್ ಬಡಾ ವಣೆಯ ಅಟಲ್ ಬಿಹಾರಿ ವಾಜಪೇಯಿ ಕ್ರೀಡಾಂಗಣದಿಂದ ಓಟಕ್ಕೆ ಶಾಸಕ ಸತೀಶ್ ರೆಡ್ಡಿ ಚಾಲನೆ ನೀಡಿದರು.

ಒಟ್ಟು 30ಕ್ಕೂ ಅಧಿಕ ರಾಜ್ಯಗಳಿಂದ ದೇಶದಲ್ಲಿ 1000ಕ್ಕೂ ಅಧಿಕ ಉತ್ಸಾಹಿ ಓಟಗಾರರು ಪಾಲ್ಗೊಂಡಿದ್ದರು. ಓಟದಲ್ಲಿ ಗೆದ್ದವರಿಗೆ 2 ಲಕ್ಷ ರೂ ಬಹುಮಾನ ವಿತರಿಸಲಾಯಿತು.

### ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ 117 ಕೋಟಿ ಅವ್ಯವಹಾರ

# ಡಾ.ಶರಣಪ್ರಕಾಶ್ ಪಾಟೀಲ್ ರಾಜೀನಾಮೆಗೆ ಎನ್. ರವಿಕುಮಾರ್ ಆಗ್ರಹ



**ಬೆಂಗಳೂರು, ಸೆ.22–** ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ 117 ಕೋಟಿ ರೂ. ಅವ್ಯವಹಾರ ಆಗಿದ್ದು, ಇದರ ನೈತಿಕ ಹೊಣೆ ಹೊತ್ತು ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ರಾಜೀನಾಮೆ ಕೊಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಅವರು ಒತ್ತಾಯಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಈ ಅವ್ಯವಹಾರದ ತನಿಖೆಯನ್ನು ನಿವೃತ್ತ ನ್ಯಾಯಾಧೀಶರಿಂದ ಅಥವಾ ಸ್ವತಂತ್ರ ತನಿಖಾ ಸಂಸ್ಥೆಯಿಂದ ನಡೆಸಬೇಕೆಂದು ಆಗ್ರಹಿಸಿದರು. ಮುಖ್ಯಮಂತ್ರಿಗಳು ಕೂಡಲೇ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರ ರಾಜೀ ನಾಮೆ ಪಡೆಯಬೇಕು ಇದೇ 24ರಂದು ಇದರ ಕುರಿತು ನಾವು ಲೋಕಾಯುಕ್ತರಿಗೆ ದೂರು ಕೊಡಲಿದ್ದೇವೆ. ರಾಜ್ಯಾಧ್ಯಕ್ಷರ ಜೊತೆ ಚರ್ಚಿಸಿ ಮಾನ್ಯ ರಾಜ್ಯಪಾಲರಿಗೂ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು. ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ದೊಡ್ಡ ಹಗರಣ ನಡೆದಿದೆ. ರೋಗಿಗಳಿಗೆ ಆರೋಗ್ಯ ಸೇವೆಗೆ ರಾಜ್ಯದ ಹಾವೇರಿ, ಗುಲ್ಬರ್ಗ, ಕೊಪ್ಪಳ, ಯಾದಗಿರಿ, ಬೆಂಗಳೂರು, ಮೈಸೂರು ಮೊದಲಾದ 18 ವೈದ್ಯಕೀಯ ಕಾಲೇಜುಗಳಿಗೆ 114 ಮಾಡ್ಯುಲರ್ ಆಪರೇಷನ್ ಥಿಯೇಟರ್ ಉಪಕರಣಗಳನ್ನು ಖರೀದಿಸಿದ್ದು, 176.70 ಕೋಟಿ ಖರ್ಚು ಮಾಡಿದ್ದಾರೆ ಎಂದರು.

ಟೆಂಡರ್ ಕರೆಯಲು ಕಂಪೆನಿ ಹೆಸರನ್ನು ಬದಲಿಸಿದ್ದು, ಕೋಟ್ಯಂತರ ರೂ. ಭ್ರಷ್ಟಾಚಾರ ನಡೆದಿದೆ. ವೈದ್ಯಕೀಯ ಶಿಕ್ಷಣ ಸಚಿವ, ವೈದ್ಯಕೀಯ ಶಿಕ್ಷಣ ಇಲಾಖೆ ಉನ್ನತಾಧಿಕಾರಿಗಳು ಈ ಹಗರಣದಲ್ಲಿ ಭಾಗವಹಿಸಿದ ದಟ್ಟವಾದ ಸುದ್ದಿ ಇದೆ. ಸರಕಾರವು ಶೇ 60 ಮತ್ತು ಸಂಬಂಧಿತ ಸಂಸ್ಥೆಯು ಆಂತರಿಕ ಸಂಪನ್ಮೂಲ ದಿಂದ ಶೇ 40 ಹಣ ಭರಿಸುತ್ತಿವೆ ಎಂದು ವಿವರಿಸಿದರು.

ಸರಕಾರಕ್ಕೆ 117 ಕೋಟಿ ನಷ್ಟವಾಗಿದೆ. ಡಾ.ಶರಣಪ್ರಕಾಶ್ ಪಾಟೀಲ್, ಅಧಿಕಾರಿಗಳು, ದಿನೇಶ್ ಗುಂಡೂರಾವ್, ಉಪಕರಣ ಸರಬರಾಜು ಮಾಡಿದ ಸಂಸ್ಥೆಗೆ ಇದರ ಲಾಭ ಆಗಿರುವ ಸಾಧ್ಯತೆ ಇದೆ. ಹಿಂದೆ 50 ಉಪಕರಣ ಪೂರೈಕೆ ಮಾಡಿದ ಕೇರಳ ವೈದ್ಯಕೀಯ ಸೇವಾ ನಿಗಮದ ಎಂ.ಎಸ್.ಕ್ರಿಯೇಟಿವ್ ಹೆಲ್ತ್ ಟೆಕ್ ಪ್ರೈವೆಟ್ ಲಿಮಿಡೆಟ್ ಸಂಸ್ಥೆ ಇದೇ ಮಾಡ್ಯುಲರ್ ಥಿಯೇಟರ್ ಉಪಕರಣಕ್ಕೆ ಪ್ರತಿಯೊಂದಕ್ಕೆ 49.70 ಲಕ್ಷದ (ಸುಮಾರು 50 ಲಕ್ಷ) ಟೆಂಡರ್‌ಗೆ ಹಾಕಿದ್ದರು.

3 ವರ್ಷ ವಾರಂಟಿ ಎಂದು ತಿಳಿಸಿದೆ. ಬೆಳಗಾವಿ ಸ್ಮಾರ್ಟ್ ಸಿಟಿ ಲಿಮಿಟೆಡ್ ಕಿಮ್ಸ್ ಆಸ್ಪತ್ರೆಯ ಟ್ರಾಮಾ ಸೆಂಟರ್ಗೆ ಮಾಡ್ಯುಲರ್ ಥಿಯೇಟರ್ಗೆ 1.10 ಕೋಟಿಯಂತೆ ಶಿವೋನ್ ಇಂಡಿಯ ಕಂಪೆನಿಗೆ (50 ಲಕ್ಷದ ಎಂ.ಎಸ್. ಕ್ರಿಯೇಟಿವ್ ಬಿಟ್ಟು) ಕಾರ್ಯಾದೇಶ ಮಾಡಿದೆ ಎಂದು ವಿವರ ನೀಡಿದರು.ವೈದ್ಯಕೀಯ ಶಿಕ್ಷಣ ಇಲಾಖೆಯು ಒಂದು ವರ್ಷ ವಾರಂಟಿ ಕೊಡುವ ಎಂ.ಎಸ್.ಲಕ್ಷ್ಮ್ಯಿ ವೆಂಚರ್ಸ್ ಪ್ರೈ. ಲಿ.,ಗೆ ಪ್ರತಿ ಮಾಡ್ಯುಲರ್ ಆಪರೇಷನ್ ಥಿಯೇಟರ್ಗೆ 1 ಕೋಟಿ 29 ಲಕ್ಷದ 69 ಸಾವಿರ ಹಾಗೂ ಜಿಎಸ್ಟಿ 23,33,800 ಒಟ್ಟು ಸೇರಿ 1.52 ಕೋಟಿಗೆ ನೀಡಲಾಗಿದೆ. ಕೇರಳದ್ದಾದರೆ ಸುಮಾರು 50 ಲಕ್ಷದಲ್ಲಿ ಖರೀದಿ ಆಗುತ್ತಿತ್ತು ಎಂದರು. ಕೇರಳದ ಸಂಸ್ಥೆಗೆ ಹೋಲಿಸಿದರೆ ಸುಮಾರು 3 ಪಟ್ಟು ಹೆಚ್ಚು ದರಕ್ಕೆ ಕೊಟ್ಟಿದ್ದು, ಹಗರಣ ನಡೆಸಲಾಗಿದೆ. ಒಂದು ಉಪಕರಣಕ್ಕೆ 1 ಕೋಟಿ ಲಾಭ ಸಿಗುತ್ತಿತ್ತು. 114 ಉಪಕರಣಕ್ಕೆ 117 ಕೋಟಿ ಅವ್ಯವಹಾರ ಆಗಿದೆ. ಟೆಂಡರ್‌ನಲ್ಲಿ ಹತ್ತಾರು ಕೋಟಿ ಕಿಕ್‌ಬ್ಯಾಕ್ ಸಂದಾಯವಾಗಿದೆ. ಟೆಂಡರ್ನಲ್ಲಿ 4 ಕಂಪೆನಿಗಳು ಬಿಡ್ ಸಲ್ಲಿಸಿದ್ದು 3 ಕಂಪೆನಿಗಳನ್ನು ತಿರಸ್ಕರಿಸಿದ್ದಾರೆ. ಯಾವ್ಯಾವ ಕಂಪೆನಿ ಎಷ್ಟು ದರದ ಬಿಡ್ ಸಲ್ಲಿಸಿದ್ದವು ಎಂದು ಕೇಳಿದ್ದು ಮಾಹಿತಿ ಕೊಟ್ಟಿಲ್ಲ ಎಂದು ಆಪಾದಿಸಿದರು. 114 ಉಪ ಕರಣ ಖರೀದಿಯಲ್ಲಿ 117 ಕೋಟಿ ಮೊತ್ತದ ಭ್ರಷ್ಟಾಚಾರ ಆಗಿದೆ ಎಂದು ಅವರು ಆರೋಪಿಸಿದರು.

ಕಾನೂನು ಪ್ರಕೋಷ್ಠದ ರಾಜ್ಯ ಸಂಚಾಲಕ ವಸಂತಕುಮಾರ್, ರಾಜ್ಯ ವಕ್ತಾರ ಮೋಹನ್ ವಿಶ್ವ, ಕಾನೂನು ಪ್ರಕೋಷ್ಠದ ರಾಜ್ಯ ಸದಸ್ಯ ರಮೇಶ್ ಸುಲ್ತಾನ್ಪುರ್ ಪ್ರಮುಖರು ಇದ್ದರು.

# 26 ರಂದು ಕೆಎಚ್‌ಐಆರ್ ಸಿಟಿ ಯೋಜನೆಗೆ ಸಿಎಂ ಚಾಲನೆ: ಎಂ.ಬಿ. ಪಾಟೀಲ



**ಬೆಂಗಳೂರು, ಸೆ. 22 :** ರಾಜ್ಯ ಸರಕಾರದ ಅತ್ಯಂತ ಮಹತ್ವಾಕಾಂಕ್ಷಿ ಯೋಜನೆಯಾದ ಕೆಎಚ್‌ಐಆರ್ ಸಿಟಿಯ ಮೊದಲ ಹಂತಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೆ.26ರಂದು ಚಾಲನೆ ನೀಡಲಿದ್ದಾರೆ. ಇದರ ಅಂಗವಾಗಿ ಅಂದು ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಕಾರ್ಯಕ್ರಮ ಏರ್ಪಡಿಸಿದ್ದು, ಇದರಲ್ಲಿ ದೇಶ–ವಿದೇಶಗಳ ಗಣ್ಯ ಉದ್ಯಮಿಗಳು, ಶಿಕ್ಷಣ ತಜ್ಞರು, ಸಂಶೋಧಕರು ಮತ್ತು ವೈದ್ಯಕೀಯ ಕ್ಷೇತ್ರದ ಸಾಧಕರು ಭಾಗವಹಿಸಲಿದ್ದಾರೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಈ ಬಗ್ಗೆ ಭಾನುವಾರ ಮಾಹಿತಿ ನೀಡಿರುವ ಅವರು, 'ಒಟ್ಟು 2,000 ಎಕರೆ ವಿಸ್ತೀರ್ಣದಲ್ಲಿ ಈ ಯೋಜಿತ ನಗರ ಮೈದಾಳಲಿದೆ. ಈ ಪೈಕಿ ಮೊದಲ ಹಂತದಲ್ಲಿ 500 ಎಕರೆಯಲ್ಲಿ ಕೆಎಚ್‌ಐಆರ್ ಸಿಟಿ ಸಾಕಾರಗೊಳ್ಳಲಿದೆ. 40 ಸಾವಿರ ಕೋಟಿ ರೂ. ಹೂಡಿಕೆಯ ಈ ಯೋಜನೆಯಿಂದ ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಒಂದು ಲಕ್ಷ ಉದ್ಯೋಗ ಸೃಷ್ಟಿಯಾಗಲಿದೆ ಎಂದಿದ್ದಾರೆ.

ಸಿಂಗಪುರದ ಬಯೊಪೊಲಿಸ್, ರೀಸರ್ಚ್ ಟ್ರ್ಯಾಂಗಲ್ ಪಾರ್ಕ್, ಸೈನ್ಸ್ ಪಾರ್ಕ್, ಕೆಬಿಐಸಿ, ಅಮೆರಿಕದ ಬೋಸ್ಟನ್ ಇನ್ನೋವೇಶನ್ ಕ್ಲಸ್ಟರ್ ಇದಕ್ಕೆ ಮಾದರಿಯಾಗಿದೆ. ಜತೆಗೆ ಬೆಂಗಳೂರಿನಲ್ಲಿ ಈಗಾಗಲೇ ಅಭಿವೃದ್ಧಿಪಡಿಸಿರುವ ಹೈಟೆಕ್ ಸಿಟಿ, ಎಲೆಕ್ಟ್ರಾನಿಕ್ ಸಿಟಿಯ ಮಾನದಂಡಗಳನ್ನೂ ಇಟ್ಟುಕೊಳ್ಳಲಾಗಿದೆ. ದೊಡ್ಡಬಳ್ಳಾಪುರ– ಡಾಬಸಪೇಟೆ ನಡುವೆ, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ 50 ಕಿ.ಮೀ. ದೂರದಲ್ಲಿ ಇದು ಅಸ್ತಿತ್ವಕ್ಕೆ ಬರಲಿದೆ ಎಂದು ಅವರು ತಿಳಿಸಿದ್ದಾರೆ.

ಶಿಕ್ಷಣ, ಆರೋಗ್ಯ, ನಾವೀನ್ಯತೆ ಮತ್ತು ಸಂಶೋಧನೆಯೇ ಈ ಪರಿಕಲ್ಪನೆಯ ಆಧಾರಸ್ತಂಭಗಳಾಗಿವೆ. ಜೀವವಿಜ್ಞಾನಗಳು, ಭವಿಷ್ಯದ ಸಂಚಾರ ವ್ಯವಸ್ಥೆ, ಸೆಮಿಕಂಡಕ್ಟರ್, ಅಡ್ವಾನ್ಸ್ಡ್ ಮ್ಯಾನುಫ್ಯಾಕ್ಚರಿಂಗ್ ಮತ್ತು ವೈಮಾಂತರಿಕ್ಷ, ರಕ್ಷಣೆ ಮತ್ತು ಬಾಹ್ಯಾಕಾಶ ತಂತ್ರಜ್ಞಾನ ಕ್ಷೇತ್ರಗಳಿಗೆ ಇಲ್ಲಿ ಆದ್ಯತೆ ನೀಡಲಾಗುವುದು. ಈ ವಲಯಗಳಿಗೆ ಸಂಬಂಧಿಸಿದ ಜಾಗತಿಕ ಮಟ್ಟದ ಉತ್ಕೃಷ್ಟ ವಿ.ವಿ.ಗಳು, ಸಂಶೋಧನಾಲಯಗಳು, ಆಸ್ಪತ್ರೆಗಳು ಮತ್ತು ಕಂಪನಿಗಳು ಕೆಎಚ್‌ಐಆರ್ ಸಿಟಿಯಲ್ಲಿ ನೆಲೆಯೂರಿ, ತಮ್ಮ ಚಟುವಟಿಕೆ ಆರಂಭಿಸಲಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಉದ್ದೇಶಿತ ಕೆಎಚ್‌ಐಆರ್ ಸಿಟಿಯಲ್ಲಿ ವಿಖ್ಯಾತ ಕಂಪನಿಗಳ ಆರ್ & ಡಿ ಕೇಂದ್ರಗಳು, ಗ್ಲೋಬಲ್ ಕೆಪಾಸಿಟಿ ಸೆಂಟರುಗಳು ಬರಲಿವೆ. ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಡಾ.ದೇವಿಶೆಟ್ಟಿ, ಕಿರಣ್ ಮಜುಂದಾರ್ ಷಾ, ಪ್ರಶಾಂತ ಪ್ರಕಾಶ, ಥಾಮಸ್ ಓಶಾ, ರಾಂಚ್ ಕಿಂಬಾಲ್, ಮೋಹನದಾಸ್ ಪೈ, ನಿಖಿಲ್ ಕಾಮತ್ ಮುಂತಾದ ಖ್ಯಾತನಾಮರನ್ನು ಒಳಗೊಂಡ ಸಲಹಾ ಸಮಿತಿ ರಚಿಸಲಾಗಿದೆ. ಇಲ್ಲಿ ಪ್ರತಿ ಎಕರೆಗೆ 100 ಜನರ ವಸತಿ ಇರುವಂತೆ ನೋಡಿಕೊಳ್ಳುವ ಗುರಿ ಇಟ್ಟುಕೊಳ್ಳಲಾಗಿದೆ ಎಂದು ಸಚಿವರು ವಿವರಿಸಿದ್ದಾರೆ.

ಬೆಂಗಳೂರಿನಲ್ಲಿ ಐಐಎಸ್ಸಿ, ನಾಸ್ಕಾಂ ಎಕ್ಸಲೆನ್ಸ್ ಸೆಂಟರ್, ರಾಷ್ಟ್ರೀಯ ವಿನ್ಯಾಸ ಸಂಸ್ಥೆ, ಐಐಟಿ, ಐಐಎಂ, ಸೆಂಟರ್ ಫಾರ್ ಎಐ & ರೋಬೋಟಿಕ್ಸ್, ಸೆಂಟರ್ ಫಾರ್ ನ್ಯಾನೋ & ಸಾಫ್ಟ್ ಮ್ಯಾಟರ್ ಸೈನ್ಸಸ್ ಮುಂತಾದ ಉತ್ಕೃಷ್ಟ ಸಂಸ್ಥೆಗಳಿವೆ. ಜೊತೆಗೆ ಐಟಿ, ಬಿಟಿ, ಔಷಧ ವಿಜ್ಞಾನ, ವೈದ್ಯಕೀಯ ಸಾಧನಗಳ ಉತ್ಪಾದನೆ ಇವುಗಳಲ್ಲಿ ಬೆಂಗಳೂರಿನ ಸಾಧನೆ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ. ಕೆಎಚ್‌ಐಆರ್ ಸಿಟಿಯಲ್ಲಿ ಜಗತ್ತಿನ ಅಗ್ರಮಾನ್ಯ 500 ಶಿಕ್ಷಣ ಸಂಸ್ಥೆಗಳ ಸ್ಥಳೀಯ ಕ್ಯಾಂಪಸ್ ಬರಲು ಇನ್ನು ಹಾದಿ ಸುಗಮವಾಗಲಿದೆ. ಅಲ್ಲದೆ, ವೈದ್ಯಕೀಯ ಪ್ರವಾಸೋದ್ಯಮ ಇತ್ಯಾದಿಗಳಿಗೂ ಹೇರಳ ಅವಕಾಶ ಸೃಷ್ಟಿಯಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.



ರಾಜ್ಯದ ಪರಿಸರ ರಾಯಭಾರಿ, ಸಾಲುಮರದ ತಿಮ್ಮಕ್ಕ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮನೆಗೆ ಭೇಟಿ ನೀಡಿ ಆಶೀರ್ವದಿಸಿದರು. ತಮ್ಮದೇ 113ನೇ ಹುಟ್ಟುಹಬ್ಬ ನಿಮಿತ್ತ ಹಮ್ಮಿಕೊಂಡಿರುವ ಕಾರ್ಯಕ್ರಮಕ್ಕೆ ಆಗಮಿಸಬೇಕು ಎಂದು ಆಹ್ವಾನ ನೀಡಿದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಜಮೀರ್ ಅಹಮದ್ ಮತ್ತಿತರರು ಹಾಜರಿದ್ದರು.

# ಅನಾಥ ಮಕ್ಕಳ ಮನೆಗೆ ಶಹಾಬಾದ ಸಿಡಿಪಿಒ ಭೇಟಿ



**ಕಲಬುರಗಿ, ಸೆ. 22 :** ಜಿಲ್ಲೆಯ ವಾಡಿ ಜಂಕ್ಷನ್‌ನ ಶ್ರೀಮಲ್ಲಿಕಾರ್ಜುನ ಬಡಾವಣೆಯಲ್ಲಿ ವಾಸವಿರುವ ಅನಾಥ ಮಕ್ಕಳ ಮನೆಗೆ ಶಹಾಬಾದ ಸಿಡಿಪಿಒ ವಿಜಯಲಕ್ಷ್ಮೀ ಹೇರೂರು ಭೇಟಿ ನೀಡಿ ಮಕ್ಕಳ ಯೋಗ ಕ್ಷೇಮ ವಿಚಾರಿಸಿದರು. ಭಾಗ್ಯಶ್ರೀ ಹಾಗೂ ಆಕಾಶ ಮಕ್ಕಳ ಕುಶಲೋಪರಿ ವಿಚಾರಿಸಿದ ಅವರು ಸರ್ಕಾರಿ ಸೌಲಭ್ಯಗಳ ಕುರಿತು ಮಕ್ಕಳ ಪೋಷಕರಿಗೆ ವಿವರಣೆ ನೀಡಿದರು.

ತಂದೆ ತಾಯಿಯನ್ನು ಕಳೆದುಕೊಂಡಿರುವ ಮಕ್ಕಳಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಸಹಾಯಧನ ನೀಡಲು ಈಗಾಗಲೇ ನಾವು ಸಿದ್ಧತೆ ಮಾಡಿಕೊಂಡಿದ್ದೇವೆ. ಮಕ್ಕಳ ಸಂಬಂಧಿಕರು ಒಪ್ಪಿದರೆ ಕಲಬುರಗಿ ಬಾಲಕರ ಬಾಲಮಂದಿರದಲ್ಲಿ ಶಿಕ್ಷಣ ಒದಗಿಸಲು ಸಿದ್ಧರಿದ್ದು ನಿಮ್ಮ ಮಕ್ಕಳನ್ನು ಕಳುಹಿಸಿಕೊಡಿ ಎಂದು ಪೋಷಕ ರಾಜು ಒಡೆಯರ್ ಅವರಿಗೆ ಮನವಿ ಮಾಡಿದರು.


ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಈ ಮಕ್ಕಳಿಗೆ ಒದಗಿಸುವಂತೆ ನಮ್ಮ ಅಧಿಕಾರಿಗಳಿಗೆ ನಾನು ಸೂಚನೆ ನೀಡಿದ್ದೇನೆ. ಕುಟುಂಬಕ್ಕೆ ಬಾಲಕರ ಬಾಲ ಮಂದಿರದಲ್ಲಿ ಬಿಡುವ ಉದ್ದೇಶ ಹೊಂದಿದ್ದರೆ ತಿಳಿಸಿ. ನಿಮ್ಮ ಮಕ್ಕಳ ಶಿಕ್ಷಣ ವ್ಯವಸ್ಥೆ ಇದ್ದು, ಮಕ್ಕಳ ರಕ್ಷಣೆಗೆ ಆದ್ಯತೆ ಹೊಂದಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಡಿಸಿಪಿ ಅವರಿಗೆ ಪತ್ರ ಬರೆದು ಮಾಹಿತಿ ತಿಳಿದುಕೊಳ್ಳುತ್ತೇವೆ ಎಂದರು.

ಮುರಾರ್ಜಿ ವಸತಿ ನಿಲಯದಲ್ಲಿ ನಮ್ಮ ಮಕ್ಕಳನ್ನು ಸೇರಿಸಲು ಉದ್ದೇಶಿಸಲಾಗಿದ್ದು, ಸಹಾಯ ಮಾಡುವಂತೆ ಸಿಡಿಪಿಒಗೆ ಪೋಷಕ ರಾಜು ಒಡೆಯರಾಜ ಒತ್ತಾಯಿಸಿದರು. 5ನೇ ತರಗತಿ ಬಳಿಕ ಅರ್ಜಿ ಹಾಕಿ ಪರೀಕ್ಷೆ ಬರೆಸಿ ನಾವು ಇಲಾಖೆಯಿಂದ ಒತ್ತಡ ಹೇರಿ ಶಾಲೆಗೆ ಸೇರಿಸೋಣ ಎಂದು ವಿಜಯಲಕ್ಷ್ಮೀ ಹೇರೂರ ಸಿಡಿಪಿಒ ತಿಳಿಸಿದರು. ಮೇಲ್ವಿಚಾರಕಿಯರಾದ ನಾಗಮ್ಮ ಸಂಗಶೆಟ್ಟಿ ಹಾಗೂ ಮಿನಾಕ್ಷಿ ಗುಂಡಗುರ್ತಿ ಹಾಗೂ ಅಂಗನವಾಡಿ ಕಾರ್ಯಕರ್ತೆ ಇದ್ದರು.

# ಬೀದಿಯಲ್ಲಿ ಕಸ ಹಾಕಿದವರಿಗೆ ದಂಡ

**ಬಳ್ಳಾರಿ, ಸೆ. 22 :** ಬಳ್ಳಾರಿ ನಗರದ 35ನೇ ವಾರ್ಡಿನ ಮಹಾನಗರ ಪಾಲಿಕೆಯ ಸದಸ್ಯ ವಿ.ಶ್ರೀನಿವಾಸುಲು ಮಿಂಚುರವರು ತಮ್ಮ 35ನೇ ವಾರ್ಡಿನಲ್ಲಿ ತಿರುಗಾಡುತ್ತಿರುವಾಗ ಹಲವು ಸಮಸ್ಯೆಗಳು ಕಂಡು ಬಂದಿದ್ದು ಅದನ್ನು ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿ ಮುನಾಫ್ ಪಟೇಲ್ ಹಾಗೂ ಪರ್ವೀನ್ ಶೇಖ್ ಅವರ ಜೊತೆಗೂಡಿ ಸಮಸ್ಯೆಯನ್ನು ಪರಿಶೀಲಿಸುತ್ತಿರುವಾಗ ವಾರ್ಡಿನ ಎಂ ಕೆ ನಗರದಲ್ಲಿ ಗೃಹಿಣಿಯೊಬ್ಬರು ಕಸವನ್ನು ರಸ್ತೆಗೆ ಹಾಕಿದ್ದನ್ನು ನೋಡಿದ ವಾರ್ಡಿನ ಪಾಲಿಕೆ ಸದಸ್ಯ ಶ್ರೀನಿವಾಸುಲು ಮಿಂಚು, ಮಹಿಳೆಯನ್ನು ತಡೆದು ಅಧಿಕಾರಿಗಳಿಂದ ಅವರಿಗೆ ದಂಡವನ್ನು ಹಾಕಿಸಿ ಮತ್ತೊಮ್ಮೆ ಈ ರೀತಿ ಹಾಕಬಾರದು ಮತ್ತು ಹಾಕಿಸಬಾರದು ಎಂದು ತಿಳಿಹೇಳಿದರು. ಈ ಸಂದರ್ಭದಲ್ಲಿ ವಾರ್ಡಿನ ಪ್ರಮುಖರು,ಮಹಾನಗರ ಪಾಲಿಕೆ ಸಿಬ್ಬಂದಿ ಬಸವರಾಜ್ ತಾಂಬಾಕಿ, ಕಿರಣ್ ಕುಮಾರ್ ಹಾಗೂ ಸ್ಥಳೀಯರು ಹಾಜತರಿದ್ದರು.

# ಯಾವ ಕಾಲಕ್ಕೂ ರಾಹುಲ್ ಗಾಂಧಿ ನೇತೃತ್ವದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲ್ಲ



**ಹುಬ್ಬಳ್ಳಿ, ಸೆ. 22 :** ರಾಹುಲ್ ಗಾಂಧಿ ನೇತೃತ್ವದಲ್ಲಿ ನಾವೆಂದೂ ಅಧಿಕಾರಕ್ಕೆ ಬರೋದಿಲ್ಲ ಎಂಬುದು ಕಾಂಗ್ರೆಸ್ಸಿಗರಿಗೆ ಮನವರಿಕೆಯಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಚಾಟಿ ಬೀಸಿದ್ದಾರೆ. ಹುಬ್ಬಳ್ಳಿಯಲ್ಲಿ ಇಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ರಾಹುಲ್ ಗಾಂಧಿ ನಾಯಕತ್ವದಲ್ಲಿ ತಾವು ಅಧಿಕಾರಕ್ಕೆ ಬರಲು ಸಾಧ್ಯವೇ ಇಲ್ಲ ಎಂಬ ಸತ್ಯ ಕಾಂಗ್ರೆಸ್ಸಿಗರಿಗೆ ಗೊತ್ತಾಗಿದೆ. ಹಾಗಾಗಿ ಶತಾಯ–ಗತಾಯ ಕೇಂದ್ರ ಸರ್ಕಾರ ವಿರುದ್ಧ ಇಲ್ಲ ಸಲ್ಲದ ಮಾತಾಡುತ್ತಾರೆ ಅಷ್ಟೇ ಎಂದು ಹೇಳಿದರು.

**ಯಾವ ಕಾಲಕ್ಕೂ ಬಿಜೆಪಿಯೇ ಬಲಿಷ್ಠ :** ಭಾರತದಲ್ಲಿ ಯಾವುದೇ ಕಾಲಕ್ಕೂ ಬಿಜೆಪಿಯೇ ಬಲಿಷ್ಠವಾಗುತ್ತದೆ. ಸದ್ಯ ಮೋದಿ ನಾಯಕತ್ವದಲ್ಲಿ ಪ್ರಬಲವಾಗಿದೆ. ಕೆಲವು ವರ್ಷಗಳ ನಂತರ ಮತ್ಯಾರೋ ಪ್ರಬಲ ನೇತಾರರು ಮುಂಚೂಣಿಗೆ ಬರುತ್ತಾರೆ. ಕಾಂಗ್ರೆಸ್ ಅಧಿಕಾರದ ನಿರೀಕ್ಷೆಯಲ್ಲೇ ಕಾಲ ಕಳೆಯಬೇಕಾಗುತ್ತದೆ ಎಂದು ಸಚಿವ ಜೋಶಿ ಹೇಳಿದರು.

**ಹತಾಶೆಯಲ್ಲಿ ಕೇಂದ್ರದ ನಿರ್ಣಯಗಳನ್ನು ವಿರೋಧಿಸುತ್ತದೆ ಕಾಂಗ್ರೆಸ್:** ಮುಂದೆಯೂ ಅಧಿಕಾರಕ್ಕೆ ಬರುವುದು ಅಸಾಧ್ಯ ಎಂಬ ಹತಾಶೆಯಲ್ಲಿ ಕಾಂಗ್ರೆಸ್, ಒಂದು ದೇಶ ಒಂದು ಚುನಾವಣೆಗೆ ವಿರೋಧ ವ್ಯಕ್ತಪಡಿಸುತ್ತಿದೆ ಎಂದು ಜೋಶಿ ಪ್ರತಿಕ್ರಿಯಿಸಿದರು ಕೇಂದ್ರ ಸರ್ಕಾರ ಕೈಗೊಳ್ಳುವ ಯಾವುದೇ ನಿರ್ಣಯವನ್ನು ಕಾಂಗ್ರೆಸ್ ವಿರೋಧಿಸುತ್ತಲೆ ಇದೆ. ಇದಕ್ಕೆ ಅವರಲ್ಲಿನ ಹತಾಶ ಮನಸ್ಥಿತಿಯೇ ಕಾರಣ ಎಂದು ಹೇಳಿದರು.

**ದೇಶಾದ್ಯಂತ ಕಡಿಮೆ ಬೆಲೆಗೆ ಈರುಳ್ಳಿ :** ಬೆಂಗಳೂರು ಮಾತ್ರವಲ್ಲ ದೇಶಾದ್ಯಂತ ಈರುಳ್ಳಿ ಕಡಿಮೆ ಬೆಲೆಗೆ ಈರುಳ್ಳಿ ಕೈಗೆಟುಕುವಂತೆ ಕೇಂದ್ರ ಕ್ರಮ ಕೈಗೊಂಡಿದೆ ಎಂದು ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ತಿಳಿಸಿದರು.

ದೇಶಾದ್ಯಂತ 570 ಕಡೆ ಬೆಲೆ ಮಾನಿಟರಿಂಗ್ ಕೇಂದ್ರಗಳಿವೆ. ಎಲ್ಲ ಕಡೆಯೂ ಬೆಲೆ ನಿಯಂತ್ರಿಸಿ ಕಡಿಮೆ ಬೆಲೆಗೆ ಕೇಂದ್ರವೇ ಪೂರೈಸುತ್ತದೆ ಎಂದು ಹೇಳಿದರು.


# ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲ



**ಬೆಂಗಳೂರು, ಸೆ. 22 ;** ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅವರ ಸಂಪುಟದ ಸಹೋದ್ಯೋಗಿಗಳು ಭ್ರಷ್ಟಾಚಾರದಲ್ಲಿ ನಿರತವಾಗಿದ್ದು, ಇಂತಹ ಸರ್ಕಾರದಿಂದ ಉತ್ತಮ ಆಡಳಿತ ನಿರೀಕ್ಷಿಸುವುದು ಹೇಗೆ ಸಾಧ್ಯ ಎಂದು ಬಿಜೆಪಿ ಹಿರಿಯ ನಾಯಕ ಡಾ. ಸಿ.ಎನ್. ಅಶ್ವತ್ಥ ನಾರಾಯಣ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವತಃ ಭ್ರಷ್ಟಾಚಾರದ ಆರೋಪ ಎದುರಿಸುತ್ತಿದ್ದಾರೆ. ಜೊತೆಗೆ ಅವರ ತಂಡದ ಮೇಲೂ ಹಲವು ಆರೋಪ ಪ್ರಕರಣಗಳು ಕೇಳಿ ಬಂದಿವೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. ಸ್ವಹಿತಾಸಕ್ತಿ ಕಾಪಾಡಿಕೊಳ್ಳಲು ಮುಂದಾಗಿದೆ ಎಂದು ಆರೋಪಿಸಿದರು. ತುಮಕೂರು ವಿಶ್ವವಿದ್ಯಾಲಯದಲ್ಲಿ ಗಣಪತಿ ವಿಸರ್ಜನೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಭಾಗವಹಿಸದಂತೆ ಕುಲಸಚಿವರು ಮತ್ತು ಅಲ್ಲಿನ ಇನ್‌ಸ್ಪೆಕ್ಟರ್ ಸುತ್ತೋಲೆ ಹೊರಡಿಸಿರುವುದು ಖಂಡನಾರ್ಹ. ಗಣಪತಿ ವಿಸರ್ಜನೆ ಸಂದರ್ಭದಲ್ಲಿ ಸಮಾಜಘಾತುಕ ಶಕ್ತಿಗಳು ಪಾಲ್ಗೊಂಡಿದ್ದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಿ, ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಡಿ ಎಂದು ಹೇಳಲು ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.

# ತೇಗದಮರ ಎಷ್ಟು ವರ್ಷಕ್ಕೆ ಕತ್ತರಿಸಬೇಕು



**ಬೆಂಗಳೂರು, ಸೆ, 22;** ಅರಣ್ಯ ಇಲಾಖೆ ನೆಡುತೋಪುಗಳಲ್ಲಿ ಬೆಳೆಸಿರುವ ತೇಗದ ಮರವನ್ನು ಎಷ್ಟು ವರ್ಷಕ್ಕೆ ಕತ್ತರಿಸಬೇಕು ಎಂಬ ಬಗ್ಗೆ ಶೀಘ್ರ ನಿರ್ಧಾರ ಕೈಗೊಳ್ಳುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅರಣ್ಯ ಇಲಾಖೆ ಮರಮುಟ್ಟುಗಳಿಗಾಗಿಯೇ ಕೆಲವೊಂದು ನಿರ್ದಿಷ್ಟ ಪ್ರದೇಶಗಳಲ್ಲಿ ತೇಗದ ಮರಗಳನ್ನು ಬೆಳೆಸಿರುತ್ತದೆ. ಇದರ ಕತ್ತಾವಣೆ 80 ವರ್ಷಕ್ಕೋ ಅಥವಾ 120 ವರ್ಷಕ್ಕೋ ಎಂಬ ಬಗ್ಗೆ ಜಿಜ್ಞಾಸೆ ಇದೆ.

ಈ ಹಿನ್ನೆಲೆಯಲ್ಲಿ ಎ.ಪಿ.ಸಿ.ಸಿ.ಎಫ್. ನೇತೃತ್ವದಲ್ಲಿ ಒಂದು ಸಮಿತಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಈಗಾಗಲೇ ಕಾರ್ಯೋಜನೆ, ಸಂಶೋಧನೆ ಹಾಗೂ ಶಿರಸಿ ಅರಣ್ಯಶಾಸ್ತ್ರ ಕಾಲೇಜಿನ ತಜ್ಞರು ವೈಜ್ಞಾನಿಕವಾಗಿ ಅಧ್ಯಯನ ಮಾಡಿ ವರದಿ ಸಲ್ಲಿಸಿರುತ್ತಾರೆ. ಆದಷ್ಟು ಶೀಘ್ರ ಇದನ್ನು ಪೂರ್ಣಗೊಳಿಸುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಿಗೆ ಸೂಚಿಸಲಾಗಿದೆ ಎಂದು ಅರಣ್ಯ ಸಚಿವರು ಹೇಳಿದ್ದಾರೆ.

# ಬೆಸ್ಕಾಂ ಬಿಲ್‌ನಲ್ಲಿ ಆಸ್ತಿಗಳ ಗುರುತಿನ ಸಂಖ್ಯೆ ನಮೂದು: ತುಷಾರ್ ಗಿರಿನಾಥ




**ಬೆಂಗಳೂರು, ಸೆ. 22 :** ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಆಸ್ತಿಗಳ ಗುರುತಿನ ಸಂಖ್ಯೆಯನ್ನು(ಪಿಐಡಿ) ಬೆಸ್ಕಾಂನ ವಿದ್ಯುತ್ ಬಿಲ್‌ನಲ್ಲಿ ನಮೂದಿಸಲಾಗಗುವುದು ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದ್ದಾರೆ. ಭಾನುವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ಜಿಪಿಎಸ್ ಮಾಹಿತಿಯನ್ನು ಪ್ರತಿ ಆಸ್ತಿಗೂ ಸೆರೆ ಹಿಡಿಯುವ ಅಭಿಯಾನವನ್ನೂ ಆರಂಭಿಸಲಾಗಿದೆ. ಇದಕ್ಕಾಗಿ ಬಿಬಿಎಂಪಿ ಅಧಿಕಾರಿಗಳು ಆಸ್ತಿಗಳಿಗೆ ಭೇಟಿ ನೀಡಲಿದ್ದಾರೆ.

ಮಾಲೀಕರು ಸಹಕಾರ ನೀಡಬೇಕೆಂದು ಮನವಿ ಮಾಡಿದರು. ಮೊಬೈಲ್ ಅಪ್ಲಿಕೇಶನ್ ಮೂಲಕ ವಾರ್ಡ್‌ಗಳಲ್ಲಿರುವ ಎಲ್ಲ ಸ್ವತ್ತುಗಳನ್ನು ಈಗಾಗಲೇ ಪಟ್ಟಿ ಮಾಡಲಾಗಿದೆ. ಬೆಸ್ಕಾಂ ಬಿಲ್ಲುಗಳಲ್ಲೂ ಆಸ್ತಿಗಳ ಪಿಐಡಿ ನಮೂದಿಸುವುದರಿಂದ ಸ್ವತ್ತಿನ ಸಮರ್ಪಕ ಮಾಹಿತಿ ಲಭ್ಯವಾಗುತ್ತದೆ. ಈ ಬಗ್ಗೆ ಬೆಸ್ಕಾಂನೊಂದಿಗೆ ಮಾತುಕತೆ ನಡೆಸಲಾಗಿದ್ದು, ಇದಕ್ಕೆ ಅವರು ಒಪ್ಪಿಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಜಿಪಿಎಸ್ ಸೆರೆಹಿಡಿದು ತಂತ್ರಾಂಶದಲ್ಲಿ 'ಸಿಟಿಜನ್ ಮಾಡ್ಯೂಲ್' ಯೋಜನೆ ಆರಂಭಿಸಲಾಗುವುದು. ಯೋಜನೆಯಡಿ ನಾಗರಿಕರೇ ನಮ್ಮ ಸ್ವತ್ತುಗಳನ್ನು ಜಿಪಿಎಸ್ ಸೆರೆಹಿಡಿದು ಸಲ್ಲಿಸಬಹುದು ಎಂದು ಹೇಳಿದರು.

**75 ಕೋಟಿ ಮೌಲ್ಯದ ಒತ್ತುವರಿ ತೆರವು :** ಬಿಬಿಎಂಪಿ ವ್ಯಾಪ್ತಿಯಲ್ಲಿ ಕೆರೆಗಳ ಪ್ರದೇಶದಲ್ಲಿ ಜಾಗ ಒತ್ತುವರಿ ತೆರವುಗೊಳಿಸುವ ಕಾರ್ಯ ಜಾರಿಯಲ್ಲಿದೆ ಎಂದು ಬಿಬಿಎಂಪಿ ವಿಭಾಗದ ಅರಣ್ಯ, ಪರಿಸರ ಮತ್ತು ಹವಾಮಾನ ವೈಪರೀತ್ಯ ನಿರ್ವಹಣೆಯ ವಿಶೇಷ ಆಯುಕ್ತೆ ಪ್ರೀತಿ ಗೆಹ್ಲೋಟ್ ಹೇಳಿದ್ದಾರೆ. ಮಹದೇವಪುರ ವಲಯದ ದೊಡ್ಡನೆಕ್ಕುಂದಿ ಕೆರೆಗೆ ಸಂಬಂಧಿಸಿದಂತೆ ಕಂದಾಯ ಇಲಾಖೆ ನಡೆಸಿದ್ದ ಸರ್ವೇಯಲ್ಲಿ 2 ಎಕರೆ 6 ಗುಂಟೆ ಕೆರೆಯ ಪ್ರದೇಶ ಒತ್ತುವರಿಯಾಗಿರುವುದು ಪತ್ತೆಯಾಗಿತ್ತು. ಈ ಹಿನ್ನೆಲೆಯಲ್ಲಿ ಇಲಾಖೆಯ ಸಹಕಾರದೊಂದಿಗೆ ಒತ್ತುವರಿ ಪ್ರದೇಶವನ್ನು ತೆರವುಗೊಳಿಸಿ ತಂತಿಬೇಲಿ ಅಳವಡಿಸಲಾಗುತ್ತಿದೆ. ಈ ಜಾಗದ ಮಾರುಕಟ್ಟೆ ಮೌಲ್ಯ 75 ಕೋಟಿ ರೂ. ಆಗಿದೆ ಎಂದರು.

# ಬೆಂಗಳೂರಿನಲ್ಲಿ ಶ್ರದ್ಧಾ ಮಾದರಿ ಕೇಸ್: ಯುವತಿಯನ್ನು ಕೊಂದು 30ಕ್ಕೂ ಅಧಿಕ ಪೀಸ್ ಮಾಡಿ ಫ್ರಿಜ್‌ನಲ್ಲಿಟ್ಟ ಹಂತಕ



**ಬೆಂಗಳೂರು, ಸೆ. 22 :** ಬೆಂಗಳೂರಿನಲ್ಲಿ ಇಡೀ ರಾಜ್ಯವೇ ಬೆಚ್ಚಿ ಬೀಳಿಸಿದ ದೆಹಲಿಯ ಶ್ರದ್ಧಾ ವಾಕರ್ ಮಾದರಿಯ ಭೀಕರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಇದೀಗ ಶಿವಾಜಿನಗರದಲ್ ಇರುವ ಬೌರಿಂಗ್ ಆಸ್ಪತ್ರೆಯಲ್ಲಿ ಹತ್ಯೆಗೆ ಒಳಗಾದ ಮಹಾಲಕ್ಷ್ಮಿಯ ಮರಣೋತ್ತರ ಪರೀಕ್ಷೆ ಅಂತ್ಯವಾಗಿದೆ.

ಶಿವಾಜಿನಗರದ ಬೌರಿಂಗ್ ಆಸ್ಪತ್ರೆಯಲ್ಲಿ ಮಹಾಲಕ್ಷ್ಮಿ ಮರಣೋತ್ತರ ಪರೀಕ್ಷೆ ಅಂತ್ಯವಾಗಿದ್ದು, ಸುಮಾರು 2 ಗಂಟೆಗಳಿಗೂ ಹೆಚ್ಚು ಕಾಲ ಮಹಾಲಕ್ಷ್ಮಿ ಮರಣೋತ್ತರ ಪರೀಕ್ಷೆ ನಡೆದಿದ್ದು, ಇದೀಗ ಮರಣೋತ್ತರ ಪರೀಕ್ಷೆ ಅಂತ್ಯವಾದ ಬಳಿಕ ದೇಹದ ಪೀಸ್ ಗಳನ್ನು ಕುಟುಂಬಸ್ಥರಿಗೆ ಆಸ್ಪತ್ರೆಯ ವೈದ್ಯರು ಹಸ್ತಾಂತರಿಸಿದ್ದಾರೆ.

ಸದ್ಯ ದೇಹದ ಪೀಸ್ ಗಳನ್ನು ಕುಟುಂಬಸ್ಥರು ಚಿತಾಗಾರಕ್ಕೆ ತೆಗೆದುಕೊಂಡು ಹೋಗುತ್ತಿದ್ದು, ಲಾಲ್ ಬಾಗಿನ ಚಿತಾಗಾರದಲ್ಲಿ ಮಹಾಲಕ್ಷ್ಮಿಯ ಅಂತ್ಯ ಸಂಸ್ಕಾರವು ಕುಟುಂಬಸ್ಥರಿಂದಲೇ ನೆರವೇರಲಿದೆ ಎಂದು ಬಲಮೂಲಗಳಿಂದ ತಿಳಿದುಬಂದಿದೆ

# ನಾಲ್ಕು ವರ್ಷ ಶ್ರಮಿಸಿದರೆ, ನಲವತ್ತು ವರ್ಷ ಸಮೃದ್ಧ ಜೀವನ : ಡಾ.ಯಶವಂತ್ ಭೂಪಾಲ್



**ಬಳ್ಳಾರಿ, ಸೆ. 22 :** ನಾಲ್ಕು ವರ್ಷ ಶ್ರಮಿಸಿದರೆ, ನಲವತ್ತು ವರ್ಷ ಸಂತೋಷದಿಂದ ಜೀವನ ಸಾಗಿಸಬಹುದು ಎಂದು ಬಳ್ಳಾರಿ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ & ಮ್ಯಾನೇಜ್‌ಮೆಂಟ್‌ನ ಅಧ್ಯಕ್ಷ ಡಾ. ಯಶವಂತ್ ಭೂಪಾಲ್ ಅವರು ಇಂದು ಕಾಲೇಜಿನಲ್ಲಿ ನಡೆದ ಪ್ರಥಮ ವರ್ಷದ ತರಗತಿಗಳ ಉದ್ಘಾಟನಾ ಸಮಾರಂಭದಲ್ಲಿ ವಿದ್ಯಾರ್ಥಿಗಳನ್ನು ಪ್ರೇರೇಪಿಸಿದರು. ನಮ್ಮ ಕಾಲೇಜಿನ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ರಾಘವೇಂದ್ರ ಪ್ರಸಾದ್ ಮತ್ತು ವೀರೇಶ್ ಡಿ. ಆರ್ ಇತ್ತೀಚಿನ ಇಸ್ರೋದಿಂದ ಉಡಾವಣೆಯಾದ ಚಂದ್ರಯಾನ–3 ಪ್ರಾಜೆಕ್ಟ್‌ನಲ್ಲಿ ಪ್ರಮುಖವಾದ ಕೊಡುಗೆ ನೀಡಿದ ಬಗ್ಗೆ ಕೃತಜ್ಞತೆ ವ್ಯಕ್ತಪಡಿಸಿ, ಇಂತಹ ಸಾಧನೆಗಳಿಗೆ ಕಠಿಣ ಪರಿಶ್ರಮ ಮತ್ತು ಸಮಯ ಬಳಕೆಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.

ಪ್ರಾಚಾರ್ಯರಾದ ಡಾ. ಯಡವಳ್ಳಿ ಬಸವರಾಜ್, ತಮ್ಮ ಮಾತುಗಳಲ್ಲಿ, ಕಾಲೇಜಿನ ಶೈಕ್ಷಣಿಕ ವ್ಯವಸ್ಥೆ, ತರಬೇತಿ, ಮತ್ತು ಉದ್ಯೋಗಾವಕಾಶಗಳನ್ನು ವಿವರಣೆಗೂಡಿಸಿದರು. ವಿದ್ಯಾರ್ಥಿಗಳು ಮತ್ತು ಪೋಷಕರು ಕಾಲೇಜಿನ ಶ್ರೇಷ್ಠ ಚಟುವಟಿಕೆಗಳ ಬಗ್ಗೆ ಮಾಹಿತಿಯನ್ನು ಪಡೆದು ಹೆಚ್ಚಿನ ಆತ್ಮವಿಶ್ವಾಸದೊಂದಿಗೆ ಮುಂದುವರಿಯುವಂತೆ ತಿಳಿಸಿದರು. ವಿದ್ಯಾರ್ಥಿಗಳನ್ನು ಕಾಲೇಜಿನ ಅತಿದೊಡ್ಡ ಸಂಪತ್ತಾಗಿ ಪರಿಗಣಿಸಿ, ಪೋಷಕರಿಗೆ ಸಂಸ್ಥೆಯ ಶ್ರೇಯಸ್ಸು ಮತ್ತು ಸಮರ್ಪಣೆಯ ಮಹತ್ವವನ್ನು ಸಾರಿದರು.

ಟ್ರಸ್ಟ್ ಅಧ್ಯಕ್ಷರಾದ ಡಾ. ಎಸ್. ಜೆ. ವಿ. ಮಹಿಪಾಲ್, ಬಸವರಾಜೇಶ್ವರಿ ಸಮೂಹ ಶಿಕ್ಷಣ ಸಂಸ್ಥೆಗಳು ಹೇಗೆ ಸ್ಥಾಪನೆಗೊಂಡವು ಎಂಬುದರ ಕುರಿತು ವಿವರವಾಗಿ ಮಾತನಾಡಿದ ಅವರು, ಈ ಸಂಸ್ಥೆಯ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಿದ ಹಿರಿಯರು, ದಾತರು, ಮತ್ತು ಸಮಾಜದ ಗಣ್ಯರನ್ನು ನೆನೆಸಿ, ಸಂಸ್ಥೆಯ ಪ್ರಗತಿಗೆ ನೀಡಿದ ಅತ್ಯುನ್ನತ ಸೇವೆಯನ್ನು ಪ್ರಶಂಸಿಸಿದರು.

ನಿರ್ದೇಶಕರಾದ ವೈ. ಜೆ. ಪೃಥ್ವಿರಾಜ್ ಭೂಪಾಲ್ ಅವರು ವಿದ್ಯಾರ್ಥಿಗಳಿಗೆ ಓದಿನ ಜೊತೆಗೆ ಕೌಶಲ್ಯಾಭಿವೃದ್ಧಿಯನ್ನೂ ಬೆಳೆಸಿಕೊಳ್ಳಿ ಎಂದು ಸಲಹೆ ನೀಡಿದರು.

# ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ನಿರಂತರ ಶ್ರಮ: ಪ್ರಭು ಚವ್ಹಾಣ



ಬೀದರ ಜಿಲ್ಲೆಯ ಔರಾದ್‌ನಲ್ಲಿ ಜರುಗಿದ 2024–25ನೇ ಸಾಲಿನ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಶಾಸಕ ಪ್ರಭು ಚವ್ಹಾಣ್ ಉದ್ಘಾಟಿಸಿದರು.

**ಬೀದರ್, ಸೆ. 22:** ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯವಾಗಿದ್ದು, ಮಕ್ಕಳಿಗೆ ಪಾಠದ ಜೊತೆಗೆ ಉತ್ತಮ ಸಂಸ್ಕಾರಗಳನ್ನು ಕಲಿಸಬೇಕು. ಸಾಂಸ್ಕೃತಿಕ ಚಟುವಟಿಕೆ, ಕ್ರೀಡೆಗಳಲ್ಲಿ ಪಾಲ್ಗೊಳ್ಳಲು ಪ್ರೇರಣೆ ನೀಡಬೇಕು. ದೇಶಪ್ರೇಮ ಮೂಡಿಸಬೇಕು ಎಂದು ಶಾಸಕ ಪ್ರಭು ಚವ್ಹಾಣ್ ಹೇಳಿದರು.

ಜಿಲ್ಲೆಯ ಔರಾದನಲ್ಲಿ ಜರುಗಿದ 2024–25ನೇ ಸಾಲಿನ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕ್ಷೇತ್ರ ಶಿಕ್ಷಣ ರಂಗ ಸಾಕಷ್ಟು ಸುಧಾರಿಸಿದೆ. ಪ್ರತಿ ವರ್ಷ ಫಲಿತಾಂಶದಲ್ಲಿ ಸಾಕಷ್ಟು ಸುಧಾರಣೆ ಕಂಡಿದೆ. ಆದರೆ ಈ ವರ್ಷ ಕಡಿಮೆಯಾಗಿರುವುದಕ್ಕೆ ಬೇಸರವಿದೆ. ಎಲ್ಲ ಶಿಕ್ಷಕರು ಫಲಿತಾಂಶ ಸುಧಾರಣೆಗೆ ಪ್ರಯತ್ನಿಸಬೇಕು. ಮಕ್ಕಳು ಕ್ರೀಡಾ ಕ್ಷೇತ್ರದಲ್ಲಿಯೂ ಸಾಧಿಸಬೇಕೆಂಬ ಉದ್ದೇಶದಿಂದ ಔರಾದ್‌ನಲ್ಲಿ ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣ ನಿರ್ಮಿಸಲಾಗಿದೆ. ಇದರ ಸದ್ಬಳಕೆಯಾಗಬೇಕು. ನಮ್ಮ ಕ್ಷೇತ್ರದ ಮಕ್ಕಳು ಕೂಡ ರಾಜ್ಯಮಟ್ಟದಲ್ಲಿ ಗೆಲುವು ಸಾಧಿಸಬೇಕು. ಈ ದಿಸೆಯಲ್ಲಿ ಶಿಕ್ಷಕರು ಪ್ರಯತ್ನ ವಹಿಸಬೇಕು ಎಂದರು. ಎಲ್ಲ ಕ್ಷೇತ್ರಗಳ ಅಭಿವೃದ್ಧಿಗೆ ಪೂರಕವಾಗಿರುವ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ನಿರಂತರ ಶ್ರಮ ವಹಿಸುತ್ತಿದ್ದು, ಪ್ರತಿ ವರ್ಷ ಶಿಕ್ಷಕರು, ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರ ಆತ್ಮಬಲವನ್ನು ವೃದ್ಧಿಸುವ ಕೆಲಸ ಮಾಡುತ್ತಾ ಬರುತ್ತಿದ್ದೇನೆ. ನನ್ನ ಕ್ಷೇತ್ರದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆತು ಐಎಎಸ್, ಐಪಿಎಸ್‌ನಂತಹ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು. ಈ ಸಂಕಲ್ಪದೊಂದಿಗೆ ಕೆಲಸ ಮಾಡುತ್ತಿದ್ದು, ಶಿಕ್ಷಕರು ಸಹಕರಿಸಬೇಕು ಎಂದು ಕೋರಿದರು.

**ಶಿಕ್ಷಣ ಪ್ರಗತಿಗೆ ಬದ್ಧ :** ಶಿಕ್ಷಣ ಕ್ಷೇತ್ರದ ಅಭಿವೃದ್ಧಿಯೇ ನನ್ನ ಮೊದಲ ಆದ್ಯತೆಯಾಗಿದ್ದು, ಶಾಲಾ–ಕಾಲೇಜುಗಳ ಅಭಿವೃದ್ಧಿಗೆ ಒತ್ತು ಕೊಟ್ಟಿದ್ದೇನೆ. ಐಟಿಐ, ಡಿಪ್ಲೋಮಾ ಕಾಲೇಜುಗಳನ್ನು ನಿರ್ಮಿಸಲಾಗಿದೆ. ಕಿತ್ತೂರು ರಾಣಿ ಚನ್ನಮ್ಮ, ಡಾ.ಬಿ.ಆರ್ ಅಂಬೇಡ್ಕರ್, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಆದರ್ಶ ವಿದ್ಯಾಲಯಗಳನ್ನು ನಿರ್ಮಿಸಲಾಗುತ್ತಿದೆ. ಶಿಕ್ಷಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಯಾವುದೇ ಕೆಲಸವಿರಲಿ, ಶಿಕ್ಷಕರು ನನ್ನನ್ನು ನೇರವಾಗಿ ಭೇಟಿಯಾಗಿ ಈಡೇರಿಸಿಕೊಳ್ಳಬಹುದು. ಶಿಕ್ಷಣದ ಪ್ರಗತಿಗೆ ಸದಾ ಬದ್ಧನಿದ್ದೇನೆ ಎಂದರು.

ಔರಾದ ಮತ್ತು ಕಮಲನಗರ ತಾಲ್ಲೂಕಿನ ಸಮಗ್ರ ಅಭಿವೃದ್ಧಿಗೆ ನಿರಂತರ ಶ್ರಮ ವಹಿಸುತ್ತಿದ್ದು, ಬಲ್ಲೂರ್‌ನಲ್ಲಿ ಸಿಪೆಟ್ ಕೇಂದ್ರ ಮಂಜೂರಾಗಿದ್ದು, ಕೆಲಸ ಆರಂಭಿಸಲಾಗುತ್ತದೆ. ನಾಗೂರ (ಬಿ) ನಲ್ಲಿ 220 ಕೆ.ವಿ ವಿದ್ಯುತ್ ಉಪ ಕೇಂದ್ರ ನಿರ್ಮಾಣ ಕೆಲಸ ನಡೆಯುತ್ತಿದೆ. ಕೆರೆ ತುಂಬುವ ಯೋಜನೆ, ಕಾರಂಜಾ ಜಲಾಶಯದಿಂದ ಔರಾದ್‌ಗೆ ನೀರು ಪೂರೈಸುವ ಯೋಜನೆಗಳು ಅನುದಾನದ ಕೊರತೆಯಿಂದಾಗಿ ನಿಂತಿದ್ದು, ಎಲ್ಲ ಅಭಿವೃದ್ಧಿ ಕೆಲಸಗಳಿಗೆ ವೇಗ ನೀಡಲಾಗುವುದು ಎಂದು ಹೇಳಿದರು.

ಭಾಲ್ಕಿ ಹಿರೇಮಠ ಸಂಸ್ಥಾನ ಹಿರೇಮಠದ ಶ್ರೀ ಗುರುಬಸವ ಪಟ್ಟದ್ದೇವರು ಮಾತನಾಡಿ ಶಾಸಕ ಪ್ರಭು ಚವ್ಹಾಣ ಅವರು ಸಮಾಜದಲ್ಲಿ ಅತಿ ಹೆಚ್ಚು ಗೌರವಕ್ಕೆ ಪಾತ್ರರಾಗಿರುವ ಶಿಕ್ಷಕರನ್ನು ಪ್ರತಿ ವರ್ಷ ಸನ್ಮಾನಿಸುತ್ತಿರುವುದು ಆದರ್ಶ ಕೆಲಸವಾಗಿದೆ. ಅನಾಥ ಮಕ್ಕಳನ್ನು ದತ್ತು ಪಡೆದು ಶಿಕ್ಷಣ ಕೊಡಿಸುವುದು, ಕಷ್ಟದಲ್ಲಿದ್ದವರಿಗೆ ಸಹಾಯ ಮಾಡುತ್ತಿರುವುದು ಅಪರೂಪದ ಕಾರ್ಯವಾಗಿದೆ ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಸುಧಾರಾಣಿ ನಾಯಕ್, ಪ್ರಕಾಶ ರಾಠೋಡ್, ಸಂಜಯ ಮೇತ್ರೆ, ಬಲಭೀಮ ಕುಲಕರ್ಣಿ, ಮುಖಂಡರಾದ ಶಿವಾಜಿರಾವ ಪಾಟೀಲ್ ಮುಂಗನಾಳ, ರಾಮಶೆಟ್ಟಿ ಪನ್ನಾಳೆ, ಪ್ರತೀಕ ಚವ್ಹಾಣ್, ಶಾಲೀವಾನ್ ಉದಗೀರೆ, ನಯೀಮೋದ್ದಿನ್, ಸಂತೋಷ ರೆಡ್ಡಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರವೀಂದ್ರ ರೆಡ್ಡಿ ಮಾಲಿಪಾಟೀಲ್, ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮೆಹಬೂಬ್ ಪಾಟೀಲ್, ಪಂಢರಿ ಆಡೆ, ಬಸವರಾಜ ಪಾಟೀಲ್, ಸಂಜುಕುಮಾರ ಶೆಟಕಾರ, ಶಿವಶರಣಪ್ಪ ವಲ್ಲೆಪೂರೆ ಸೇರಿದಂತೆ ಮತ್ತಿತರಿದ್ದರು.



ಬೆಂಗಳೂರಿನಲ್ಲಿ ಭಾನುವಾರ ನಡೆದ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ವಿಶ್ವ ವಿದ್ಯಾಲಯದ 32ನೇ ವಾರ್ಷಿಕ ಘಟಿಕೋತ್ಸವದ ಈ ಸಂದರ್ಭದಲ್ಲಿ ಭಾರತದ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ಅವರು ವಿದ್ಯಾರ್ಥಿಗಳಿಗೆ ಪದಕ ಮತ್ತು ಪ್ರಮಾಣಪತ್ರ ನೀಡಿದರು.

# ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ: ನಾರಾಯಣಸ್ವಾಮಿ

**ರಾಯಚೂರು, ಸೆ. 22 :** ಕಾಂಗ್ರೆಸ್ ಪಕ್ಷ ಅಧಿಕಾರಕ್ಕಾಗಿ ಮೀಸಲಾತಿಯ ನೆಪದಲ್ಲಿ ದಲಿತರನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ಹಿಂದಿನಿಂದಲೂ ಇತಿಹಾಸ ನೋಡಿದರೆ ಕಾಂಗ್ರೆಸ್ ಸರಕಾರ ಕೇಂದ್ರದಲ್ಲಿ ಪ್ರಧಾನಿಗಳಾದ ನೆಹರೂ, ಇಂದಿರಾ ಗಾಂಧೀ ಮತ್ತು ರಾಜೀವ ಗಾಂಧಿ ಇವರೆಲ್ಲರೂ ಮೀಸಲಾತಿ ವಿರೋಧಿಗಳು. ಮೀಸಲಾತಿಯಿಂದ ದೇಶದ ಅಭಿವೃದ್ಧಿಯಾಗದು ಎಂದು ಹೇಳಿರುವ ಉದಾಹರಣೆಗಳೇ ಸಾಕು. ರಾಜ್ಯ ಸರಕಾರ ಎಸ್‌ಸಿಪಿ:ಟಿಎಸ್‌ಪಿ 25 ಸಾವಿರ ಕೋಟಿ ಅನುದಾನವನ್ನು ಗ್ಯಾರಂಟಿಗೆ ಬಳಸಿಕೊಳ್ಳುವ ಮೂಲಕ ದಲಿತ ವಿರೋಧಿ ಎಂದು ಗುರುತಿಸಿಕೊಂಡಿದೆ. ರಾಜ್ಯ ಸರಕಾರದಲ್ಲಿ ಮುಖ್ಯಮಂತ್ರಿಗಳನ್ನು ಹಿಡಿದು ಎಲ್ಲ ಸಚಿವರು ಭ್ರಷ್ಟಾಚಾರದಲ್ಲಿ ಮುಳುಗಿದ್ದಾರೆ. ಭ್ರಷ್ಟಾಚಾರ ಪ್ರಕರಣಗಳನ್ನು ಎಸ್‌ಐಟಿಗೆ ಕೊಡುವದರಿಂದ ಕ್ಲೀನ್ ಚಿಟ್ ಪಡೆಯುವ ಮೂಲಕ ರಾಜ್ಯ ಕಾಂಗ್ರೆಸ್ ಸರಕಾರ ದುರ್ಬಳಕೆ ಮಾಡಿಕೊಳ್ಳುತ್ತಿದೆ. ರಾಜ್ಯ ಸರಕಾರ ದಲಿತರಿಗೆ ವಂಚನೆ ಮೋಸ ಮಾಡುತ್ತಿದೆ ಎಂದು ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲುವಾದಿ ನಾರಾಯಣಸ್ವಾಮಿ ಆರೋಪಿಸಿದರು.



ನಗರದ ಪ್ರವಾಸಿ ಮಂದಿರದಲ್ಲಿ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಅಭಿವೃದ್ಧಿಗೆ ಸರಕಾರದ ಗಮನವಿಲ್ಲ. ದಲಿತರ ಮೇಲೆ ಹಲ್ಲೆ, ರೈತರ ಆತ್ಮಹತ್ಯೆ, ದಲಿತರ ಕೊಲೆ ಪ್ರಕರಣಗಳು ನಿರಂತರವಾಗಿ ನಡೆಯುತ್ತಿವೆ. ತಮ್ಮ ಮೇಲಿನ ಭ್ರಷ್ಟಾಚಾರ ಮುಚ್ಚಿಕೊಳ್ಳಲು ದಿನಕ್ಕೊಂದು ನಾಟಕೀಯ ಬೆಳವಣಿಗೆಗಳನ್ನು ಸೃಷ್ಟಿಸಿ ವಿರೋಧ ಪಕ್ಷದವರ ಮೇಲೆ ಆರೋಪಕ್ಕೆ ಮುಂದಾಗುವ ಮೂಲಕ ಜನರಿಗೆ ಮರೆ ಮಾಚುತ್ತಿದೆ ಎಂದರು.

ಜವಾಬ್ದಾರಿಯುತ ವಿರೋಧಪಕ್ಷವಾದ ನಾವುಗಳು ಸರಕಾರದ ಜನ ವಿರೋಧಿ ನೀತಿಗಳನ್ನು ವಿರೋಧಿಸುತ್ತ ಹೋರಾಟಕ್ಕೆ ಬೀದಿಗಿಳಿದಿದ್ದೇವೆ. ಕಲಬುರಗಿಯಲ್ಲಿ ಸಚಿವ ಸಂಪುಟ ನಡೆಸಿ 11 ಸಾವಿರ ಕೋಟಿ ಅಭಿವೃದ್ಧಿಗೆ ಅನುದಾನ ನೀಡುತ್ತೇವೆ ಎನ್ನುವ ತೀರ್ಮಾನ ಜನತೆಯ ಕಣ್ಣೊರೆಸುವ ತಂತ್ರವಾಗಿದೆ. ಅವರು ನೀಡಿದ ಗ್ಯಾರಂಟಿಗಳಿಗೆ ಹಣವಿಲ್ಲ, ಒಂದು ತಿಂಗಳು ಹಣ ನೀಡಿದರೆ 5 ತಿಂಗಳು ನಿಲ್ಲಿಸುತ್ತಾರೆ. ಹಣಕ್ಕಾಗಿ ಮಾತೆಯರು ಅಲೆದು ಅಲೆದು ಮರೆಯುವಂತಹ ಪರಿಸ್ಥಿತಿ ನಿರ್ಮಾಣ ಮಾಡಿದ್ದಾರೆ ಎಂದು ಅವರು ವಿವರಿ ಸಿದರು. ಮುಖಂಡ ಆರ್.ರುದ್ರಯ್ಯ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ವೀರನಗೌಡ ಲೆಕ್ಕಿಹಾಳ, ಮುದಗಲ್ಲ ಮಂಡಲ ಅದ್ಯಕ್ಷ ಹುಲ್ಲೆಶ ಸಾಹುಕಾರ, ಮುದಗಲ್ಲ ನಗರ ಘಟಕದ ಅಧ್ಯಕ್ಷ ಕರಿಯಪ್ಪ ಯಾದವ, ಕಲಬುರಗಿ ಜಿಲ್ಲಾ ಗ್ರಾಮಾಂತರ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಬೆಣ್ಣೂರಕರ, ನಾಗರಾಜ ತಳವಾರ, ಚಂದಾವಲಿಸಾಬ, ಸಣ್ಣ ಸಿದ್ದಯ್ಯ, ದಿಲೀಪಕುಮಾರ, ಮಂಜುನಾಥ ನಂದವಾಡಗಿ, ರಿಯಾಜ ಜಂಬಾಳಿ ಸೇರಿದಂತೆ ಮುಂತಾದವರಿದ್ದರು.

## ರಾಹುಲ್‌ರನ್ನು ಖರ್ಗೆ ಉಚ್ಚಾಟಿಸಲಿ

ಅಮೇರಿಕಾದಲ್ಲಿ ಕೇಂದ್ರ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಮೀಸಲಾತಿ ಕುರಿತು ನೀಡಿದ ಹೇಳಿಕೆ ಸಂವಿಧಾನ ತಿದ್ದುಪಡಿಯಂತಹ ವಿಷಯವಲ್ಲವೇ ಬಿಜೆಪಿಯಲ್ಲಿ ಓರ್ವ ನಾಯಕರು ನೀಡಿದ ಹೇಳಿಕೆಗೆ ಅವರಿಗೆ ಟಿಕೆಟ್ ನೀಡದೇ ತಟಸ್ಥರನ್ನಾಗಿ ಮಾಡಿದ ಕೀರ್ತಿ ಪಕ್ಷಕ್ಕಿದೆ. ನೀವು ಕೂಡ ದಲಿತ ಸಮಾಜದ ಹಿರಿಯ ಮುಖಂಡ ಎಐಸಿಸಿ ಅಧ್ಯಕ್ಷ ಸ್ಥಾನವನ್ನು ಅಲಂಕರಿಸಿದ್ದೀರಿ. ರಾಜಕೀಯ ತತ್ವಾದರ್ಶವಿದ್ದರೇ ಸಮಾಜ ವಿರೋಧಿ ಹೇಳಿಕೆ ನೀಡಿದ ರಾಹುಲ್ ಅವರನ್ನು 6 ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಿ. ಗಾಂಧಿ ಕುಟುಂಬದ ಬೆಂಬಲಿಗರಾಗಿ ನಿಲ್ಲಬೇಡಿ ಎಂದು ಮಲ್ಲಿಕಾರ್ಜುನ ಖರ್ಗೆಯವರಿಗೆ ಸವಾಲು ಹಾಕಿದರು.

# ಬೆಳಗಾವಿ ವಂದೇಭಾರತ್ ಬಗ್ಗೆ ಮಹತ್ವದ ಚರ್ಚೆ: ಸಂಸದ ಜಗದೀಶ್ ಶೆಟ್ಟರ್

**ಬೆಳಗಾವಿ, ಸೆ. 22:** ಪ್ರಧಾನಿ ನರೇಂದ್ರ ಮೋದಿ ಅವರು ಇತ್ತೀಚೆಗೆ 06 ಹೊಸ ವಂದೇಭಾರತ್ ರೈಲು ಸಂಚಾರ ಕಾರ್ಯಾಚರಣೆಗೆ ಹಸಿರು ನಿಶಾನೆ ತೋರಿಸಿದರು. ಇದೇ ವೇಳೆ ಬೆಂಗಳೂರಿನಿಂದ ಹುಬ್ಬಳ್ಳಿ ಮಾರ್ಗವಾಗಿ ಸಂಚರಿಸಿ ಧಾರವಾಡಕ್ಕೆ ಕೊನೆಗೊಳ್ಳುವ ವಂದೇಭಾರತ್ ರೈಲನ್ನು ಬೆಳಗಾವಿ ವರೆಗೆ ವಿಸ್ತರಣೆಗೆ ಸಂಸದ ಜಗದೀಶ್ ಶೆಟ್ಟರ್ ಮನವಿ ಮಾಡಿದ್ದರು. ಇದೀಗ ಮತ್ತೆ ಅದೇ ವಿಚಾರವಾಗಿ ಕೇಂದ್ರ ಸಚಿವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿದರು.

ಹೊಸ ವಂದೇ ಭಾರತ್ ರೈಲುಗಳ ಪೈಕಿ ಒಂದು ಪುಣೆಯಿಂದ ಬೆಳಗಾವಿ ಮಾರ್ಗವಾಗಿ ಹುಬ್ಬಳ್ಳಿಗೆ ಬರುತ್ತದೆ. ಆದರೆ ಬೆಂಗಳೂರಿನಿಂದ ಧಾರವಾಡಕ್ಕೆ, ಇಲ್ಲ ಧಾರವಾಡದಿಂದ ಬೆಳಗಾವಿಗೆ ವಂದೇಭಾರತ್ ರೈಲು ಇಲ್ಲ. ಬಹುದಿನಗಳಿಂದ ಬೆಳಗಾವಿವರೆಗೆ ಈ ರೈಲು ವಿಸ್ತರಣೆಗೆ ಬೇಡಿಕೆ ಇದೆ. ಆದರೆ ಇನ್ನು ಸಾಕಾರವಾಗಿಲ್ಲ. ಒಂದಷ್ಟು ತಾಂತ್ರಿಕ ಸಮಸ್ಯೆಗಳನ್ನು ರೈಲ್ವೆ ಅಧಿಕಾರಿಗಳು ಈ ಹಿಂದೆ ತಿಳಿಸಿದ್ದರು.

ಇದೀಗ ಪಟ್ಟು ಬಿಡದ ಜಗದೀಶ್ ಶೆಟ್ಟರ್ ಅವರು, ಈಗಾಗಲೇ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಬೆಂಗಳೂರು ರೈಲು ಬೆಳಗಾವಿ ವಿಸ್ತರಣೆ ಮಾಡುವಂತೆ ಕೇಳಿಕೊಂಡಿದ್ದರು. ಅವರು ಸಕಾರಾತ್ಮಕವಾಗಿ ಭರವಸೆ ನೀಡಿದ್ದರು. ಇದೀಗ ಮತ್ತೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಖುದ್ದು ಸಂಸದರು ಭೇಟಿಯಾಗಿ ಹೊಸ ಮಾರ್ಗದಲ್ಲಿ ರೈಲು ವಿಸ್ತರಣೆಗೆ ಮನವಿ ಮಾಡಿದ್ದಾರೆ. ಈ ಕುರಿತು ಕೆಲ ಹೊತ್ತು ಚರ್ಚೆ ನಡೆಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಜಗದೀಶ್ ಶೆಟ್ಟರ್ ಅವರು, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಭೇಟಿ ಮಾಡಿದೆ. ಬೆಂಗಳೂರು – ಧಾರವಾಡ ನಡುವೆ ಸದ್ಯ ಸಂಚರಿಸುತ್ತಿರುವ ವಂದೇ ಭಾರತ್ ಹೈ ಸ್ಪೀಡ್ ರೈಲು ಸಂಚಾರವನ್ನು ಬೆಳಗಾವಿ ನಗರದ ವರೆಗೆ ವಿಸ್ತರಿಸುವ ಕೋರಿದ್ದೇನೆ.



ಪ್ರಾರಂಭದಲ್ಲಿ ಪುಣೆ – ಬೆಳಗಾವಿ – ಹುಬ್ಬಳ್ಳಿ ನಡುವೆ ಇತ್ತೀಚಿಗೆ ವಂದೇಭಾರತ್ ನೂತನ ಹೈ ಸ್ಪೀಡ್ ರೈಲು ಸಂಚಾರಕ್ಕೆ ಚಾಲನೆ ನೀಡಿರುವುದು, ಬೆಳಗಾವಿ ಜಿಲ್ಲೆಯ ರಹವಾಸಿಗಳ ಅನೇಕ ದಿನಗಳ ಬೇಡಿಕೆಯನ್ನು ಈಡೇರಿಸಿ, ಅನುಕೂಲತೆ ಕಲ್ಪಿಸಿ ಕೊಟ್ಟಿರುವುದಕ್ಕೆ ಅಭಿನಂದನೆ ಸಲ್ಲಿಸಿದೆ ಎಂದರು.

ಇದೇ ಸಮಯದಲ್ಲಿ ಬೆಂಗಳೂರು – ಧಾರವಾಡ ನಡುವೆ ಹಾಲಿ ಕಾರ್ಯಾಚರಣೆ ಮಾಡುತ್ತಿರುವ ವಂದೇ ಭಾರತ್ ರೈಲು ಸೇವೆಯನ್ನು ಸಹ ಬೆಳಗಾವಿಯವರೆಗೆ ವಿಸ್ತರಿಸುವ ಅವಶ್ಯಕತೆಯ ಕುರಿತು ಕೇಂದ್ರ ರೈಲ್ವೆ ಸಚಿವ ಮನವರಿಕೆ ಮಾಡಿಕೊಡಲಾಯಿತು.

ಅದೇ ರೀತಿ ಬೆಳಗಾವಿ ಜಿಲ್ಲೆಯ ಸವದತ್ತಿ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ನೂತನ ರೈಲು ಸೇವೆ ಕಲ್ಪಿಸುವ ಬಗ್ಗೆ ಅಗತ್ಯವೆನಿಸುವ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಬೇಕು ಎಂದು ಸಚಿವ ವಿ. ಸೋಮಣ್ಣ ಹಾಗೂ ಅಶ್ವಿನಿ ವೈಷ್ಣವ್ ಅವರಿಗೂ ಲಿಖಿತ ಮನವಿ ಮಾಡಲಾಯಿತು. ಇದೆಲ್ಲ ಆಲಿಸಿದ ಅವರು ಮುಂದಿನ ದಿನಗಳಲ್ಲಿ ಈ ಬೇಡಿಕೆಗಳನ್ನು ಸಹ ಈಡೇರಿಸುವುದಾಗಿ ಅವರು ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

# ವಿಜಯಪುರ ಸೈನಿಕ ಶಾಲೆಯಲ್ಲಿ ನೌಕಾಪಡೆಯ ಹೆಲಿಕಾಪ್ಟರ್ ಸ್ಥಾಪನೆ

**ವಿಜಯಪುರ, ಸೆ.22 :** ವಿದ್ಯಾರ್ಥಿಗಳು ಭಾರತೀಯ ಸಶಸ್ತ್ರ ಪಡೆಗಳಿಗೆ ಸೇರಿ ಸಮರ್ಪಣೆ, ಹೆಮ್ಮೆ ಮತ್ತು ನಿಸ್ವಾರ್ಥದಿಂದ ರಾಷ್ಟ್ರಕ್ಕೆ ಸೇವೆ ಸಲ್ಲಿಸಬೇಕು ಎಂದು ಭಾರತೀಯ ನೌಕಾಪಡೆಯ ಉಪ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ತಿಳಿಸಿದರು.



ನಗರದ ಸೈನಿಕ ಶಾಲೆಯ ಆವರಣದಲ್ಲಿ ಆಯೋಜಿಸಿದ್ದ ಯುಎಚ್–3ಎಚ್ ಹೆಲಿಕಾಪ್ಟರ್ ಸ್ಥಾಪನೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ಜೀವನದಲ್ಲಿ ಯಶಸ್ವಿಯಾಗಲು ಮತ್ತು ಭಾರತೀಯ ಸಶಸ್ತ್ರ ಪಡೆಗಳಿಗೆ ಸೇರಲು ವಿದ್ಯಾರ್ಥಿಗಳು ಹೋರಾಟದ ಮನೋಭಾವ ಪ್ರದರ್ಶಿಸಬೇಕು ಮತ್ತು ಶ್ರೇಷ್ಠತೆಯ ಗುರಿ ಹೊಂದಿರಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ, ಈ ಶಾಲೆಯಲ್ಲಿ ತಾವು ಕಲಿತ ದಿನಗಳನ್ನೂ ನೆನಪಿಸಿಕೊಂಡ ಅವರು, ತಮ್ಮ ಆರು ದಶಕಗಳ ಜೀವನ ಪಯಣದಲ್ಲಿ ಈ ಶಾಲೆಗೆ ವಿಶೇಷ ಸ್ಥಾನವಿದೆ ಎಂದರು. ಅಲ್ಲದೇ, ಸೈನಿಕ ಶಾಲೆಯಲ್ಲಿ ಯುಎಚ್–3ಎಚ್ ಹೆಲಿಕಾಪ್ಟರ್ ಸ್ಥಾಪನೆಯು ಭಾರತೀಯ ನೌಕಾಪಡೆಯ ಹೆಲಿಕಾಪ್ಟರ್‌ನ ಶ್ರೀಮಂತ ಕಾರ್ಯಾಚರಣೆ ಪರಂಪರೆಗೆ ಸಂದ ಗೌರವ. ಶಾಲೆಯ ಮುಂದಿನ ಪೀಳಿಗೆಯ ವಿದ್ಯಾರ್ಥಿಗಳಿಗೆ ಸ್ಫೂರ್ತಿ ತುಂಬುವ ಉದ್ದೇಶದಿಂದ ಇದನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು. ಇದಕ್ಕೂ ಮುನ್ನ ಉಪ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್‌ರನ್ನು ಪ್ರಿನ್ಸಿಪಾಲ್, ಗ್ರೂಪ್ ಕ್ಯಾಪ್ಟನ್ ಪ್ರತಿಭಾ ಬಿಷ್ಟ್ ಬರಮಾಡಿಕೊಂಡರು.

## ಹೆಲಿಕಾಪ್ಟರ್ ಇತಿಹಾಸ

**ಸೈನಿಕ ಶಾಲೆಯ ಆವರಣದಲ್ಲಿ ಸ್ಥಾಪಿಸಲಾದ ಯುಎಚ್–3ಎಚ್ ಹೆಲಿಕಾಪ್ಟರ್ ಭಾರತೀಯ ನೌಕಾಪಡೆಗೆ ಸೇರಿದ್ದು. 2007ರಲ್ಲಿ ನೌಕಾಪಡೆಗೆ ಸೇರ್ಪಡೆ ಮಾಡಲಾಗಿತ್ತು. 2009ರ ಮಾರ್ಚ್ 24ರಂದು ಮೊದಲ ಬಾರಿ ವಿಶೇಷ ಕಾರ್ಯಾಚರಣೆಗೆ ನಿಯೋಜಿಸಲಾಗಿತ್ತು. ಅವಳಿ ಎಂಜಿನ್, ಬಹು ಪಾತ್ರದ ಹೆಲಿಕಾಪ್ಟರ್ ಆಗಿದ್ದು, ಇದು ನೌಕಾಪಡೆಯ ಸೀಲಿಫ್ಟ್ ಸಾಮರ್ಥ್ಯವನ್ನು ಹೆಚ್ಚಿಸಿತ್ತು. ಪ್ರತಿಕೂಲ ಸಮುದ್ರತೀರದಲ್ಲಿ ಯುದ್ಧ ಪಡೆಗಳ ತರಬೇತಿ ಜತೆಗೆ ಅನೇಕ ಕಾರ್ಯಾಚರಣೆಗಳಲ್ಲಿ ತನ್ನ ಪಾತ್ರವನ್ನು ವಹಿಸಿ, ರಾಷ್ಟ್ರಕ್ಕೆ ಸೇವೆ ಸಲ್ಲಿಸಿದೆ.**

# ಸೋಲಾರ್‌ನಿಂದ ಉಚಿತ ವಿದ್ಯುತ್ ಪಡೆಯಬಹುದು: ಪ್ರಶಾಂತ



**ಬೀದರ್, ಸೆ. 22 :** ಸೋಲಾರ್‌ನಿಂದ ನಮಗೆ ಅಗತ್ಯವಾದ ವಿದ್ಯುತ್ ಶಕ್ತಿ ಉಚಿತವಾಗಿ ಪಡೆಯಬಹುದು ಎಂದು ಡಿಗ್ಗಿ ಗ್ರಾಪಂ ಪಿಡಿಓ ಪ್ರಶಾಂತ ಸುತಾರ ಹೇಳಿದರು.

ಜಿಲ್ಲೆಯ ರಾಂಪುರ ಗ್ರಾಮದ ಬಳಿಯ ಐಟಿಐ ಕಾಲೇಜಿನಲ್ಲಿ ಪಿಎಮ್‌ವ್ಹಿವೈಯಿಂದ ಹಮ್ಮಿಕೊಂಡ ಪಿಎಮ್ ಸೂರ್ಯಘರ್ ಮುಫ್ತ್ ಬಿಜಲಿ ಯೋಜನಾ ಸಾಪ್ತಾಹಿಕ ತರಬೇತಿ ಕಾರ್ಯಕ್ರಮದಲ್ಲಿ ಸೋಲಾರ್ ದೀಪ ಬೆಳಗಿಸಿ ಮಾತನಾಡಿದ ಅವರು, ಜಲ ವಿದ್ಯುತ್, ಕಲ್ಲಿದ್ದಲಿನಿಂದ ತಯ್ಯಾರಾದ ವಿದ್ಯುತ್ ಶಕ್ತಿ ದುಬಾರಿ ಬೆಲೆಯಲ್ಲಿ ಸಿಗುವಂತಾದರೆ, ಈ ಸೋಲಾರ್ ವಿದ್ಯುತ್ ಉಚಿತ್‌ವಾಗಿ ಸರಳವಾಗಿ ದೊರಕುವುದರಿಂದ ದೇಶದ ಪ್ರಗತಿ ಅತಿ ವೇಗದಲ್ಲಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ದೇಶದಲ್ಲಿ ಪ್ರಧಾನ ಮಂತ್ರಿ ಉಚಿತ್ ವಿದ್ಯುತ್ ಯೋಜನೆಯು ಸೂರ್ಯನ ಕಿರಣಗಳಿಂದ ಲಭ್ಯವಾಗುತ್ತದೆ. ಇದರ ಲಾಭ ಎಲ್ಲರೂ ಪಡೆಯ ಬೇಕೆಂದರು.

ಪತ್ರಕರ್ತ ಸಿ.ಎಮ್.ಗಳಗೆ ಮಾತನಾಡಿ, ಸೋಲಾರ್ ವಿದ್ಯುತ್ ಯೋಜನೆಯಿಂದ ಯಾವುದೇ ವೆಚ್ಚವಿಲ್ಲದೆ ಪಡೆಯುವ ವಿದ್ಯುತ್‌ನಿಂದ ಮನೆಯಲ್ಲಿ ಬಳಸುವ ಎಲ್ಲಾ ಯಂತ್ರಗಳು ಚಲಿಸುತ್ತವೆ. ಇದರಿಂದ ಉಚಿತ ವಿದ್ಯುತ್ ಪಡೆದು ಜೆಸ್ಕಾಂಗೆ ಭರ ಕಡಿಮೆ ಮಾಡಿದಂತಾಗುತ್ತದೆ. ಪ್ರಾಂಶುಪಾಲ ಬಾಬುರಾವ್ ರಾಜೋಳಕರ್ ಮಾತನಾಡಿದ ಅವರು, ಭಾರತ ಸರ್ಕಾರದ ಈ ಯೋಜನೆ ಮನೆ ಮನೆಗೆ ತಲುಪಿಸುವ ಕಾರ್ಯ ನಮ್ಮ ವಿದ್ಯಾರ್ಥಿಗಳು ಕೈಗೊಳ್ಳಲು ಇಲಾಖೆ ನೀಡುವ ತರಬೇತಿ ಮಹತ್ವಪೂರ್ಣವಾದದೆಂದು ಭಾವಿಸಿ ದೇಶದ ಪ್ರಗತಿಯ ಮುಖ್ಯ ವಾಹಿನಿಯಲ್ಲಿ ಮನ್ನಡೆಯಲು ಕೈಜೋಡಿಸಿರೆಂದರು.

# ಪಶು ಸಂಪತ್ತು ಉಳಿಸಿ ಬೆಳೆಸಿದರೆ ರೈತರ ಆರ್ಥಿಕ ಸಥಿತಿ ಬಲಗೊಳ್ಳುತ್ತದೆ

**ಬೀದರ್, ಸೆ. 22 :** ಜಿಲ್ಲೆಯ ಹೆಡಗಾಪೂರ ಸಮೀಪ ಮಾಂಜ್ರಾ ಮತ್ತು ಕಾರಂಜಾ ಎರಡು ನದಿಗಳು ಹರಿಯುತ್ತಿವೆ. ನೀರು ಮತ್ತು ಜಾನುವಾರಗಳ ಮೇವಿಗೆ ಕೊರತೆ ಇರುವದಿಲ್ಲ. ಈ ಭಾಗದಲ್ಲಿ ಹಸು, ಎಮ್ಮೆ, ಆಡು, ಕುರಿ ಸಾಕಾಣಿಕೆಗೆ ಉತ್ತಮ ವಾತಾವರಣ ಇಲ್ಲಿದೆ. ಪಶು ಸಂಪತ್ತನ್ನು ಉಳಿಸಿ ಬೆಳೆಸಬೇಕು. ಈ ಮೂಲಕ ರೈತರು ತಮ್ಮ ಆರ್ಥಿಕ ಅಭಿವೃದ್ಧಿ ಸುಧಾರಿಸಿಕೊಳ್ಳಬೇಕಿದೆ ಎಂದು ಅರಣ್ಯ. ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಜಿಲ್ಲಾ ಪಂಚಾಯತ ಮತ್ತು ಪಶು ಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಸಹಯೋಗದಲ್ಲಿ ಔರಾದ ಬಿ. ತಾಲ್ಲೂಕಿನ ಹೆಡಗಾಪೂರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಜಾನುವಾರು ತಳಿ ಸಂವರ್ಧನಾ ಮತ್ತು ತರಬೇತಿ ಕೇಂದ್ರದ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ದೇಶಿಯ ತಳಿಗಳ ಸಂರಕ್ಷಣೆ ಜೊತೆಗೆ ಆಧುನಿಕ ಪದ್ಧತಿ ಮೂಲಕ ಕುರಿ, ಕೋಳಿ, ಮೇಕೆ, ಹಂದಿ ಸಾಕಾಣಿಕೆ ತರಬೇತಿ ರೈತರಿಗೆ




ನೀಡಿದರೆ ಅವರ ಆರ್ಥಿಕ ಅಭಿವೃದ್ಧಿಗೆ ಅನುಕೂಲವಾಗಲಿದೆ. ಜಾನುವಾರು ತಳಿ ಸಂವರ್ಧನಾ ಮತ್ತು ತರಬೇತಿ ಕೇಂದ್ರಕ್ಕೆ ಹೆಡಗಾಪೂರದಲ್ಲಿ ಭಾನುವಾರ ಶಂಕುಸ್ಥಾಪನೆ ನೆರವೇರಿಸಲಾಗಿದೆ. 35 ಕೋಟಿ ವೆಚ್ಚದ ಈ ಕಾಮಗಾರಿ ಕಾಲಮಿತಿಯಲ್ಲಿ ಸುಸಜ್ಜಿತವಾಗಿ ಆಗುತ್ತದೆ ಇದಕ್ಕೆ ನಬಾರ್ಡನಿಂದ ಅನುದಾನ ಬರುತ್ತಿದೆ ಎಂದರು.

ಕೇವಲ ಕಟ್ಟಡ ಆದರೆ ಸಾಲದು ಜೊತೆಗೆ ಇದಕ್ಕೆ ಅಧಿಕಾರಿಗಳು ಹಾಗೂ ಸಂಪನ್ಮೂಲ ವ್ಯಕ್ತಿಗಳ ನೇಮಕಾತಿ ಆಗಬೇಕು.ಹೆಡಗಾಪೂರ ಗ್ರಾಮದ ಗೋಮಾಳ 33 ಎಕರೆ ಜಮೀನನ್ನು ಈ ಗ್ರಾಮಸ್ಥರು ನೀಡಿದ್ದಾರೆ ಇದಕ್ಕೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಅನುದಾನ ಒದಗಿಸಲಾಗುವುದು. ರೈತರು ಕೃಷಿ ಜೊತೆಗೆ ಹೈನುಗಾರಿಕೆ, ಕುರಿ, ಕೋಳಿ ಸಾಕಾಣಿಕೆ ಮಾಡಿದರೆ ಅವರ ಆರ್ಥಿಕತೆಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಹಾಲು ಉತ್ಪಾದಕರ ಕಟ್ಟಡ ನಿರ್ಮಾಣ. ಟೆಸ್ಟಿಂಗ್ ಮಶೀನಗೆ ವೀರೇಂದ್ರ ಹೆಗಡೆ ಅವರು ಬೀದರ್ ಜಿಲ್ಲೆಗೆ 5 ಕೋಟಿ ಅನುದಾನ ಕೊಟ್ಟಿದ್ದಾರೆ. ಬೀದರ್ ಸಂಸದರ ನಿಧಿಯಿಂದಲೂ ಅನುದಾನ ನೀಡಲಾಗುವುದು. ಕೋಲಾರ ಜಿಲ್ಲೆಯಲ್ಲಿ 10 ಲಕ್ಷ ಹಾಲು ಉತ್ಪಾದನೆ ಮಾಡುತ್ತಾರೆ ಮನಸ್ಸು ಮಾಡಿದರೆ ನಮ್ಮ ಜಿಲ್ಲೆಯಲ್ಲಿ 5 ಲಕ್ಷ ಹಾಲು ಉತ್ಪಾದನೆ ಮಾಡಬಹುದು ಎಂದು ಹೇಳಿದರು. 60 ಕೋಟಿ ರೂ. ವೆಚ್ಚದಲ್ಲಿ ಬೀದರ್ ಜಿಲ್ಲಾ ಸಂಕೀರ್ಣದ ಕಟ್ಟಡ ಆರಂಭಿಸಲಾಗುವುದು. 15 ಕೋಟಿ ರೂ. ವೆಚ್ಚದಲ್ಲಿ ಇಕೋ ಟೂರಿಸಂ. ದೇವ ದೇವವನಕ್ಕೆ 15 ಕೊಟಿ ರೂ. ಅನುದಾನ ನೀಡಿದ್ದೆವೆ. ಎಲ್ಲರೂ ಸೇರಿ ಬೀದರ್ ಜಿಲ್ಲೆಯ ಅಭಿವೃದ್ಧಿಗೆ ಕಂಕಣ ಬದ್ದರಾಗೋಣ ಎಂದರು.

ಪಶು ಸಂಗೋಪನಾ ಮತ್ತು ರೇಷ್ಮೆ ಸಚಿವರು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ ಮಾತನಾಡಿದ ಅವರು, ಹೆಡಗಾಪೂರ ಜಾನುವಾರು ತಳಿ ಸಂಶೋಧನಾ ಕೇಂದ್ರ ಬೆಂಗಳೂರಿನ ಹೇಸರಘಟ್ಟ ಬಿಟ್ಟರೆ ಇದು ರಾಜ್ಯದಲ್ಲಿ ಎರಡನೇಯದು ಆಗಲಿದೆ. ನಂಜುಂಡಪ್ಪ ವರದಿ ಪ್ರಕಾರ ಈ ಭಾಗ ಹಿಂದುಳಿದಿದೆ ಮತ್ತು ಇಲ್ಲಿ ಧನ, ಎಮ್ಮೆ ಬಹಳ ಇವೆ ಎಂದು ಪಶು ವಿಶ್ವವಿದ್ಯಾಲಯ ಬೀದರ ಜಿಲ್ಲೆಗೆ ಮಾಡಿದರು ಎಂದರು. ಈ ತರಬೇತಿ ಕೇಂದ್ರಕ್ಕೆ ಗ್ರಾಮಸ್ಥರು ಜಮೀನು ನೀಡಿದ್ದಾರೆ. ಇದರ ಕೆಲಸ ಆರಂಭಿಸಲು 5 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ. ಇದರಿಂದ ಈ ಭಾಗದ ಜನರ ಬದುಕು ಸುಧಾರಣೆ ಆಗಲಿದೆ. ಸ್ಥಳೀಯ ಜಾನುವಾರುಗಳ ಅನೇಕ ತಳಿಗಳು ಇವೆ. ಇದರ ಜೊತೆಗೆ ಹೊಸ ತಳಿಗಳ ಸಂಶೋಧನೆ ಮಾಡಿ ರೈತರು ಕೃಷಿ ಜೊತೆಗೆ ಕುರಿ, ಕೋಳಿ, ಮೇಕೆ ಹಾಗೂ ಹೈನುಗಾರಿಕೆ ಮಾಡುವುದರಿಂದ ಅವರ ಆರ್ಥಿಕತೆ ಸುಧಾರಣೆ ಆಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಡಗಾಪೂರ ಗ್ರಾಮ ಪಂಚಾಯತ ಅಧ್ಯಕ್ಷ ಶೋಭಾವತಿ ಜೇಮ್ಸ್ ತಾರೆ, ಬೀದರ್ ಡಿಸಿ ಶಿಲ್ಪಾ ಶರ್ಮಾ, ಡಾ.ಗಿರೀಶ ಬದೋಲೆ, ಡಾ. ಮಂಜುನಾಥ ಎಸ್. ಪಾಳೆಗಾರ, ಚಂದ್ರಕಾಂತ ಪೂಜಾರಿ, ಬೀದರ್ ಪಶು ವೈದ್ಯಕೀಯ ಪಶು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೋ. ಕೆ.ಸಿ.ವೀರಣ್ಣ, ಡಾ.ಶರಣಬಸಪ್ಪ ಎಸ್.ಪಾಟೀಲ, ಡಾ.ನರಸಪ್ಪ ಎ.ಡಿ. ಸೇರಿದಂತೆ ಪಶು ಇಲಾಖೆಯ ಇತರೇ ಅಧಿಕಾರಿಗಳು, ಹೆಡಗಾಪೂರ ಗ್ರಾಮಸ್ಥರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸರ್ಕಾರಿ ಕಚೇರಿಯ ಎದುರು ಮದ್ಯಪಾನ ಬುದ್ಧಿ ಹೇಳಿದ ಅಧಿಕಾರಿ ಮೇಲೆ ಹಲ್ಲೆ

**ಹುಬ್ಬಳ್ಳಿ, ಸೆ. 22 :** ಸರ್ಕಾರಿ ಕಚೇರಿಯ ಮುಂಭಾಗದಲ್ಲಿ ಮದ್ಯಪಾನ ಮಾಡುತ್ತಿದ್ದ ವ್ಯಕ್ತಿಗಳಿಗೆ ಮದ್ಯಪಾನ ಮಾಡದಂತೆ ಬುದ್ಧಿವಾದ ಹೇಳಿದಕ್ಕೆ ಸರ್ಕಾರಿ ಅಧಿಕಾರಿಯ ಮೇಲೆಯೇ ಹಲ್ಲೆ ನಡೆಸಿದ ಘಟನೆ ಹುಬ್ಬಳ್ಳಿ ತಾಲೂಕಿನ ಅದರಗುಂಚಿ ಗ್ರಾಮದಲ್ಲಿ ಕಳೆದ ರಾತ್ರಿ ನಡೆದಿದೆ. ಅದರಗುಂಚಿ ಗ್ರಾಮದ ಗ್ರಾಮ ಆಡಳಿತ ಅಧಿಕಾರಿಯ ಮೇಲೆಯೇ ಹಲ್ಲೆ ಮಾಡಲಾಗಿದೆ.

ಅದರಗುಂಚಿ ಗ್ರಾಮ ಆಡಳಿತ ಅಧಿಕಾರಿ ಎಂದಿನಂತೆ ತಮ್ಮ ಚಾವಡಿಯಲ್ಲಿ ಭೂ ದಾಖಲೆಗಳಿಗೆ ಆಧಾರ ಕಾರ್ಡ್ ಸೀಡಿಂಗ್ ಕಾರ್ಯ ಮುಗಿಸಿ ಮನೆಗೆ ತೆರಳುತ್ತಿದ್ದರು. ಈ ಸಂದರ್ಭದಲ್ಲಿ ಚಾವಡಿ ಮುಂಭಾಗದಲ್ಲಿಯೇ ಇಬ್ಬರು ಯುವಕರು ಮದ್ಯಪಾನ ಮಾಡುತ್ತಿದ್ದರು. ಇದನ್ನು ಕಂಡ ಅಧಿಕಾರಿ ಗ್ರಾಮ ಆಡಳಿತ ಅಧಿಕಾರಿ ಕಚೇರಿ ಮುಂಭಾಗದಲ್ಲಿ ಮದ್ಯಪಾನ ಹಾಗೂ ಅನೈತಿಕ ಚಟುವಟಿಕೆ ನಡೆಸುವುದು ಅಪರಾಧ. ಹೀಗೆ



ಮಾಡಬೇಡಿ ಎಂದು ಬುದ್ಧಿವಾದ ಹೇಳಿದ್ದಾರೆ.

ಇಷ್ಟಕ್ಕೆ ಕೋಪಗೊಂಡ ಅದರಗುಂಚಿ ಗ್ರಾಮದ ಮಹಮ್ಮದ್ ಸಾಬ್ ನದಾಫ್ ಹಾಗೂ ಅವರ ಸಹೋದರ ಅಧಿಕಾರಿಗೆ ಅವಾಚ್ಯವಾಗಿ ನಿಂದಿಸಿ, ಬೈಕಿನ ಚಾವಿಯನ್ನು ತೆಗೆದುಕೊಂಡು ತಲೆ ಹಾಗೂ ಕಣ್ಣಿನ ಕೆಳಭಾಗಕ್ಕೆ ಗಾಯವಾಗುವಂತೆ ಥಳಿಸಿದ್ದಾರೆ ಎನ್ನುವ ಆರೋಪ ಕೇಳಿಬಂದಿದೆ. ಸಹೋದರರ ಹಲ್ಲೆಯಿಂದ ಗಾಯಗೊಂಡಿದ್ದ ಗ್ರಾಮ ಆಡಳಿತ ಅಧಿಕಾರಿಯನ್ನು ಸ್ಥಳೀಯರು ಕೂಡಲೇ ಕಿಮ್ಸ್ ಆಸ್ಪತ್ರೆಗೆ ರವಾನಿಸಿ ಚಿಕಿತ್ಸೆ ಕೊಡಿಸಿದ್ದಾರೆ.

ಈ ಕುರಿತು ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇನ್ನು ವಿಷಯ ತಿಳಿಯುತ್ತಿದ್ದಂತೆಯೇ ಹುಬ್ಬಳ್ಳಿ ಗ್ರಾಮೀಣ ತಹಶೀಲ್ದಾರ್ ಪ್ರಕಾಶ ನಾಶಿ ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಗಾಯಗೊಂಡ ಅಧಿಕಾರಿಯ ಆರೋಗ್ಯ ವಿಚಾರಿಸಿದ್ದಾರೆ.

# ಕನ್ನಡನಾಡು ಬಹುಸಂಸ್ಕೃತಿಯ ಸಮನ್ವಯದ ಬೀಡು: ಡಾ. ಪುರುಷೋತ್ತಮ ಬಿಳಿಮಲೆ

**ಕಲಬುರಗಿ, ಸೆ. 22:** ನಮ್ಮ ಕನ್ನಡ ನಾಡು ಧರ್ಮಾತೀತವಾಗಿದ್ದು, ಬಹು ಸಂಸ್ಕೃತಿಯ ಸಮನ್ವಯದ ಬೀಡಾಗಿದೆ. ಈಗಿನ ಮಕ್ಕಳಿಗೆ ಕನ್ನಡದ ಬಗ್ಗೆ ತಿಳಿಹೇಳಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಅಭಿಪ್ರಾಯ ಪಟ್ಟರು.

ನಗರದ ಶರಣಬಸವ ವಿಶ್ವವಿದ್ಯಾಲಯದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಶರಣಬಸವ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ವತಿಯಿಂದ ಆಯೋಜಿಸಿದ, ಕನ್ನಡ ಸಾಮರಸ್ಯದ ನೆಲೆಗಳು ಮಾಲಿಕೆಯ ಕರ್ನಾಟಕ ಬರಹಗಾರರಿಗೆ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮ ಆರಂಭಿಸಿದ ಮಾಲಿಕೆಗೆ ಮೊಟ್ಟಮೊದಲಿಗೆ ಒಳ್ಳೆಯ ಪ್ರತಿಕ್ರಿಯೆ ಬಂದಿದ್ದೇ ಕಲ್ಯಾಣ ಕರ್ನಾಟಕ ಭಾಗದಿಂದ, ಈ ಭಾಗದ ಕನ್ನಡದಲ್ಲಿ ಹಾಗೂ ಜೀವನದಲ್ಲಿ ಸಂಸ್ಕೃತಿ ತುಂಬಿಕೊಂಡಿದೆ. ಕನ್ನಡ ಭಾಷೆ ನಮ್ಮ ಭಾಷೆ ಎಂಬ ಹೆಮ್ಮೆ ಎಲ್ಲರಲ್ಲಿರಬೇಕು. ಕನ್ನಡದ ಬಹಳಷ್ಟು ವಿಷಯಗಳು ಪಠ್ಯಕ್ರಮದಲ್ಲಿ ಬಂದಿಲ್ಲ. ಕನ್ನಡವೆಂದರೆ ಬರೀ ಭಾಷೆಯಲ್ಲ ಅದೊಂದು ಸಂಸ್ಕೃತಿ. ಕರ್ನಾಟಕವು ಉತ್ತರ ಮತ್ತು ದಕ್ಷಿಣ ಭಾರತವನ್ನೊಳಗೊಂಡಿದ್ದು, ಹೀಗಾಗಿ ನಾವುಗಳು ಮೂರು ಸಂಸ್ಕೃತಿಗಳನ್ನು ಕಲಿತಿದ್ದೇವೆ.



ಹತ್ತನೇ ಶತಮಾನದಲ್ಲಿ ಕನ್ನಡದಲ್ಲಿ ಮಹಾಭಾರತವನ್ನು ಪರಿಚಯಿಸಿದ ಶ್ರೇಯಸ್ಸು ಪಂಪನಿಗೆ ಸಲ್ಲುತ್ತದೆ. ಬೌದ್ಧರು, ಜೈನರು ಕನ್ನಡಕ್ಕೆ ಸಂಸ್ಕೃತಿಯ ಮೂಲ ಕೊಟ್ಟಿದ್ದಾರೆ. ನಮ್ಮಲ್ಲಿ ಅನೇಕ ಆಚರಣೆಗಳುಂಟು, ಒಳ್ಳೆಯ ಕಾರ್ಯ ಶುರು ಮಾಡಲು ಗಣೇಶನಿಗೆ ಪೂಜೆ ಮಾಡಿ ಆರಂಭಿಸುವ ಪದ್ಧತಿ ಇದ್ದಾಗ, ಪ್ರಕಾಶಮಾನವಾದ ಜ್ಯೋತಿಯ ಮೂಲಕ ಆರಂಭ ಮಾಡುವ ಪದ್ಧತಿ ತಂದಿದ್ದು ಬೌದ್ಧರು. ಕರಾವಳಿ ಭಾಗ ಬಹು ಸಂಸ್ಕೃತಿಯ ನೆಲೆಬೀಡಾಗಿದೆ ಎಂದ ಅವರು, ಇದೇ ಸಮಯದಲ್ಲಿ ಕರ್ನಾಟಕದ ಮಸ್ಕಿಯಲ್ಲಿ ಅಭಿವೃದ್ಧಿಗೆಂದು 10 ಕೋಟಿ ನೀಡಿದ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಿಗೆ ಅಭಿನಂದಿಸಿದರು.

ಡಾ. ಬಿಳಿಮಲೆ ತಮ್ಮ ಮಾತುಗಳನ್ನು ಮುಂದುವರೆಸಿ ಕನ್ನಡ ದ್ವೇಷದ ಭಾಷೆಯಲ್ಲ ಅದು ಪ್ರೀತಿಯ ಭಾಷೆ. ಕನ್ನಡ ಕಥೆ, ಕಾದಂಬರಿ, ಕಾವ್ಯಗಳನ್ನು ಓದಿದರೆ ಮನುಷ್ಯನಲ್ಲಿ ಪ್ರೀತಿ ಬೆಳೆಯುತ್ತದೆ. ಯಾವಾಗಲೂ ಭಾಷೆಯ ಮೂಲಕ ಜನರಿಗೆ ಪ್ರೀತಿ ಹಂಚುತ್ತಿರುವವರು ಕನ್ನಡದವರು ಹಾಗೆಂದೇ ಕನ್ನಡಕ್ಕೆ ಎರಡು ಸಾವಿರ ವರ್ಷಗಳ ಇತಿಹಾಸವಿದೆ ಎಂದರು.

ಈ ಮಾಲಿಕೆಗೆ ಕಷ್ಟಪಟ್ಟು ಕೆಲಸ ಮಾಡಿದರೆ ಮುಖ್ಯ ಘಟ್ಟದ ಭಾಗವಾಗುತ್ತಿರಿ ಎಂದು ಕನ್ನಡ ಸಾಮರಸ್ಯದ ನೆಲೆಗಳು ಮಾಲಿಕೆಯ, ಕಲ್ಯಾಣ ಕರ್ನಾಟಕ ಬರಹಗಾರರಿಗೆ ಹಾಗೂ ಲೇಖಕರಿಗೆ ಕರೆ ನೀಡಿದರು. ಈಗಿನ ಕಾಲಘಟ್ಟದಲ್ಲಿ ಕನ್ನಡ ಶಾಲೆಗಳು ಮುಚ್ಚುತ್ತಿವೆ ಎಂದು ನೋವಿನಿಂದ ಹೇಳಿದ ಅವರು ಶರಣಬಸವ ವಿಶ್ವವಿದ್ಯಾಲಯ ಸೇರಿದಂತೆ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದಡಿಯಲ್ಲಿ ಬರುವ ಎಲ್ಲಾ ಸಂಸ್ಥೆಗಳು ಕನ್ನಡಕ್ಕಾಗಿ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದರು. ವೈದ್ಯರಿಗೆ ಕನ್ನಡದಲ್ಲಿ ಚೀಟಿ ಬರೆಯಲು ಬಹಳ ಸಲ ಮನವಿ ಮಾಡಿದ್ದಾಗಿದೆ ಆದರೂ ಆ ಕೆಲಸವಿನ್ನೂ ಆಗಿಲ್ಲವೆಂದು ಬೇಸರ ವ್ಯಕ್ತಪಡಿಸಿದ ಬಿಳಿಮಲೆ ಚೀಟಿಯಲ್ಲಿ ರೋಗಿಯ ಹೆಸರನ್ನಾದರೂ ಕನ್ನಡದಲ್ಲಿ ಬರೆಯಬೇಕೆಂದು ಮನವಿ ಮಾಡಿದರು.

ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲ ಕುಮಾರ ಬಿಡವೆ, ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಶರಣಬಸವ ವಿಶ್ವವಿದ್ಯಾಲಯವು ಎಲ್ಲಾ ರಂಗಗಳಲ್ಲಿಯೂ ಕನ್ನಡವನ್ನು ಎತ್ತಿ ಹಿಡಿಯುವ ಕೆಲಸ ಮಾಡುತ್ತಿದೆ. ಇಂದಿನ ದಿನಗಳಲ್ಲಿ ಖಾಸಗಿ ವಿಶ್ವವಿದ್ಯಾಲಯಗಳು ಬರೀ ಹಣ ಸಂಪಾದಿಸುವ ವಿಭಾಗಗಳ ಕಡೆ ಗಮನ ಕೊಡುತ್ತಿವೆ. ಆದರೆ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಪೂಜ್ಯ ಡಾ. ಶರಣಬಸಪ್ಪ ಅಪ್ಪಾಜಿಯವರು ಭಾಷಾ ನಿಕಾಯಗಳ ಮೇಲೆ ಹೆಚ್ಚಿನ ಒಲವು ತೋರಿಸಿದ್ದಾರೆ. ಆದ್ದರಿಂದ ಕನ್ನಡದ ಕಂಪು ಕಲ್ಯಾಣ ಕರ್ನಾಟಕ ಭಾಗದಲ್ಲಿ ನೆಲೆ ನಿಂತಿದೆ. ಇದರಿಂದ ಕನ್ನಡದಲ್ಲಿ ಸಾಹಿತ್ಯ ಮೂಡಿ ಬರುತ್ತಿದೆ. ಸಾಹಿತ್ಯವಿರದಿದ್ದರೆ ಮನುಷ್ಯರು ರಾಕ್ಷಸರಾಗುತ್ತಿದ್ದರು ಎಂದು ಡಾ. ಬಿಡವೆ ಒತ್ತಿ ಹೇಳಿದರು.


ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ತಮ್ಮ ನೇತೃತ್ವದ ನುಡಿಗಳಲ್ಲಿ, ನಾಡಿಗೆ ಕವಿರಾಜ್ಯ ಮಾರ್ಗ, ವಚನ ಸಾಹಿತ್ಯ ಕೊಟ್ಟಿದ್ದು ಕಲ್ಯಾಣ ಕರ್ನಾಟಕ ಭಾಗ. ನಿಜಾಮನ ಆಳ್ವಿಕೆಯಲ್ಲಿ ಲಿಂಗೈಕ್ಯ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು 1934ರಲ್ಲಿಯೇ ಕನ್ನಡ ಶಾಲೆ ತೆರೆದಿದ್ದರು ಅದು ಈಗ ಹೆಮ್ಮರವಾಗಿ ಬೆಳೆದಿದೆ. ಕಲ್ಯಾಣ ಕರ್ನಾಟಕ ಭಾಗ ನಾಡಿಗೆ ನೀಡಿದ ಕೊಡುಗೆಗಳನ್ನು ಮುಂದಿನ ಪೀಳಿಗೆಗೆ ತಿಳಿಹೇಳಬೇಕು ಹಾಗೂ ಈ ಭಾಗಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕೆಂದು ಮನವಿ ಮಾಡಿದರು.

ಒಂದನೇ ಗೋಷ್ಠಿಯಲ್ಲಿ ಮಾಲಿಕೆಯ ವಸ್ತು, ವಿನ್ಯಾಸ, ಭಾಷೆ, ಶೈಲಿ ಮತ್ತು ಆಶ್ರಯ ಕುರಿತು ಲೇಖಕರೊಂದಿಗೆ ಸಂವಾದ ನಡೆಯಿತು. ಎರಡನೇ ಗೋಷ್ಠಿಯಲ್ಲಿ ಸಾಮರಸ್ಯದ ನೆಲೆಗಳು ಮತ್ತು ಬರವಣಿಗೆಯ ಸವಾಲುಗಳು ಕುರಿತು ಲೇಖಕರೊಂದಿಗೆ ಸಂವಾದ ನಡೆಯಿತು. ಈ ಕಾರ್ಯಗಾರದಲ್ಲಿ ಕರ್ನಾಟಕದ 12 ಜಿಲ್ಲೆಗಳಿಂದ ಸುಮಾರು 50ಕ್ಕೂ ಹೆಚ್ಚು ಲೇಖಕರು ಪಾಲ್ಗೊಂಡಿದ್ದರು.

ಧರ್ಮಸ್ಥಳ 26ನೇ ವರ್ಷದ ಭಜನಾ ತರಬೇತಿ ಕಮ್ಮಟ ಉದ್ಘಾಟನೆ

# ಭಕ್ತರಿಗೆ ಕಲಿಯುಗದ ಕಲ್ಪವೃಕ್ಷ ಧರ್ಮಸ್ಥಳ ಭಕ್ತಿ ಇದ್ದಲ್ಲಿ ಮುಕ್ತಿ, ಮೋಕ್ಷ ಪ್ರಾಪ್ತಿ

**ಉಜಿರೆ, ಸೆ.22–** ಎಂಟು ಶತಮಾನಗಳಿಂದ ಅನ್ನದಾನ, ವಿದ್ಯಾದಾನ, ಅಭಯದಾನ ಮತ್ತು ಔಷಧಿ ದಾನದೊಂದಿಗೆ ಸರ್ವಧರ್ಮೀಯರ ಶ್ರದ್ಧಾ–ಭಕ್ತಿಯ ಹಾಗೂ ಸಾಮಾಜಿಕ ಸಾಮರಸ್ಯದ ಶ್ರದ್ಧಾಕೇಂದ್ರವಾಗಿ ಬೆಳೆಯುತ್ತಿರುವ, ಬೆಳಗುತ್ತಿರುವ ಪವಿತ್ರ ಕ್ಷೇತ್ರ ಧರ್ಮಸ್ಥಳವು ಭಕ್ತರಿಗೆ ಕಲಿಯುಗದ ಕಲ್ಪವೃಕ್ಷವಾಗಿದೆ. ಇಲ್ಲಿರುವ ಭಗವಾನ್ ಶ್ರೀ ಚಂದ್ರನಾಥಸ್ವಾಮಿ ಬಸದಿ, ಶ್ರೀ ಮಂಜುನಾಥ ಸ್ವಾಮಿ ದೇವಸ್ಥಾನ, ಬಾಹುಬಲಿ ಬೆಟ್ಟ, ಅಣ್ಣಪ್ಪಬೆಟ್ಟ, ಪ್ರಶಾಂತ ಪ್ರಾಕೃತಿಕ ಪರಿಸರ, ಪವಿತ್ರ ಪುಣ್ಯನದಿ ನೇತ್ರಾವತಿ ? ಎಲ್ಲವುಗಳ ದರ್ಶನ ಮಾಡಿದಾಗ ನಮ್ಮ ಮಾನಸಿಕ ದುಃಖ, ದುಮ್ಮಾನಗಳೆಲ್ಲ ದೂರವಾಗಿ ಶಾಂತಿ, ನೆಮ್ಮದಿ ಸಿಗುತ್ತದೆ. ಧರ್ಮಸ್ಥಳವು ಧಾರ್ಮಿಕ ಮತ್ತು ಆಧ್ಯಾತ್ಮಿಕ ಸಂಸ್ಕಾರದ ಪ್ರೇರಣೆ ಮತ್ತು ಸ್ಫೂರ್ತಿಯ ಕೇಂದ್ರವಾಗಿದೆ ಎಂದು ಮೂಡಬಿದ್ರೆ ಜೈನಮಠದ ಪೂಜ್ಯ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಹೇಳಿದರು.



ಅವರು ಭಾನುವಾರ ಧರ್ಮಸ್ಥಳದಲ್ಲಿ ಮಹೋತ್ಸವ ಸಭಾಭವನದಲ್ಲಿ 26 ನೆ ವರ್ಷದ ಭಜನಾ ತರಬೇತಿ ಕಮ್ಮಟವನ್ನು ಉದ್ಘಾಟಿಸಿ ಮಾತನಾಡಿದರು. ಭಜನೆ ಇದ್ದಲ್ಲಿ ವಿಭಜನೆ ಇರುವುದಿಲ್ಲ. ನೃತ್ಯಭಜನೆಯಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ವರ್ಧನೆಯಾಗುತ್ತದೆ. ಚಂಚಲವಾದ ಪಂಚೇಂದ್ರಿಯಗಳ ನಿಯಂತ್ರಣದೊಂದಿಗೆ ಪರಿಶುದ್ಧ ಮನಸ್ಸಿನಿಂದ ಭಜನೆ ಮಾಡಿದರೆ ಜನರೆಲ್ಲ ಜಿನರಾಗಬಹುದು. ಜನಾರ್ದನರೂ ಆಗಬಹುದು. ಭಜನೆಯಿಂದ ತೀರ್ಥಯಾತ್ರೆ ಮಾಡಿದಷ್ಟೆ ಪುಣ್ಯ ಸಂಚಯವಾಗುತ್ತದೆ. ಪ್ರತಿ ಮನೆಯಲ್ಲಿಯೂ ಭಜನೆ ಮಾಡಿದರೆ ಸತ್ಯ, ಧರ್ಮ, ನ್ಯಾಯ, ನೀತಿ, ಅಹಿಂಸೆಯ ನೆಲೆಯಲ್ಲಿ ಆರೋಗ್ಯ ಪೂರ್ಣ ಸಮಾಜ ನಿರ್ಮಾಣವಾಗುತ್ತದೆ. ಧರ್ಮಸ್ಥಳದ ಜ್ಞಾನ ದಾಸೋಹ ಕಾರ್ಯವೂ ಶ್ಲಾಘನೀಯವಾಗಿದ್ದು, ತಾವು ಪೂರ್ವಾಶ್ರಮದಲ್ಲಿ ಧರ್ಮಸ್ಥಳದಲ್ಲಿ ಲಕ್ಷದೀಪೋತ್ಸವ ಸಂದರ್ಭದಲ್ಲಿ ಆಯೋಜಿಸುವ ಸರ್ವಧರ್ಮ ಮತ್ತು ಸಾಹಿತ್ಯ ಸಮ್ಮೇಳನಗಳಲ್ಲಿ ಕಾರ್ಯಕ್ರಮಗಳನ್ನು ವೀಕ್ಷಿಸಿರುವುದನ್ನು ಧನ್ಯತೆಯಿಂದ ಸ್ಮರಿಸಿಕೊಂಡರು.

ರಾಷ್ಟ್ರಪತಿಗಳಿಂದ 'ರಾಜರ್ಷಿ' ಗೌರವ ಪಡೆದು, ಪ್ರಧಾನಿಯವರಿಂದಲೂ ವಿಶಿಷ್ಠ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ಪಡೆದಿರುವ ಬಗ್ಗೆ ಹೆಗ್ಗಡೆಯವರನ್ನು ಸ್ವಾಮೀಜಿಯವರು ಅಭಿನಂದಿಸಿದರು. ಅಧ್ಯಕ್ಷತೆ ವಹಿಸಿದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಮಾತನಾಡಿ, ಭಜನಾ ತರಬೇತಿ ಪಡೆದವರು ನಾಯಕತ್ವ, ಶಿಸ್ತು, ಸಂಯಮ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಆಯಾ ಊರಿನಲ್ಲಿ ಸಾಮಾಜಿಕ ಪರಿವರ್ತನೆ ಹಾಗೂ ಪ್ರಗತಿಯ ರೂವಾರಿಗಳಾಗಬೇಕು. ಉತ್ತಮ ಸಂಘಟಕರಾಗಿ ಆರೋಗ್ಯ ಪೂರ್ಣ ಸಮಾಜ ರೂಪಿಸಲು ಪ್ರಯತ್ನಿಸಬೇಕು ಎಂದು ಸಲಹೆ ನೀಡಿದರು.

ಬಾಲ್ಯದಲ್ಲಿ ತಮಗೆ ಮನೆಯಲ್ಲಿಯೆ ತಾಯಿ ರತ್ನಮ್ಮನವರಿಂದ ಜಪ, ಧ್ಯಾನ, ಭಜನೆ ಬಗ್ಗೆ ದೊರೆತ ಸಂಸ್ಕಾರ ಮತ್ತು ಮಾರ್ಗದರ್ಶನವನ್ನು ಸ್ಮರಿಸಿದರು. ಅಲ್ಲದೆ ಬೀಡಿನಲ್ಲೆ ಇದ್ದ ಗುರೂಜಿ (ಗುಣಪಾಲ) ಹಾಗೂ ಆಗಾಗ ಬರುತ್ತಿದ್ದ ಮಾರ್ನಾಡು ವರ್ಧಮಾನ ಹೆಗ್ಡೆ (ಮಾ.ವ. ಹೆಗ್ಡೆ) ಅವರ ಪ್ರೇರಣೆಯನ್ನೂ ಹೆಗ್ಗಡೆಯವರು ಸ್ಮರಿಸಿದರು.

ಮಾಣಿಲದ ಮೋಹನದಾಸ ಸ್ವಾಮೀಜಿ ಶುಭಾಶಂಸನೆ ಮಾಡಿದರು. ಹೇಮಾವತಿ ವೀ. ಹೆಗ್ಗಡೆ, ಡಿ. ಹರ್ಷೇಂದ್ರ ಕುಮಾರ್, ಸುಪ್ರಿಯಾ ಹರ್ಷೇಂದ್ರ ಕುಮಾರ್ ಉಪಸ್ಥಿತರಿದ್ದರು. ವರದಿ ಸಾದರಪಡಿಸಿದ ಭಜನಾ ಕಮ್ಮಟದ ಕಾರ್ಯದರ್ಶಿ ಎ.ವಿ. ಶೆಟ್ಟಿ, ಕಳೆದ 25 ತರಬೇತಿ ಕಮ್ಮಟಗಳಲ್ಲಿ 2725 ಭಜನಾ ಮಂಡಳಿಗಳ 5,450 ಮಂದಿಗೆ ತರಬೇತಿ ನೀಡಲಾಗಿದೆ. ರಾಜ್ಯದಲ್ಲಿ 5000 ಭಜನಾ ಮಂಡಳಿಗಳಿದ್ದು, ಒಂದು ಲಕ್ಷಕ್ಕೂ ಅಧಿಕ ಮಂದಿ ಭಜನೆಯಲ್ಲಿ ಪರಿಣತರಾಗಿದ್ದಾರೆ ಎಂದರು.

ಈ ಬಾರಿಯ ತರಬೇತಿ ಕಮ್ಮಟದಲ್ಲಿ ಹನ್ನೊಂದು ಜಿಲ್ಲೆಗಳಿಂದ 98 ಪುರುಷರು ಮತ್ತು 71 ಮಹಿಳೆಯರು ಸೇರಿದಂತೆ ಒಟ್ಟು 169 ಮಂದಿ ಭಾಗವಹಿಸುತ್ತಿದ್ದಾರೆ ಎಂದು ಅವರು ತಿಳಿಸಿದರು. ವಿದುಷಿ ಚೈತ್ರಾಭಟ್ ಧರ್ಮಸ್ಥಳ ಮತ್ತು ಬಳಗದವರ ನೃತ್ಯರೂಪಕದ ಮೂಲಕ ಪ್ರಾರ್ಥನೆ ಸಮಾರಂಭಕ್ಕೆ ವಿಶೇಷ ಮೆರುಗನ್ನು ನೀಡಿತು.

ಭಜನಾ ಕಮ್ಮಟದ ಸಂಚಾಲಕ ಸುಬ್ರಹ್ಮಣ್ಯ ಪ್ರಸಾದ್ ಸ್ವಾಗತಿಸಿದರು. ಶ್ರೀನಿವಾಸ ರಾವ್ ಧರ್ಮಸ್ಥಳ ಧನ್ಯವಾದವಿತ್ತರು. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕೃಷಿ ಅಧಿಕಾರಿ ರಾಮ್‌ಕುಮಾರ್ ಕಾರ್ಯಕ್ರಮ ನಿರ್ವಹಿಸಿದರು.

# ಕಲ್ಲುತೂರಾಟ ಮಾಡಿದ ಉಗ್ರರ ಬಿಡುಗಡೆ ಇಲ್ಲ; ಅಮಿತ್ ಶಾ ಖಡಕ್ ಎಚ್ಚರಿಕೆ

**ನವದೆಹಲಿ, ಸೆ.22–** ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆ ಪ್ರಚಾರಕ್ಕಾಗಿ ಮೂರು ದಿನಗಳ ಕಾಲ ಜಮ್ಮು ಮತ್ತು ಕಾಶ್ಮೀರದ ವಿವಿಧ ಭಾಗಗಳಲ್ಲಿ ಪ್ರಚಾರ ಮಾಡುತ್ತಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಭಾನುವಾರ ಕೂಡ ಪ್ರಚಾರ ಮುಂದುವರೆಸಿದ್ದಾರೆ.



ನೌಶೇರಾದಲ್ಲಿ ನಡೆದ ಚುನಾವಣಾ ರ‍್ಯಾಲಿಯಲ್ಲಿ ಮಾತನಾಡಿದ ಅವರು, ಜಮ್ಮು ಮತ್ತು ಕಾಶ್ಮೀರದಲ್ಲಿ ಯಾವುದೇ ಕಲ್ಲು ತೂರಾಟ ಮಾಡುವವರು ಮತ್ತು ಭಯೋತ್ಪಾದಕರನ್ನು ಬಿಡುಗಡೆ ಮಾಡುವುದಿಲ್ಲ, ಭಯೋತ್ಪಾದನೆಯನ್ನು ಬುಡಸಮೇತ ಕಿತ್ತು ಹಾಕುವವರೆಗೂ ಪಾಕಿಸ್ತಾನದ ಜೊತೆ ಯಾವುದೇ ಮಾತುಕತೆ ನಡೆಸುವುದಿಲ್ಲ ಎಂದು ಹೇಳಿದರು.

ಜಮ್ಮು ಮತ್ತು ಕಾಶ್ಮೀರ ಬಿಜೆಪಿ ಅಧ್ಯಕ್ಷ ರವೀಂದರ್ ರೈನಾ ಅವರನ್ನು ಬೆಂಬಲಿಸಿ ಚುನಾವಣಾ ರ‍್ಯಾಲಿ ನಡೆಸಿದರು. ಜಮ್ಮು ಮತ್ತು ಕಾಶ್ಮೀರದ ಯುವಕರ ಜೊತೆ ಮಾತನಾಡಲು ಬಯಸುತ್ತೇನೆ ಎಂದು ಹೇಳಿದ ಅವರು, ಯುವಕರನ್ನು ಸಿಂಹಗಳು ಎಂದು ಕರೆದರು.

ಎನ್ಸಿ ಮತ್ತು ಕಾಂಗ್ರೆಸ್ ಮೈತ್ರಿ ಪಕ್ಷಗಳು ಕಲ್ಲು ತೂರಾಟಗಾರರು ಮತ್ತು ಭಯೋತ್ಪಾದಕರನ್ನು ಬಿಡುಗಡೆ ಮಾಡಲು ಬಯಸುತ್ತಾರೆ. ಇದನ್ನೇ ಅವರು ಚುನಾವಣಾ ಪ್ರಣಾಳಿಕೆಯಲ್ಲಿ ಭರವಸೆ ಕೊಟ್ಟಿದ್ದಾರೆ. ಫಾರೂಕ್ ಅಬ್ದುಲ್ಲಾ ಅವರು ಜಮ್ಮು ಬೆಟ್ಟಗಳಲ್ಲಿ ಭಯೋತ್ಪಾದನೆಯ ಪುನರುಜ್ಜೀವನದ ಬಗ್ಗೆ ಮಾತನಾಡುತ್ತಿದ್ದಾರೆ ಆದರೆ ಆಡಳಿತದಲ್ಲಿರುವುದು ಮೋದಿ ಸರ್ಕಾರ ಮತ್ತು ನಾವು ಭಯೋತ್ಪಾದನೆಯನ್ನು ಬುಡಸಮೇತ ಕಿತ್ತುಹಾಕುತ್ತೇವೆ ಎಂದು ಅವರಿಗೆ ಹೇಳಲು ಬಯಸುತ್ತೇನೆ. ಭಯೋತ್ಪಾದಕರು ಅಥವಾ ಕಲ್ಲು ತೂರಾಟಗಾರನನ್ನು ಯಾವುದೇ ಕಾರಣಕ್ಕೂ ಬಿಡುಗಡೆ ಮಾಡುವುದಿಲ್ಲ ಎಂದು ಹೇಳಿದರು. ಪಾಕಿಸ್ತಾನದ ಜೊತೆ ಮಾತುಕತೆ ಇಲ್ಲ ಪಾಕಿಸ್ತಾನದ ಜೊತೆ ಮಾತುಕತೆ ನಡೆಸಲು ಎನ್ಸಿ ಮತ್ತು ಕಾಂಗ್ರೆಸ್ ಬೆಂಬಲ ನೀಡುತ್ತಿವೆ. ಆದರೆ ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವವರೆಗೆ ಪಾಕಿಸ್ತಾನದ ಜೊತೆ ಯಾವುದೇ ಮಾತುಕತೆ ನಡೆಸುವುದಿಲ್ಲ. ಫಾರೂಕ್ ಅಬ್ದುಲ್ಲಾ ಮತ್ತು ರಾಹುಲ್ ಗಾಂಧಿ ಇದನ್ನು ಅರ್ಥ ಮಾಡಿಕೊಳ್ಳಬೇಕು. ಜಮ್ಮು ಮತ್ತು ಕಾಶ್ಮೀರದ ಸಿಂಹಗಳೊಂದಿಗೆ (ಯುವಕರು) ಮಾತನಾಡುತ್ತೇನೆ ಆದರೆ ಪಾಕಿಸ್ತಾನದ ಜೊತೆ ಮಾತನಾಡುವುದಿಲ್ಲ ಎಂದರು.

ಗಡಿ ಭಾಗದ ನಿವಾಸಿಗಳ ಸುರಕ್ಷತೆಗಾಗಿ ಸರ್ಕಾರ ಹಲವು ವರ್ಷಗಳಿಂದ ಭೂಗತ ಬಂಕರ್‌ಗಳ ಬಗ್ಗೆ ಮಾತನಾಡಿದ ಅವರು, ಗಡಿಯಾಚೆಯಿಂದ ಗುಂಡಿನ ದಾಳಿ ನಡೆಸಲು ಯಾರಿಗೂ ಅಧಿಕಾರವಿಲ್ಲ, ಅಂತಹ ಬಂಕರ್ ಗಳನ್ನು ನಿರ್ಮಿಸುವ ಅಗತ್ಯವೂ ಇಲ್ಲ ಎಂದು ಹೇಳಿದರು. ಗಡಿಯಾಚೆಯಿಂದ ಗುಂಡು ಹಾರಿಸಿದರೆ ನಾವು ಶೆಲ್ ಮೂಲಕ ಉತ್ತರ ಕೊಡುತ್ತೇವೆ ಎಂದು ಹೇಳಿದರು. ಮೀಸಲಾತಿ ಕುರಿತಂತೆ ಎನ್ಸಿ ಮತ್ತು ಕಾಂಗ್ರೆಸ್ ನಾಯಕರ ಹೇಳಿಕೆಗಳನ್ನು ಟೀಕಿಸಿದ ಅವರು, ಪಹಾರಿಗಳು, ಗುಜ್ಜರ್‌ಗಳು, ದಲಿತರು, ಇತರ ಹಿಂದುಳಿದ ವರ್ಗಗಳಿಗೆ ಸಿಗುತ್ತಿರುವ ಮೀಸಲಾತಿಯನ್ನು ಮುಟ್ಟಲು ಯಾರಿಗೂ ಸಾಧ್ಯವಿಲ್ಲ ಎಂದು ಹೇಳಿದರು.



ದಾದ್ರಾ ಮತ್ತು ನಗರ ಹವೇಲಿಯ ಸಿಲ್ವಾಸ್ಸಾದಲ್ಲಿರುವ ಡೋಕ್ಮಾರ್ಡಿ ಸಭಾಂಗಣದಲ್ಲಿ ಭಾನುವಾರ ಆಯೋಜಿಸಲಾದ ಸಾರ್ವಜನಿಕ ಸಮಾರಂಭವನ್ನು ಉಪರಾಷ್ಟ್ರಪತಿ ಜಗದೀಪ್ ಧನಕರ್ ಉದ್ಘಾಟಿಸಿದರು.

# ಕಾಶ್ಮೀರದಿಂದ ಕರ್ನಾಟಕಕ್ಕೆ ಬರುತ್ತಿದ್ದ ವಿಶೇಷ ಸೇನಾ ರೈಲು ಸ್ಫೋಟಕ್ಕೆ ಯತ್ನ

**ಭೋಪಾಲ್, ಸೆ.22–** ಮಧ್ಯಪ್ರದೇಶದ ಬುರ್ಹಾನ್ಪುರ ಜಿಲ್ಲೆಯಲ್ಲಿ ಸೇನಾ ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ವಿಶೇಷ ರೈಲನ್ನು ಸ್ಫೋಟಿಸಲು ಯತ್ನಿಸಿರುವ ಘಟನೆ ನಡೆದಿದೆ.



ಸೇನೆಯ ವಿಶೇಷ ರೈಲು ಜಮ್ಮು–ಕಾಶ್ಮೀರದಿಂದ ಕರ್ನಾಟಕಕ್ಕೆ ತೆರಳುತ್ತಿದ್ದಾಗ ಸಗ್ಫಾಟ ರೈಲು ನಿಲ್ದಾಣದ ಬಳಿ ಸ್ಫೋಟಕ್ಕೆ ಯತ್ನ ನಡೆದಿದೆ. ಮಧ್ಯಪ್ರದೇಶದ ರೈಲ್ವೆ ಹಳಿಯಲ್ಲಿ ಕನಿಷ್ಠ 10 ಡಿಟೋನೇಟರ್‌ಗಳು ಹಾಗೂ ಗ್ಯಾಸ್ ಸಿಲಿಂಡರ್ ಪತ್ತೆಯಾಗಿವೆ ಎಂದು ಅಧಿಕಾರಿಗಳು ಇಂದು ತಿಳಿಸಿದ್ದಾರೆ.

ರೈಲು ಡಿಟೋನೇಟರ್‌ಗಳ ಮೇಲೆ ಹಾದು ಹೋಗುತ್ತಿದ್ದಂತೆ ಸ್ಫೋಟದಿಂದ ಲೋಕೋ ಪೈಲಟ್ ರೈಲನ್ನು ತಕ್ಷಣವೇ ನಿಲ್ಲಿಸಿದ್ದಾರೆ. ನಂತರ ಠಾಣಾಧಿಕಾರಿಗೆ ಮಾಹಿತಿ ನೀಡಿದರು. ಘಟನೆಯಲ್ಲಿ ಯಾರಿಗೂ ಹಾನಿಯಾಗಿಲ್ಲ. ಭಯೋತ್ಪಾದನಾ ನಿಗ್ರಹ ದಳ, ರಾಷ್ಟ್ರೀಯ ತನಿಖಾ ಸಂಸ್ಥೆ, ರೈಲ್ವೆ ಮತ್ತು ಸ್ಥಳೀಯ ಪೊಲೀಸರು ಘಟನೆಯ ಕುರಿತು ತನಿಖೆ ನಡೆಸುತ್ತಿದ್ದಾರೆ.

ಉತ್ತರ ಪ್ರದೇಶದ ಕಾನ್ಪುರದ ಪ್ರೇಂಪುರ್ ರೈಲು ನಿಲ್ದಾಣದ ಬಳಿ ಹಳಿಗಳ ಮೇಲೆ ಭಾನುವಾರ ಖಾಲಿ ಗ್ಯಾಸ್ ಸಿಲಿಂಡರ್‌ಗಳು ಪತ್ತೆಯಾಗಿವೆ. ಗೂಡ್ಸ್ ರೈಲು ಲೋಕೋ ಪೈಲಟ್ ರೈಲು ನಿಲ್ಲಿಸಲು ತುರ್ತು ಬ್ರೇಕ್ ಹಾಕಿ ನಿಲ್ಲಿಸಿದ್ದಾರೆ. ರೈಲು ಕಾನ್ಪುರದಿಂದ ಪ್ರಯಾಗ್‌ರಾಜ್ ತೆರಳುತ್ತಿದ್ದಾಗ ಬೆಳಗ್ಗೆ 8:10ಕ್ಕೆ ಈ ಘಟನೆ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ತಿಂಗಳಲ್ಲಿ ಉತ್ತರ ಪ್ರದೇಶದಲ್ಲಿ ನಡೆದ ಎರಡನೇ ಪ್ರಕರಣ ಇದಾಗಿದೆ. ಸೆಪ್ಟೆಂಬರ್ 8 ರಂದು, ಪ್ರಯಾಗರಾಜ್‌ನಿಂದ ಭಿವಾನಿ ಕಡೆಗೆ ಹೋಗುತ್ತಿದ್ದ ಕಾಳಿಂದಿ ಎಕ್ಸ್‌ಪ್ರೆಸ್‌ನ್ನು ಹಳಿಗಳ ಮೇಲೆ ಎಲ್‌ಪಿಜಿ ಸಿಲಿಂಡರ್ ಇರಿಸುವ ಮೂಲಕ ಹಳಿತಪ್ಪಿಸಲು ಪ್ರಯತ್ನಿಸಲಾಗಿತು.

# ಭಾರತದ ಜಿಡಿಪಿ ಶೇ.7ರಷ್ಟು ಪ್ರಗತಿ: ಡೆಲಾಯ್ಟ್

**ನವದೆಹಲಿ, ಸೆ.22–** ಜಾಗತಿಕ ಆರ್ಥಿಕತೆಯು ಮಂದಗತಿಯಲ್ಲಿದ್ದರೂ ಭಾರತದ ಆರ್ಥಿಕತೆ ಬೆಳವಣಿಗೆಗೆ ಯಾವುದೇ ಅಡ್ಡಿಯಾಗುವುದಿಲ್ಲ. 2024–25ನೇ ಆರ್ಥಿಕ ವರ್ಷದಲ್ಲಿ ಜಿಡಿಪಿಯು ಶೇ.7ರಷ್ಟು ಪ್ರಗತಿ ಕಾಣಲಿದೆ ಎಂದು ಡೆಲಾಯ್ಟ್‌ನ ದಕ್ಷಿಣ ಏಷ್ಯಾ ಸಿಇಒ ರೋಮಲ್ ಶೆಟ್ಟಿ ತಿಳಿಸಿದ್ದಾರೆ.




ದೇಶದಲ್ಲಿ ಚಿಲ್ಲರೆ ಹಣದುಬ್ಬರವು ನಿಯಂತ್ರಣದಲ್ಲಿದೆ. ಗ್ರಾಮೀಣ ಪ್ರದೇಶದಲ್ಲಿ ಬೇಡಿಕೆ ಹೆಚ್ಚಿದೆ. ವಾಹನಗಳ ಮಾರಾಟದಲ್ಲೂ ಸುಧಾರಣೆ ಕಂಡುಬಂದಿದೆ ಎಂದು ಪಿಟಿಐಗೆ ನೀಡಿರುವ ಸಂದರ್ಶನದಲ್ಲಿ ಅವರು ತಿಳಿಸಿದ್ದಾರೆ.

ಜಾಗತಿಕ ಅಡೆತಡೆ ನಡುವೆಯೂ ಆರ್ಥಿಕತೆ ಬೆಳವಣಿಗೆಯಲ್ಲಿ ಭಾರತದ ಸ್ಥಾನ ಉತ್ತಮವಾಗಿದೆ. ಆದರೆ, ಮಧ್ಯಪ್ರಾಚ್ಯ ಮತ್ತು ಉಕ್ರೇನ್ ಬಿಕ್ಕಟ್ಟು ಸೇರಿ ಪಶ್ಚಿಮ ಯುರೋಪ್, ಉತ್ತರ ಅಮೆರಿಕ ಮತ್ತು ಆಸ್ಟ್ರೇಲಿಯಾದಲ್ಲಿನ ಮಂದಗತಿಯ ಆರ್ಥಿಕತೆ ಬೆಳವಣಿಗೆಯು ಜಿಡಿಪಿ ಮೇಲೆ ಪರಿಣಾಮ ಬೀರಲಿದೆ ಎಂದು ಹೇಳಿದ್ದಾರೆ.

2025–26ನೇ ಆರ್ಥಿಕ ವರ್ಷದಲ್ಲಿ ಭಾರತದ ಜಿಡಿಪಿಯು ಶೇ.6.7ರಷ್ಟು ಪ್ರಗತಿ ಕಾಣಲಿದೆ ಎಂದು ಡೆಲಾಯ್ಟ್ ಅಂದಾಜಿಸಿದೆ. 2023–24ರಲ್ಲಿ ಜಿಡಿಪಿಯು ಶೇ.8.2ರಷ್ಟು ದಾಖಲಾಗಿದೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಆರ್ಥಿಕ ಸುಧಾರಣೆಗಳಿಗೆ ಒತ್ತು ನೀಡಿದೆ. ಸದ್ಯ ಭಾರತವು ಜಾಗತಿಕ ಮಟ್ಟದಲ್ಲಿ ಐದನೇ ಅತಿದೊಡ್ಡ ಆರ್ಥಿಕತೆಯಾಗಿದೆ. 2030ರೊಳಗೆ ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಎಂದು ಹೇಳಿದ್ದಾರೆ.

# ರಾಮಮಂದಿರ ಉದ್ಘಾಟನಾ ಸಮಾರಂಭಕ್ಕೆ ಹಸುವಿನ ಕೊಬ್ಬಿನಿಂದ ತಯಾರಿಸಿದ್ದ 1 ಲಕ್ಷ ತಿರುಪತಿ ಲಡ್ಡು

**ಉತ್ತರ ಪ್ರದೇಶ, ಸೆ.22–** ಅಯೋಧ್ಯೆ ರಾಮಮಂದಿರ ಉದ್ಘಾಟನೆಗೆ ಒಂದು ಲಕ್ಷ ತಿರುಪತಿ ಲಡ್ಡುಗಳನ್ನು ಕಳುಹಿಸಲಾಗಿತ್ತು. ಅವುಗಳಲ್ಲೂ ದನದ ಕೊಬ್ಬು, ಹಂದಿ ಕೊಬ್ಬು ಹಾಗೂ ಮೀನಿನ ಎಣ್ಣೆಯನ್ನು ಬಳಸಲಾಗಿದೆ ಎನ್ನುವ ಗಂಭೀರ ಆರೋಪವನ್ನು ಆಂಧ್ರಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ಹೇಳಿದ್ದು. ಇದು ಭಾರೀ ವಿವಾದ ಹಾಗೂ ಆಘಾತಕ್ಕೆ ಕಾರಣವಾಗಿದೆ. ರಾಮಮಂದಿರ ಶತಮಾನಗಳ ಕನಸು. ಈ ಕನಸನ್ನು ಹಿಂದೂಗಳು ಜತನದಿಂದ ಕಾಪಾಡಿಕೊಂಡು ಬಂದಿದ್ದೇವೆ. ಆದರೆ, ಈ ಹಿಂದಿನ ಸರ್ಕಾರ ದೇಶದ ಪ್ರತಿಷ್ಠಿತ ದೇವಸ್ಥಾನಗಳಲ್ಲಿ ಒಂದು ಹಾಗೂ ಕೋಟ್ಯಾಂತರ ಭಕ್ತಾಧಿಗಳು ಪೂಜೆ ಮಾಡುವ ಶ್ರೇಷ್ಠ ದೇವಸ್ಥಾನಗಳಲ್ಲಿ ಒಂದು ಎಂದು ಖ್ಯಾತಿ ಗಳಿಸಿರುವ ತಿರುಪತಿ ತಿರುಮಲ ದೇವಸ್ಥಾನದ ಪ್ರಸಾದವಾದ ಲಡ್ಡಿನಲ್ಲಿ ದನದ ಕೊಬ್ಬು, ಮೀನಿನ ಎಣ್ಣೆ ಹಾಗೂ ಹಂದಿ ಕೊಬ್ಬಿನ ಅಂಶವನ್ನು ಬಳಸಲಾಗಿದೆ ಎನ್ನುವ ಗಂಭೀರ ಆರೋಪ ಕೇಳಿ ಬಂದಿದ್ದು, ಈ ಬಗ್ಗೆ ಆಂಧ್ರಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಸಹ ಹೇಳಿದ್ದು, ಈ ವಿಚಾರ ಇದೀಗ ಗಂಭೀರ ಸ್ವರೂಪವನ್ನು ಪಡೆದುಕೊಂಡಿದೆ.



ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣ ಆಗಬೇಕು ಎನ್ನುವುದು ಹಿಂದೂಗಳ ಶತಮಾನದ ಕನಸು. ಈ ಕನಸನ್ನು ಈಡೇರಿಸಿಕೊಳ್ಳಲು ಹಿಂದೂಗಳ ಶತಮಾನಗಳಿಂದ ಹೋರಾಟವನ್ನೇ ಮಾಡಿದ್ದಾರೆ. ಆದರೆ, ಈಗ ಕೇಳಿ ಬರುತ್ತಿರುವ ಆರೋಪ ಜನರಲ್ಲಿ ಹಾಗೂ ರಾಮ ಭಕ್ತರಲ್ಲೂ ಆತಂಕ ಮೂಡಿಸಿದೆ. ಈ ಬಗ್ಗೆ ಮಾತನಾಡಿರುವ ಆಂಧ್ರಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು, ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣಕ್ಕಾಗಿ ನಾವು ಶತಮಾನಗಳಿಂದ ಹೋರಾಟ ಮಾಡುತ್ತಿದ್ದೇವೆ. ಆದರೆ, ಅಯೋಧ್ಯೆಯ ರಾಮಮಂದಿರಕ್ಕೂ ಇವರು (ಅಂದಿನ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ) 1 ಲಕ್ಷ ಲಡ್ಡುಗಳನ್ನು ಕಳುಹಿಸಿದ್ದು, ಅದಕ್ಕೂ ದನದ, ಹಂದಿ ಕೊಬ್ಬು ಹಾಗೂ ಮೀನಿನ ಎಣ್ಣೆಯಿಂದ ಮಿಶ್ರಣವಾಗಿರುವ ತುಪ್ಪವನ್ನು ಬಳಸಿಯೇ ತಯಾರಿಸಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ನಾವು ಅಯೋಧ್ಯೆಯ ರಾಮಮಂದಿರಕ್ಕಾಗಿ ಶತ ಶತಮಾನಗಳಿಂದ ಕಾಯುತ್ತಿದ್ದೇವು. ಅದಕ್ಕೂ ಇವರು ಈ ರೀತಿಯ ಲಡ್ಡುಗಳನ್ನು ಕಳುಹಿಸಿದ್ದಾರೆ. ಈ ದೇಶವೇ ಈ ವಿಷಯವನ್ನು ಕೇಳಿ ಬೆಚ್ಚಿ ಬಿದ್ದಿದ್ದಾರೆ ಎಂದು ಹೇಳಿದ್ದಾರೆ.

ಆಂಧ್ರಪ್ರದೇಶದ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರೇ ಬಹಿರಂಗ ವೇದಿಕೆಯಲ್ಲಿ ಈ ಹೇಳಿಕೆಯನ್ನು ನೀಡಿರುವುದು ಇದೀಗ ಭಾರೀ ಚರ್ಚೆಗೆ ಕಾರಣವಾಗಿದೆ.

ತಿರುಪತಿ ಲಡ್ಡು ವಿವಾದ

# ತಿಮ್ಮಪ್ಪನ ಕ್ಷಮೆ ಕೋರಿ 11 ದಿನಗಳ ಉಪವಾಸ ಕೈಗೊಂಡ ಪವನ್ ಕಲ್ಯಾಣ್

**ಅಮರಾವತಿ, ಸೆ.22–** ತಿರುಪತಿ ತಿರುಮಲ ದೇವಸ್ಥಾನದಲ್ಲಿ (ಟಿಟಿಡಿ) ಭಕ್ತರಿಗೆ ಪ್ರಸಾದವಾಗಿ ನೀಡಿದ ಲಡ್ಡುಗಳಲ್ಲಿ ಪ್ರಾಣಿಗಳ ಕೊಬ್ಬು ಮತ್ತು ಮೀನಿನ ಎಣ್ಣೆ ಇದೆ ಎಂಬುದು ದೃಢವಾಗಿರುವುದು ವರದಿಗಳಿಂದ ತಿಳಿದುಬಂದಿದೆ. ಈ ಬೆನ್ನಲ್ಲೇ ತಿರುಪತಿ ತಿಮ್ಮಪ್ಪನ ಕ್ಷಮೆ ಕೋರಿ ಆಂಧ್ರಪ್ರದೇಶ ಡಿಸಿಎಂ ಪವನ್ ಕಲ್ಯಾಣ್ ಇಂದಿನಿಂದ (ಸೆ.22) 11 ದಿನದ ಪ್ರಾಯಶ್ಚಿತ ದೀಕ್ಷೆ ಕೈಗೊಳ್ಳಲಿದ್ದಾರೆ.




ತಿರುಪತಿ ಲಡ್ಡು ವಿವಾದದ ಬಗ್ಗೆ ಎಕ್ಸ್‌ನಲ್ಲಿ ಪವನ್ ಕಲ್ಯಾಣ್ ಪ್ರತಿಕ್ರಿಯಿಸಿ, ತಿರುಪತಿ ಲಡ್ಡು ಅಂದರೆ ಅಮೃತಕ್ಕೆ ಸಮನಾಗಿ ನೋಡುತ್ತೇವೆ. ತಿರುಮಲ ಲಡ್ಡು ಪ್ರಸಾದ ಅಶುದ್ಧವಾಗಿದೆ. ಈ ಪಾಪವನ್ನು ಆರಂಭದಲ್ಲೇ ಪತ್ತೆ ಹಚ್ಚಲು ಸಾಧ್ಯವಾಗದಿರುವುದು ಹಿಂದೂ ಜನಾಂಗಕ್ಕೆ ಕಳಂಕ. ಲಡ್ಡು ಪ್ರಸಾದದಲ್ಲಿ ಪ್ರಾಣಿ ಕೊಬ್ಬು ಬೆರಸಿರುವುದು ಗೊತ್ತಾದ ಕ್ಷಣವೇ ಬೆಚ್ಚಿಬಿದ್ದೆ. ತಪ್ಪಿತಸ್ಥ ಎಂಬ ಭಾವನೆ, ಜನರ ಹಿತಕ್ಕಾಗಿ ಹೋರಾಟ ನಡೆಸುತ್ತಿರುವ ನನಗೆ ಆರಂಭದಲ್ಲಿ ಇಂತಹ ತೊಂದರೆಗಳು ಗಮನಕ್ಕೆ ಬಾರದಿರುವುದು ನೋವು ತಂದಿದೆ. ಸನಾತನ ಧರ್ಮವನ್ನು ನಂಬಿ ಆಚರಿಸುವ ಎಲ್ಲರೂ ಇದಕ್ಕೆ ತಕ್ಕ ಪ್ರಾಯಶ್ಚಿತ್ತವನ್ನು ಮಾಡಿಕೊಳ್ಳಬೇಕು ಎಂದಿದ್ದಾರೆ.

ಅದರ ಭಾಗವಾಗಿ ನಾನು ಪ್ರಾಯಶ್ಚಿತ್ತ ದೀಕ್ಷೆಯನ್ನು ಮಾಡುವ ಸಂಕಲ್ಪವನ್ನು ಕೈಗೊಂಡಿದ್ದೇನೆ. 22 ಸೆಪ್ಟೆಂಬರ್ 2024ರಂದು ಅಂದರೆ ಭಾನುವಾರದ ಬೆಳಗ್ಗೆ ಗುಂಟೂರು ಜಿಲ್ಲೆಯ ನಂಬೂರಿನಲ್ಲಿ ಶ್ರೀ ದಶಾವತಾರ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ದೀಕ್ಷೆಯನ್ನು ಕೈಗೊಳ್ಳುತ್ತಿದ್ದೇನೆ. ಅಂದಿನಿಂದ 11 ದಿನಗಳ ಕಾಲವು ದೀಕ್ಷೆಯನ್ನು ಮಾಡುತ್ತೇನೆ. ಬಳಿಕ ತಿರುಮಲಕ್ಕೆ ಭೇಟಿ ನೀಡುತ್ತೇನೆ ಎಂದು ತಿಳಿಸಿದರು.

ಇನ್ನೂ ಲಡ್ಡು ತಯಾರಿಯಲ್ಲಿ ಪ್ರಾಣಿಗಳ ಕೊಬ್ಬು ಬೆರೆಸಿದ ತುಪ್ಪವನ್ನು ಬಳಸಿದರೆಂಬ ವಿಚಾರವು ತಿಳಿದಾಗಿನಿಂದ ಎಲ್ಲರೂ ಕಂಗಾಲಾದರು. ಹಿಂದೂಧರ್ಮವನ್ನು ಅದರ ಸಂಸ್ಕೃತಿಯನ್ನು ಉದ್ಧರಿಸಬೇಕಾದ ಕಾಲವಿದು. ನಮ್ಮ ಧರ್ಮವನ್ನು ನಾವು ಕಾಪಾಡಿಕೊಳ್ಳಬೇಕಾದ ಕಾಲವಿದು. ನಮ್ಮ ಧರ್ಮವನ್ನು ನಾವು ಕಾಪಾಡಿಕೊಳ್ಳೋಣ ಎಂದಿದ್ದಾರೆ. ಸನಾತನ ಧರ್ಮದ ಮೇಲೆ ದಾಳಿ ನಡೆಸಿದವರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಪವನ್ ಕಲ್ಯಾಣ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಮಹಾರಾಷ್ಟ್ರ ಚುನಾವಣೆ: ಶಿವಾಜಿಯ ಈ ವಿಷಯದ ಬಗ್ಗೆಯೇ ಹೆಚ್ಚು ಚರ್ಚೆ

**ಮಹಾರಾಷ್ಟ್ರ, ಸೆ.22–** ಚುನಾವಣೆಗೆ ದಿನಗಣನೆ ಪ್ರಾರಂಭವಾಗಿದೆ. ಮಹಾರಾಷ್ಟ್ರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರಿಗೆ ವಿಶೇಷ ಸ್ಥಾನವಿದೆ. ರಾಜಕೀಯ, ಸಾಮಾಜಿಕ ವಿಷಯಗಳೊಂದಿಗೆ ಛತ್ರಪತಿ ಶಿವಾಜಿ ಮಹಾರಾಜರ ಬಗ್ಗೆ ಚರ್ಚೆಯಾಗುವುದು ಇದೆ. ಈ ಬಾರಿಯೂ ಛತ್ರಪತಿ ಶಿವಾಜಿ ಮಹಾರಾಜ ವಿಷಯ ಪ್ರಧಾನವಾಗಿ ಚರ್ಚೆಯಾಗುತ್ತಿದೆ. ಆದರೆ, ಈ ಬಾರಿ ಚರ್ಚೆ ಆಗುತ್ತಿರುವುದು ಪ್ರತಿಮೆ ಕುಸಿತದ ಬಗ್ಗೆ ಮಹಾರಾಷ್ಟ್ರದಲ್ಲಿ 35 ಅಡಿ ಎತ್ತರದ ಬೃಹತ್ ಶಿವಾಜಿ ಮಹಾರಾಜರ ಪ್ರತಿಮೆಯನ್ನು ನಿರ್ಮಾಣ ಮಾಡಲಾಗಿತ್ತು. ಈ ಪ್ರತಿಮೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟನೆ ಮಾಡಿದ್ದರು. ಆದರೆ, ವರ್ಷದ ಒಳಗಾಗಿ ಈ ಪ್ರತಿಮೆ ನೆಲಕಚ್ಚಿತ್ತು. ಮಹಾರಾಷ್ಟ್ರದ ಸಿಂಧುದುರ್ಗ ಜಿಲ್ಲೆಯಲ್ಲಿರುವ ರಾಜ್ಕೋಟ್‌ನಲ್ಲಿ 35 ಅಡಿ ಎತ್ತರದ ಛತ್ರಪತಿ ಶಿವಾಜಿ ಮಹಾರಾಜರ ಪ್ರತಿಮೆಯನ್ನು ನಿರ್ಮಾಣ ಮಾಡಲಾಗಿತ್ತು. ಅಲ್ಲದೇ ಈ ಪ್ರತಿಮೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರೇ ಉದ್ಘಾಟನೆ ಮಾಡಿದ್ದರು. ಆದರೆ, ವರ್ಷದ ಒಳಗಾಗಿ ಪ್ರತಿಮೆ ಕುಸಿದಿತ್ತು. ಪ್ರತಿಮೆ ಕುಸಿತ ಕಂಡಿದ್ದಕ್ಕೆ ಭಾರೀ ಆಕ್ರೋಶ ವ್ಯಕ್ತವಾಗಿತ್ತು.




ಅಲ್ಲದೇ ಇದಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಅವರೇ ಕ್ಷಮೆಯಾಚಿಸಿದ್ದರು. ಈ ಪ್ರತಿಮೆ ನಿರ್ಮಾಣ ಮಾಡಿದ ಗುತ್ತಿಗೆದಾರರಿಗೆ ನೋಟಿಸ್ ಜಾರಿ ಮಾಡಲಾಗಿತ್ತು. ಈ ವಿಷಯವನ್ನು ಮಹಾರಾಷ್ಟ್ರದ ವಿರೋಧ ಪಕ್ಷಗಳು ಅಸ್ತ್ರವನ್ನಾಗಿಸಿ ಕೊಂಡಿದ್ದು. ಮಹಾರಾಷ್ಟ್ರದ ಚುನಾವಣೆಯ ಸಂದರ್ಭದಲ್ಲಿ ಈ ವಿಷಯ ಗಂಭೀರವಾಗಿ ಚರ್ಚೆ ಯಾಗುತ್ತಿದೆ. ಶಿವಾಜಿ ಮಹಾರಾಜರಿಗೆ ಅವಮಾನ: ಜನ ಸಹಿಸಲ್ಲ ಈ ವಿಷಯವನ್ನು ಮಹಾರಾಷ್ಟ್ರದ ವಿರೋಧ ಪಕ್ಷಗಳು ಗಂಭೀರ ಹಂತಕ್ಕೆ ತೆಗೆದುಕೊಂಡು ಹೋಗಿವೆ. ಮಹಾ ರಾಷ್ಟ್ರದ ಜನ ಛತ್ರಪತಿ ಶಿವಾಜಿ ಮಹಾರಾಜರಿಗೆ ಅವಮಾನ ಮಾಡಿದರೆ ಸಹಿಸುವುದಿಲ್ಲ. ಜನರು ಈ ಘಟನೆಯನ್ನು ಕ್ಷಮಿಸುವುದು ಸಹ ಇಲ್ಲ ಎಂದು ಶಿವಸೇನೆಯ (ಯುಬಿಟಿ) ಮುಖ್ಯಸ್ಥರಾದ ಉದ್ಧವ್ ಠಾಕ್ರೆ ಹೇಳಿದ್ದರು. ಇದೀಗ ಚುನಾವಣೆಗೆ ದಿನಗಣನೆ ಪ್ರಾರಂಭವಾಗಿರುವಾಗಲೂ ವಿರೋಧ ಪಕ್ಷಗಳು ಈ ವಿಷಯವನ್ನು ಪ್ರಮುಖ ಅಸ್ತ್ರವನ್ನಾಗಿ ಇರಿಸಿಕೊಂಡಿವೆ.

ಶಿವಾಜಿ ಅವರ ಪ್ರತಿಮೆ ಕುಸಿದ ಬೆನ್ನಲ್ಲೇ ವಿಪಕ್ಷಗಳ ಒಕ್ಕೂಟ (ವಿರೋಧ ಪಕ್ಷಗಳು ಸಹ ಇಲ್ಲಿ ಮೈತ್ರಿ ಮಾಡಿಕೊಂಡಿವೆ) ಕಾಂಗ್ರೆಸ್, ಶಿವಸೇನೆ (ಉದ್ಧವ ಠಾಕ್ರೆ ಬಣ) ಹಾಗೂ ಎನ್ಸಿಪಿ (ಶರದ್ ಪವಾರ್ ಬಣ) ಮಹಾವಿಕಾಸ ಅಘಾಡಿ ನಾಯಕರು ಬೃಹತ್ ಪ್ರತಿಭಟನೆಯನ್ನು ನಡೆಸಿದ್ದರು. ಅಲ್ಲದೇ ಪ್ರತಿಭಟನೆಯ ಸಂದರ್ಭದಲ್ಲಿ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಹಾಗೂ ಶಿವಸೇನೆಯ ಮುಖ್ಯಸ್ಥ ಉದ್ಧವ್ ಠಾಕ್ರೆ ಅವರು, ಮಹಾರಾಷ್ಟ್ರದ ಮುಖ್ಯಮಂತ್ರಿ ಏಕನಾಥ ಶಿಂದೆ ಅವರ ಭಾವಚಿತ್ರಕ್ಕೆ ಶೂನಿಂದಲೂ ಸಹ ಹೊಡೆದು ಆಕ್ರೋಶ ವ್ಯಕ್ತಪಡಿಸಿದ್ದರು.

# ನಾನು ಕಳ್ಳನೋ ಅಲ್ಲವೋ ಎಂದು ಜನತಾ ನ್ಯಾಯಾಲಯ ತೀರ್ಮಾನಿಸಲಿ: ಕೇಜ್ರಿವಾಲ್

**ನವದೆಹಲಿ, ಸೆ.22–** ನನ್ನ ಪ್ರಕರಣ ಹತ್ತು ವರ್ಷಗಳವರೆಗೆ ಮುಂದುವರಿಯ ಬಹುದು ಎಂದು ನನ್ನ ವಕೀಲರು ಹೇಳಿದ್ದಾರೆ. ನಾನು ಈ ಕಳಂಕದೊಂದಿಗೆ ಬದುಕಲು ಸಾಧ್ಯವಿಲ್ಲ, ಹಾಗಾಗಿ ನಾನು ಜನರ ಎದುರು ಹೋಗಲು ಬಯಸುತ್ತೇನೆ ಎಂದು ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ.



ಜನತಾ ಕಿ ಅದಾಲತ್‌ನಲ್ಲಿ, ನಾನು ಅಪ್ರಾಮಾಣಿಕನಾಗಿದ್ದರೆ ಉಚಿತ ವಿದ್ಯುತ್‌ಗಾಗಿ ಮೂರು ಸಾವಿರ ಕೋಟಿಯನ್ನು ನೀಡುತ್ತಿರಲಿಲ್ಲ. ಹಾಗೆಯೇ ಮಕ್ಕಳಿಗೆ ಶಾಲೆಗಳನ್ನು ನಿರ್ಮಿಸುತ್ತಿರಲಿಲ್ಲ. 22 ರಾಜ್ಯಗಳಲ್ಲಿ ಅವರ ಸರ್ಕಾರವಿದೆ. ಆದರೆ ಎಲ್ಲಿಯೂ ವಿದ್ಯುತ್ ಉಚಿತವಿಲ್ಲ. ಮಹಿಳೆಯರಿಗೆ ಬಾಡಿಗೆಯನ್ನು ಉಚಿತವಾಗಿ ನೀಡುತ್ತಿಲ್ಲ. ಈಗ ನೀವೇ ಹೇಳಿ ಹಾಗಾದರೆ ಕಳ್ಳ ಯಾರು ಎಂದು. ಕೇಜ್ರಿವಾಲ್ ಕಳ್ಳನೋ ಅಥವಾ ಕೇಜ್ರಿವಾಲ್ ಅವರನ್ನು ಜೈಲಿಗೆ ಕಳುಹಿಸಿದವರು ಕಳ್ಳರೋ ನೀವೇ ತೀರ್ಮಾನಿಸಿ ಎಂದು ಸಭೆಯಲ್ಲಿ ಪ್ರಶ್ನೆ ಮಾಡಿದ್ದಾರೆ.

ಆರ್‌ಎಸ್‌ಎಸ್‌ನವರು ನಾವು ರಾಷ್ಟ್ರೀಯವಾದಿಗಳು ಮತ್ತು ದೇಶಭಕ್ತರು ಎಂದು ಹೇಳುತ್ತಾರೆ. ಗೌರವಯುತವಾಗಿ ಮೋಹನ್ ಭಾಗವತ್ ಅವರಿಗೆ ನಾನು ಐದು ಪ್ರಶ್ನೆಗಳನ್ನು ಕೇಳಲು ಬಯಸುತ್ತೇನೆ. ದೇಶಾದ್ಯಂತ ಸರ್ಕಾರಗಳನ್ನು ಆಮಿಷವೊಡ್ಡುವ ಮೂಲಕ ಮೋದಿ ಜಿ ಪಕ್ಷಗಳನ್ನು ಒಡೆಯುತ್ತಿರುವ ರೀತಿ ಮತ್ತು ಇಡಿ ಹಾಗೂ ಸಿಬಿಐ ಮೂಲಕ ಬೆದರಿಕೆ ಹಾಕುವ ರೀತಿ ಇದು ಸರಿಯೇ ಎಂದು ಕೇಳಿದ್ದಾರೆ.

ಮೋದಿ ಜಿ ಅವರು ಅತ್ಯಂತ ಭ್ರಷ್ಟ ನಾಯಕರನ್ನು ತಮ್ಮ ಪಕ್ಷಕ್ಕೆ ಸೇರಿಸಿಕೊಂಡಿದ್ದಾರೆ, ಅಂತಹ ರಾಜಕೀಯವನ್ನು ನೀವು ಒಪ್ಪುತ್ತೀರಾ ಬಿಜೆಪಿ ಆರ್‌ಎಸ್‌ಎಸ್ ಗರ್ಭದಿಂದ ಹುಟ್ಟಿದೆ. ಬಿಜೆಪಿ ದಾರಿ ತಪ್ಪದಂತೆ ನೋಡಿಕೊಳ್ಳುವುದು ಆರ್‌ಎಸ್‌ಎಸ್ ಜವಾಬ್ದಾರಿಯಾಗಿದೆ ಎಂದು ಬಿಜೆಪಿ ವಿರುದ್ಧ ಗುಡುಗಿದರು.

## ಇರಾನ್‌ನ ಕಲ್ಲಿದ್ದಲು ಗಣಿಯಲ್ಲಿ ಸ್ಫೋಟ: 50ಕ್ಕೂ ಹೆಚ್ಚು ಮಂದಿ ಸಾವು



**ತೆಹ್ರಾನ್, ಸೆ. 22 :** ಪೂರ್ವ ಇರಾನ್ನ ಕಲ್ಲಿದ್ದಲು ಗಣಿಯೊಂದರಲ್ಲಿ ಸ್ಫೋಟ ಸಂಭವಿಸಿ ಕನಿಷ್ಠ 50ಕ್ಕೂ ಹೆಚ್ಚು ಜನರು ಮೃತಪಟ್ಟು, 20 ಮಂದಿ ಗಾಯಗೊಂಡಿದ್ದಾರೆ. ತೆಹ್ರಾನ್ ರಾಜಧಾನಿಯ ಆಗ್ನೇಯ ಭಾಗಕ್ಕೆ 540 ಕಿ.ಮೀ. ದೂರದಲ್ಲಿರುವ ತಬಾಸ್ ಎಂಬಲ್ಲಿನ ಕಲ್ಲಿದ್ದಲು ಗಣಿಯಲ್ಲಿ ಮಿಥೇನ್ ಅನಿಲ ಸೋರಿಕೆಯಿಂದಾಗಿ ಈ ದುರ್ಘಟನೆ ಸಂಭವಿಸಿದ್ದು, ಗಣಿಯಲ್ಲಿ 18 ಕಾರ್ಮಿಕರು ಸಿಲುಕಿರಬಹುದು ಎನ್ನಲಾಗಿದೆ.

ಶನಿವಾರ ಸ್ಫೋಟ ಸಂಭವಿಸಿದ ಬಳಿಕ ಅಧಿಕಾರಿಗಳು ತುರ್ತು ರಕ್ಷಣಾ ಸಿಬ್ಬಂದಿಯನ್ನು ಸ್ಥಳಕ್ಕೆ ಕಳುಹಿಸಿದ್ದು, ಸ್ಫೋಟದ ವೇಳೆ ಸುಮಾರು 80 ಮಂದಿ ಅಲ್ಲಿ ಕೆಲಸ ಮಾಡುತ್ತಿದ್ದರು. 700 ಮೀಟರ್ ಆಳದಲ್ಲಿರುವ ಸುರಂಗದಲ್ಲಿ 18 ಮಂದಿ ಸಿಲುಕಿದ್ದಾರೆ ಎಂದು ಮಾಧ್ಯಮದ ವರದಿ ತಿಳಿಸಿದೆ.

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಪಾಲ್ಗೊಳ್ಳಲು ನ್ಯೂಯಾರ್ಕ್ಗೆ ತೆರಳಲು ಸಿದ್ಧವಾಗುತ್ತಿದ್ದ ಇರಾನಿನ ಹೊಸ ಸುಧಾರಣಾವಾದಿ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಅವರು, ಗಣಿಯಲ್ಲಿ ಸಿಲುಕಿರುವವರನ್ನು ರಕ್ಷಿಸಿ ಹೊರತರಲು ಹಾಗೂ ಅವರ ಕುಟುಂಬಗಳಿಗೆ ನೆರವಾಗಲು ಕ್ರಮ ಕೈಗೊಳ್ಳುವಂತೆ ಆದೇಶಿಸಿದ್ದೇನೆ. ಸ್ಫೋಟದ ಕುರಿತು ತನಿಖೆ ಶುರುವಾಗಿದೆ ಎಂದು ತಿಳಿಸಿದ್ದಾರೆ.

ಸಾಕಷ್ಟು ಖನಿಜ ಸಂಪತ್ತು ಹೊಂದಿರುವ ಇರಾನ್ ವಾರ್ಷಿಕವಾಗಿ 35 ಲಕ್ಷ ಟನ್ ಕಲ್ಲಿದ್ದಲ್ಲನ್ನು ಬಳಸುತ್ತದೆ. ಅದರಲ್ಲಿ 18 ಲಕ್ಷ ಟನ್ ಕಲ್ಲಿದ್ದನ್ನು ತನ್ನ ಗಣಿಯಿಂದ ತೆಗೆಯುವ ಇರಾನ್, ಉಳಿದದ್ದನ್ನು ಆಮದುಕೊಂಡು ದೇಶದ ಉಕ್ಕಿನ ಕಾರ್ಖಾನೆಗಳಲ್ಲಿ ಬಳಸಿಕೊಳ್ಳುತ್ತಿದೆ.

ಈ ಹಿಂದೆಯೂ ಇರಾನ್ ಗಣಿ ಉದ್ಯಮದಲ್ಲಿ ಅನಾಹುತಗಳು ಸಂಭವಿಸಿದ್ದವು. 2013ರಲ್ಲಿ 11 ಕಾರ್ಮಿಕರು ಎರಡು ಪ್ರತ್ಯೇಕ ಘಟನೆಗಳಲ್ಲಿ ಮೃತಪಟ್ಟಿದ್ದರು. 2009ರಲ್ಲಿ ವಿವಿಧ ಘಟನೆಗಳಲ್ಲಿ 20 ಕಾರ್ಮಿಕರು ಮೃತಪಟ್ಟಿದ್ದರು.

2017ರಲ್ಲಿ ನಡೆದ ಗಣಿ ಸ್ಫೋಟದಲ್ಲಿ ಕನಿಷ್ಠ 42 ಮಂದಿ ಮೃತಪಟ್ಟಿದ್ದರು. ಗಣಿಗಳಲ್ಲಿ ಸುರಕ್ಷತಾ ಕ್ರಮಗಳ ಕೊರತೆ ಮತ್ತು ಅಸಮರ್ಪಕ ತುರ್ತು ಸೇವೆಗಳಿಂದಾಗಿ ಈ ಸಾವುಗಳು ಸಂಭವಿಸುತ್ತಿವೆ ಎಂದು ಆರೋಪಿಸಲಾಗುತ್ತಿದೆ.

## ಬೈಡನ್‌ಗೆ ಪುರಾತನ ರೈಲಿನ ಮಾದರಿ ಬಹುಮಾನ ಕೊಟ್ಟ ಪ್ರಧಾನಿ ಮೋದಿ




**ವಾಷಿಂಗ್ಟನ್, ಸೆ. 22 :** ಮೂರು ದಿನಗಳ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿಯವರು ಇಂದು ಅಮೆರಿಕ ಅಧ್ಯಕ್ಷ ಜೋ ಬೈಡನ್‌ಗೆ ಒಂದು ವಿಶೇಷ ಉಡುಗೊರೆಯನ್ನು ನೀಡಿದ್ದಾರೆ. ಮೋದಿಯವರು ಬೈಡನ್‌ಗೆ ಬೆಳ್ಳಿಯಿಂದ ತಯಾರಿಸಲಾದ ಪುರಾತನ ರೈಲಿನ ಮಾದರಿಯನ್ನು ಉಡುಗೊರೆಯಾಗಿ ನೀಡಿದ್ದಾರೆ.

ಜೊತೆಗೆ ಬೈಡನ್ ಪತ್ನಿ ಜಿಲ್ ಬೈಡನ್‌ಗೆ ಪಶ್ಮಿನಾ ಶಾಲ್‌ನ್ನು ಗಿಫ್ಟ್ ಮಾಡಿದ್ದಾರೆ. ಮೋದಿ ನೀಡಿದ ಉಡುಗೊರೆಯನ್ನು ಕಂಡು ದಂಪತಿ ಸಂತಸಪಟ್ಟಿದ್ದಾರೆ. ರೈಲು ಮಾದರಿಯ ಉಡುಗೊರೆಯನ್ನು ಮಹಾರಾಷ್ಟ್ರ ಮೂಲದ ಕುಶಲಕರ್ಮಿಯೊಬ್ಬರು ನಿರ್ಮಿಸಿದ್ದು, ಇದಕ್ಕೆ 92.5%ರಷ್ಟು ಬೆಳ್ಳಿಯನ್ನು ಬಳಸಲಾಗಿದೆ ಎಂದು ತಿಳಿದು ಬಂದಿದೆ. ಇನ್ನು ಜೋ ಬೈಡನ್ ಹುಟ್ಟೂರಾದ ದೆಲವಾರೆಯಲ್ಲಿಯೇ ಸದ್ಯ ಕ್ವಾಡ್ ಸಮಿತಿ ನಡೆಯುತ್ತಿರುವುದರಿಂದ ರೈಲಿನ ಮಾಡಲ್ ಮೇಲೆ ದೆಹಲಿ ಟು ದೆಲವಾರೆ ಎಂದು ಕೂಡ ಕೆತ್ತಲಾಗಿದೆ.

ಬೈಡನ್ ಪತ್ನಿಗೆ ಪಪೀರ್ ಪಾಶ್ಮೀನಾ ಶಾಲ್‌ನ್ನು ಮೋದಿ ಉಡುಗೊರೆಯಾಗಿ ನೀಡಿದ್ದಾರೆ. ಜಮ್ಮು ಕಾಶ್ಮೀರದಲ್ಲಿ ಸಿದ್ಧಗೊಳ್ಳುವ ಈ ಶಾಲ್ ತನ್ನದೆ ಆದ ವಿಶೇಷತೆಯನ್ನು ಹೊಂದಿದೆ.

## ಇಸ್ರೇಲ್ ವೈಮಾನಿಕ ದಾಳಿ, 13 ಮಕ್ಕಳು ಸೇರಿ 22 ಮಂದಿ ಬಲಿ



**ಗಾಜಾ, ಸೆ. 22 :** ಶಾಲೆಯೊಂದರ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ 13 ಮಕ್ಕಳು ಸೇರಿದಂತೆ ಕನಿಷ್ಠ 22 ಜನ ಸಾವನ್ನಪ್ಪಿದ್ದಾರೆ ಎಂದು ಗಾಜಾ ಆರೋಗ್ಯ ಸಚಿವಾಲಯ ತಿಳಿಸಿದೆ. ಹತ್ಯೆಗೀಡಾದವರಲ್ಲಿ 13 ಮಕ್ಕಳು, ಆರು ಮಹಿಳೆಯರು ಮತ್ತು ಮೂರು ತಿಂಗಳ ಮಗು ಸೇರಿದ್ದಾರೆ ಎಂದು ಗಾಜಾ ಸರ್ಕಾರಿ ಮಾಧ್ಯಮ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ. ಈ ದಾಳಿಯನ್ನು ಭಯಾನಕ ಹತ್ಯಾಕಾಂಡ ಎಂದು ಗಾಜಾ ಟೀಕಿಸಿದೆ. ದಾಳಿಯಲ್ಲಿ ಕನಿಷ್ಠ 30 ಜನ ಗಾಯಗೊಂಡಿದ್ದಾರೆ, ಹಲವಾರು ಜನ ತೀವ್ರ ಸುಟ್ಟಗಾಯಗಳಿಂದ ಬಳಲುತ್ತಿದ್ದಾರೆ ಎಂದು ಸಚಿವಾಲಯ ಹೇಳಿದೆ. ಅಲ್ಲದೆ ಇನ್ನೂ ಇಬ್ಬರು ನಾಪತ್ತೆಯಾಗಿದ್ದಾರೆ ಎಂದು ಸಚಿವಾಲಯ ಹೇಳಿದೆ. ಆದರೆ ಹಮಾಸ್ನ "ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್ ಅನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ ಎಂದು ಇಸ್ರೇಲಿ ಸೇನೆ ಹೇಳಿದೆ.

ಇದು ಹಿಂದೆ ಶಾಲೆಯಾಗಿ ಕಾರ್ಯನಿರ್ವಹಿಸುತ್ತಿದ್ದ ಕಾಂಪೌಂಡ್ನೊಳಗೆ ಯುದ್ಧಸಾಮಗ್ರಿಗಳ ಬಳಕೆ ಮತ್ತು ವೈಮಾನಿಕ ಕಣ್ಗಾವಲು ನಡೆಸಲಾಗುತ್ತಿತ್ತು. ಹಮಾಸ್ ಭಯೋತ್ಪಾದಕ ಸಂಘಟನೆಯು ಶಾಲೆಯಲ್ಲಿ ಕಲ್ಪಿಸಲಾಗಿರುವ ಮೂಲಸೌಕರ್ಯಗಳನ್ನು ಮಿಲಿಟರಿ ಉದ್ದೇಶಕ್ಕೆ ಬಳಸುವುದನ್ನು ಮುಂದುವರಿಸಿತ್ತು ಎಂದು ಇಸ್ರೇಲ್ ಸೇನೆ ಸ್ಪಷ್ಟಪಡಿಸಿದೆ.




Veerasaiva Vidyavardhaka Sangha's
**Rao Bahadur Y. Mahabaleshwarappa Engineering College, Ballari.**
ESTD 1980
44 YEARS EXCELLENCE
(Affiliated to VTU, Belagavi and Approved by AICTE, New Delhi)
Accredited by NAAC with A+ Grade. Accredited by NBA, New Delhi

A place for quality education & excellent placement



VTU STATE RANK HOLDERS 2023–24
STATE 1st RANK — 3VC21MPM03 CHAITHRA .K, M.Tech Production Management
STATE 9th RANK — 3VC19EE023 K. SANTHOSH KUMAR, Dept. of EEE

**ADMISSIONS OPEN**
Hurry up! Few Seats available in Management Quota

**CET Code: E045**

India's best Engineering institute-2024 graded as AA+ by careers 360

A+ NAAC | NBA NATIONAL BOARD of ACCREDITATION | AICTE | INSTITUTION'S INNOVATION COUNCIL

THE TIMES OF INDIA
Times all India Engineering Institutes Ranking Survey 2022

**COMEDK Code: E102**

### Programmes Offered

| Under Graduate Courses (B.E) | Intake | Estd., |
|---|---|---|
| Civil Engineering | 60 | 1980 |
| Mechanical Engineering | 120 | 1980 |
| Electrical & Electronic Engineering | 120 | 1983 |
| Electronics & Communication Engineering | 120 | 1983 |
| Computer Science & Engineering | 180 | 1987 |
| Information Science & Engineering | 120 | 2000 |
| CSE-Artificial Intelligence & Machine Learning | 120 | 2021 |
| CSE-Data Science | 60 | 2022 |
| **Post Graduate Courses** | **Intake** | **Estd.,** |
| Master of Business Administration | 60 | 2006 |
| M.Tech in Comp. Science & Engineering | 18 | 2011 |
| M.Tech in Production Management | 18 | 2012 |
| M.Tech in VLSI Design & Embedded System | 18 | 2013 |
| M.Tech in Structural Engineering | 18 | 2013 |
| Master of Computer Application | 60 | 2024 |

**Research Centres**
Comp. Science & Engineering, Mechanical Engineering, E & CE, Civil engineering, EEE, Physics, MBA, Maths.

**1644 students placed from 2022–24 still in progress**

**Sri. Allum Gurubasavaraj,** President, V.V. Sangha, Ballari | **Sri Janekunte Basavaraj,** Vice President, V.V. Sangha & Chairman, GC, RYMEC, Ballari | **Dr. Arvind Patel,** Secretary, V.V. Sangha, Ballari | **Sri Meti Pampanagouda,** Asst Secretary, V.V. Sangha, Ballari | **Sri Byluvaddigeri Yerriswamy,** Treasurer, V.V. Sangha, Ballari **and RYMEC GB Members**

**FOR ADMISSIONS CONTACT**
Dr T. Hanumantha Reddy, Principal, 9448043949 | Dr Savita Sonoli, Vice Principal 9343553487 | Gadilingana Gouda, Admission Section 8861125550

**Cantonment, Ballari–583104. Karnataka. Ph: 08392–244809, Telefax: 08392–242148**
**website: www.rymec.edu.in e-mail: principalrymec@gmail.com**





**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

ರಾಷ್ಟ್ರೀಯ ಆರೋಗ್ಯ ಅಭಿಯಾನ | ಕರ್ನಾಟಕ ಸರ್ಕಾರ | ಸಾರಿಗೆ ಇಲಾಖೆ TRANSPORT DEPARTMENT

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ**
**ಸಾರಿಗೆ ಇಲಾಖೆ**
**ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ**



**ಶ್ರೀ ಡಿ. ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ


## ಶ್ರೀ ಸಿದ್ದರಾಮಯ್ಯ ಸನ್ಮಾನ್ಯ ಮುಖ್ಯಮಂತ್ರಿಗಳು ಅವರಿಂದ "ಮುಖ್ಯಮಂತ್ರಿಗಳ ಆಪತ್ಕಾಲಯಾನ ಸೇವೆ" ಯ ನೂತನ 65 ಆಂಬ್ಯುಲೆನ್ಸ್‌ಗಳ ಲೋಕಾರ್ಪಣೆ ಕಾರ್ಯಕ್ರಮ

"ಸುರಕ್ಷಿತ ರಸ್ತೆ ಸಂಚಾರ - ಶೂನ್ಯ ಅಪಘಾತದತ್ತ ನಮ್ಮ ಹೆಜ್ಜೆ"

ದಿನಾಂಕ: 23.09.2024 | ಸಮಯ: 11.00 AM | ಸ್ಥಳ: ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮುಂಭಾಗ, ಪೂರ್ವ ದ್ವಾರ

### ಮುಖ್ಯಮಂತ್ರಿಗಳ ಆಪತ್ಕಾಲಯಾನ ಸೇವೆಯ ಪ್ರಮುಖ ಅಂಶಗಳು :

- ರಸ್ತೆ ಅಪಘಾತದ ಗಾಯಾಳುಗಳಿಗೆ "ಸುವರ್ಣ ಸಮಯಾವಧಿ"ಯಲ್ಲಿ (Golden hour) ಚಿಕಿತ್ಸೆಗೆ ನೆರವಾಗಲು ನೂತನ **65 ಆಂಬ್ಯುಲೆನ್ಸ್‌ಗಳ ಲೋಕಾರ್ಪಣೆ.**
- ಅಪಘಾತಗಳ ನಿಯಂತ್ರಣ ಹಾಗೂ ರಸ್ತೆ ಸುರಕ್ಷತಾ ಕ್ರಮಗಳಿಗಾಗಿ, ಕರ್ನಾಟಕ ರಸ್ತೆ ಸುರಕ್ಷತಾ ಪ್ರಾಧಿಕಾರದ ನಿಧಿಯಿಂದ 2024-25ನೇ ಸಾಲಿನಲ್ಲಿ **₹45 ಕೋಟಿ** ಅನುದಾನ.
- ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಗೃಹ, ಸಾರಿಗೆ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಶಿಕ್ಷಣ ಇಲಾಖೆಯ **ಜಂಟಿ ಸಹಯೋಗ**
- ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಸನಿಹದಲ್ಲಿರುವ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ **ಆಂಬ್ಯುಲೆನ್ಸ್ ನಿಯೋಜನೆ**
- ತುರ್ತು ಸೇವೆ ಹಾಗೂ ಚಿಕಿತ್ಸೆ ಒದಗಿಸಲು ಅಗತ್ಯ ವೈದ್ಯಕೀಯ ಸಲಕರಣೆಗಳನ್ನು ಒಳಗೊಂಡ **ಆಂಬ್ಯುಲೆನ್ಸ್ ಸೇವೆಯು ಸಂಪೂರ್ಣ ಉಚಿತ**









**ಶ್ರೀ ದಿನೇಶ್ ಗುಂಡೂರಾವ್,** ಮಾನ್ಯ ಆರೋಗ್ಯ ಸಚಿವರು
**ಶ್ರೀ ರಾಮಲಿಂಗ ರೆಡ್ಡಿ,** ಸಾರಿಗೆ ಇಲಾಖೆಯ ಸಚಿವರು
ಇಲಾಖಾ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು

"ದೇಶದ ಕಾಡು, ವನ್ಯಜೀವಿ, ನದಿಗಳು ಒಳಗೊಂಡಂತೆ ಪರಿಸರ ಉಳಿಸಿ ಬೆಳೆಸುವುದು" – ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

ನಿಮ್ಮ ಆರೋಗ್ಯ, ನಮ್ಮ ಬದ್ಧತೆ.